ಬೆಂಗಳೂರು ಸಂಪುಟ: 16 ಸಂಚಿಕೆ: 55 ಪುಟ: 06 ಮಂಗಳವಾರ 21-01-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಸದ್ದಿಲ್ಲದೇ ಮದುವೆಯಾದ ನೀರಜ್

1 ವರ್ಷ ಹಾಡಲು, ಮಾತನಾಡಲು ಆಗುತ್ತಿರಲಿಲ್ಲ

'ನಿದ್ದೆ'ಗೆ ಜಾರಬೇಡಿ ಪುಟ 6

## ರಾಜ್ಯ ಬಿಜೆಪಿಯಲ್ಲಿನ ಬಣ ಬಡಿದಾಟವನ್ನು ಅಂತ್ಯಗೊಳಿಸಲು ಮುಂದಾಗಿರುವ ಹೈಕಮಾಂಡ್

# ಬಿಜೆಪಿಯ ಮಹತ್ವದ ಸಭೆ

**ಬೆಂಗಳೂರು:** ರಾಜ್ಯ ಬಿಜೆಪಿ ಉಸ್ತುವಾರಿ ಹಾಗೂ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾಮೋಹನ್‌ದಾಸ್ ಅಗರ್‌ವಾಲ್ ಬೆಂಗಳೂರಿನಲ್ಲಿಂದು ಈ ಮಹತ್ವದ ಸಭೆಗಳಲ್ಲಿ ಭಾಗಿಯಾಗಿ ಎಲ್ಲರ ಅಭಿಪ್ರಾಯಗಳನ್ನು ಸಂಗ್ರಹಿಸಿದರು.

ರಾಜ್ಯ ಬಿಜೆಪಿಯುಲ್ಲಿನ ಬಣ ಬಡಿದಾಟವನ್ನು ಅಂತ್ಯಗೊಳಿಸಲು ಮುಂದಾಗಿರುವ ಹೈಕಮಾಂಡ್, ಇದರ ಜತೆಗೆ ರಾಜ್ಯ ಬಿಜೆಪಿಯ ನೂತನ ರಾಜ್ಯಾಧ್ಯಕ್ಷರ ಆಯ್ಕೆಯೂ ಸುಗಮವಾಗಿ ಯಾವುದೇ ಗೊಂದಲ ಗೋಜಲುಗಳಿಲ್ಲದೆ ನಡೆಯುವತ್ತ ಚಿತ್ತ ಹರಿಸಿದ್ದು, ಅದರಂತೆ ಇಂದು ನೂತನ ರಾಜ್ಯಾಧ್ಯಕ್ಷರ ಆಯ್ಕೆಗೆ ಸಂಬಂಧಿಸಿದಂತೆ ಬಿಜೆಪಿ ಶಾಸಕರು, ಸಂಸದರು, ಪ್ರಮುಖ ಮುಖಂಡರುಗಳ ಸಭೆಗಳನ್ನು ನಡೆಸಿ ಎಲ್ಲರ ಅಭಿಪ್ರಾಯಗಳನ್ನು ಪಡೆಯಲಾಯಿತು.

ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್‌ದಾಸ್ ಅಗರ್‌ವಾಲ್, ಸಹ ಉಸ್ತುವಾರಿ ಸುಧಾಕರ್ ರೆಡ್ಡಿ, ಹೈಕಮಾಂಡ್‌ನ ವೀಕ್ಷಕ ಪೊನ್ನು ರಾಧಾಕೃಷ್ಣ ಅವರ ಉಪಸ್ಥಿತಿಯಲ್ಲಿ ಮೊದಲಿಗೆ ಬಿಜೆಪಿಯ ಎಲ್ಲ ವಿಧಾನಸಭಾ ಸದಸ್ಯರು, ವಿಧಾನ ಪರಿಷತ್ತಿನ ಸದಸ್ಯರು ಹಾಗೂ ಸಂಸದರ ಸಭೆ ನಡೆಸಿ ಬಣ ಬಡಿದಾಟವನ್ನು ಅಂತ್ಯಗೊಳಿಸುವ ಮಾರ್ಗೋಪಾಯಗಳ ಬಗ್ಗೆಯೂ ಚರ್ಚೆಗಳನ್ನು ನಡೆಸಲಾಯಿತು. ಹಾಗೆಯೇ ನೂತನ ರಾಜ್ಯಾಧ್ಯಕ್ಷರ ಆಯ್ಕೆ ಬಗ್ಗೆಯೂ ಅಭಿಪ್ರಾಯಗಳನ್ನು ಕೇಳಲಾಯಿತು.

ನೂತನ ರಾಜ್ಯಾಧ್ಯಕ್ಷರ ಆಯ್ಕೆ ಚುನಾವಣೆ ಮೂಲಕ ನಡೆಸಬೇಕೇ ಇಲ್ಲವೇ ಹೈಕಮಾಂಡೇ ಸೂಕ್ತ ವ್ಯಕ್ತಿಯನ್ನು ನೇಮಕ ಮಾಡಬೇಕೇ ಎಂಬ ಬಗ್ಗೆಯೂ ಎಲ್ಲ ಶಾಸಕರ, ಸಂಸದರ, ಪ್ರಮುಖ ಮುಖಂಡರ ಜತೆ ಚರ್ಚಿಸಿ ಅವರ ಅಭಿಪ್ರಾಯಗಳನ್ನು ಪಡೆಯಲಾಯಿತು.

ಮೊದಲಿಗೆ ಶಾಸಕರ, ಸಂಸದರ ಸಭೆ ನಡೆಸಿದ ರಾಧಾಮೋಹನ್‌ದಾಸ್ ಅಗರವ್‌ವಾಲ್ ಅವರು ಎಲ್ಲ ಜಿಲ್ಲೆಗಳ ಎಲ್ಲ ಬಿಜೆಪಿ ಅಧ್ಯಕ್ಷರುಗಳ ಚುನಾವಣೆ ಹಾಗೂ ರಾಜ್ಯಾಧ್ಯಕ್ಷರ ಚುನಾವಣೆ ಸಂಬಂಧ ಸಂಘಟನಾ ಪರ್ವದ ಕುರಿತು ಚರ್ಚೆ ನಡೆಸಿದರು. ಈ ಸಭೆಯಲ್ಲಿ ಎಲ್ಲ ಪಕ್ಷದ ಚುನಾವಣಾಧಿಕಾರಿಗಳು, ಸಹ ಚುನಾವಣಾಧಿಕಾರಿಗಳು ಹಾಗೂ 13 ಮಂದಿ ಮೇಲ್ವಿಚಾರಕರು ಭಾಗಿಯಾಗಿದ್ದರು. ಈ ಎಲ್ಲ ಸಭೆಯ ನಂತರ ಬಿಜೆಪಿಯ ಕೋರ್‌ಕಮಿಟಿ ಸಭೆಯೂ ರಾಜ್ಯ ಬಿಜೆಪಿ ಉಸ್ತುವಾರಿ ನೇತೃತ್ವದಲ್ಲಿ ನಡೆದಿದ್ದು, ಎಲ್ಲ ಪ್ರಮುಖ ಮುಖಂಡರುಗಳು ಈ ಸಭೆಯಲ್ಲಿ ಪಾಲ್ಗೊಂಡು ಪಕ್ಷದ ವಿದ್ಯಮಾನಗಳು, ನೂತನ ರಾಜ್ಯಾಧ್ಯಕ್ಷರ ಆಯ್ಕೆ ಸೇರಿದಂತೆ ಎಲ್ಲದರ ಬಗ್ಗೆ ಚರ್ಚೆ ನಡೆಸಿದರು.

ಇಂದಿನ ಅಭಿಪ್ರಾಯ ಸಂಗ್ರಹಣೆ ಸಭೆಯ ನಂತರ ಇನ್ನು 2-3 ದಿನಗಳಲ್ಲೇ ರಾಜ್ಯಾಧ್ಯಕ್ಷ ಚುನಾವಣೆಯ ಉಸ್ತುವಾರಿ ಕೇಂದ್ರ ಸಚಿವ ಶಿವರಾಜ್‌ಸಿಂಗ್ ಚೌಹಾಣ್ ಸಮ್ಮುಖದಲ್ಲಿ ಅಂತಿಮ ಸಭೆ ನಡೆಯಲಿದ್ದು, ಅಲ್ಲಿ ರಾಜ್ಯಾಧ್ಯಕ್ಷರ ಚುನಾವಣೆಯನ್ನು ಯಾವ ಸ್ವರೂಪದಲ್ಲಿ ನಡೆಸಬೇಕು ಎಂಬ ಬಗ್ಗೆ ತೀರ್ಮಾನ ಕೈಗೊಳ್ಳಲಾಗುತ್ತದೆ.

ಚುನಾವಣೆಗೆ ಭಿನ್ನರ ಪಟ್ಟು

ರಾಜ್ಯ ಬಿಜೆಪಿಯ ಬಣ ಬಡಿದಾಟ, ನೂತನ ರಾಜ್ಯಾಧ್ಯಕ್ಷರ ಆಯ್ಕೆ ಸೇರಿದಂತೆ ಎಲ್ಲ ವಿಚಾರಗಳ ಬಗ್ಗೆ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್‌ದಾಸ್ ಅಗರ್‌ವಾಲ್ ಸರಣಿ ಸಭೆಗಳ ನಡೆಸಿರುವಾಗಲೇ ಬಿಜೆಪಿಯ ಭಿನ್ನಮತೀಯರು ರಾಜ್ಯಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಸುವಂತೆ ಬಿಜೆಪಿ ಭಿನ್ನರು ಪಟ್ಟು ಹಿಡಿದಿದ್ದರೆ, ವಿಜಯೇಂದ್ರ ಪರ ನಿಂತಿರುವ ಮಾಜಿ ಶಾಸಕರು ಸಹ ಮತದ ಮೂಲಕ ವಿಜಯೇಂದ್ರ ಅವರನ್ನೇ ರಾಜ್ಯಾಧ್ಯಕ್ಷರನ್ನಾಗಿ ಮುಂದುವರೆಸುವಂತೆ ಒತ್ತಾಯಿಸಿದೆ.

ಮಾಜಿ ಸಚಿವ ರೇಣುಕಾಚಾರ್ಯ ನೇತೃತ್ವದಲ್ಲಿ ಮಾಜಿ ಸಚಿವ ಕಟ್ಟಾಸುಬ್ರಮಣ್ಯ ನಿವಾಸದಲ್ಲಿಂದು ಸಭೆ ಸೇರಿದ ಮಾಜಿ ಶಾಸಕರುಗಳು ಸಭೆಯಲ್ಲಿ ವಿಜಯೇಂದ್ರ ಅವರನ್ನೇ ರಾಜ್ಯಾಧ್ಯಕ್ಷರನ್ನಾಗಿ ಮುಂದುವರೆಸಬೇಕು ಎಂಬ ಬಗ್ಗೆ ಚರ್ಚೆ ನಡೆಸಿ ಸಭೆಯ ನಂತರ ರಾಧಾಮೋಹನ್‌ದಾಸ್ ಅಗರ್‌ವಾಲ್ ಅವರನ್ನು ಭೇಟಿ ಮಾಡಿ ವಿಜಯೇಂದ್ರ ಅವರನ್ನೇ ರಾಜ್ಯಾಧ್ಯಕ್ಷರನ್ನಾಗಿ ಮುಂದುವರೆಸುವಂತೆ ಮನವಿಯನ್ನು ಸಲ್ಲಿಸಿದರು.




ಬೆಳಗಾವಿ ಸುವರ್ಣ ವಿಧಾನಸೌಧದ ಆವರಣದಲ್ಲಿ ಮಂಗಳವಾರ ನಡೆದ ಮಹಾತ್ಮ ಗಾಂಧೀಜಿ ಪ್ರತಿಮೆ ಅನಾವರಣ ಕಾರ್ಯಕ್ರಮದಲ್ಲಿ ರಾಜ್ಯಸಭೆ ಪ್ರತಿಪಕ್ಷ ನಾಯಕ, ಎಐಸಿಸಿ ಅಧ್ಯಕ್ಷ ಶ್ರೀ ಮಲ್ಲಿಕಾರ್ಜುನ ಖರ್ಗೆ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ ಕೆ ಶಿವಕುಮಾರ್, ವಿಧಾನಸಭಾಧ್ಯಕ್ಷ ಯು ಟಿ ಖಾದರ್, ಉಪ ಸಭಾಧ್ಯಕ್ಷ ಲಮಾಣಿ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ ಸಿ ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೆವಾಲಾ, ಲೋಕಸಭೆ ಸದಸ್ಯೆ ಪ್ರಿಯಾಂಕಾ ಗಾಂಧಿ ವಾದ್ರಾ, ಮಾಜಿ ಸಚಿವರಾದ ಎಚ್ ಕೆ ಪಾಟೀಲ್, ಪರಮೇಶ್ವರ, ಸತೀಶ್ ಜಾರಕಿಹೊಳಿ ಮತ್ತಿತರರು ಪಾಲ್ಗೊಂಡಿದ್ದರು.

## 2.5 ಓವರ್‌ಗಳಲ್ಲಿ ಮುಗಿದ ಪಂದ್ಯ: ಭಾರತಕ್ಕೆ ಭರ್ಜರಿ ಜಯ

ಮಲೇಷ್ಯಾ: ಕೌಲಾಲಂಪುರ್‌ನ ಬೇಯುಮಾಸ್ ಓವಲ್ ಮೈದಾನದಲ್ಲಿ ನಡೆದ ಅಂಡರ್ 19 ಮಹಿಳಾ ಟಿ20 ವಿಶ್ವಕಪ್‌ನ 16ನೇ ಪಂದ್ಯದಲ್ಲಿ ಭಾರತ ತಂಡ ಭರ್ಜರಿ ಜಯ ಸಾಧಿಸಿದೆ. ಮಲೇಷ್ಯಾ ವಿರುದ್ಧದ ಈ ಪಂದ್ಯದಲ್ಲಿ ಟಾಸ್ ಗೆದ್ದ ಟೀಮ್ ಇಂಡಿಯಾ ನಾಯಕಿ ನಿಕಿ ಪ್ರಸಾದ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಇನಿಂಗ್ಸ್ ಆರಂಭಿಸಿದ ಮಲೇಷ್ಯಾ ತಂಡ ಉತ್ತಮ ಆರಂಭ ಪಡೆದಿರಲಿಲ್ಲ. ಭಾರತೀಯ ಬೌಲರ್‌ಗಳ ಕರಾರುವಾಕ್ ದಾಳಿ ಮುಂದೆ ರನ್‌ಗಳಿಸುವುದಿರಲಿ, ಕ್ರೀಸ್ ಕಚ್ಚಿ ನಿಲ್ಲಲು ಕೂಡ ಮಲೇಷ್ಯಾ ಬ್ಯಾಟರ್‌ಗಳು ಪರದಾಡಿದರು. ಪರಿಣಾಮ ಪವರ್‌ಪ್ಲೇ ಮುಗಿಯುವ ಮುನ್ನವೇ ಕೇವಲ 22 ರನ್‌ಗಳಿಗೆ 5 ವಿಕೆಟ್ ಕಳೆದುಕೊಂಡಿತು. ಆ ಬಳಿಕ ಬಂದ ಬ್ಯಾಟರ್‌ಗಳನ್ನು ಬಂದ ಪುಟ 2

## ಬಿಜೆಪಿ ಸಂವಿಧಾನ ವಿರೋಧಿ




ಬೆಳಗಾವಿ: ರಾಮ ಭಕ್ತರಾಗಿ ಅತ್ಯುತ್ತಮ ಹಿಂದೂ ಆಗಿದ್ದ ಮಹಾತ್ಮ ಗಾಂಧಿಯನ್ನು ಃಏಕ ಪರಿವಾರದ ಗೋಡ್ಸೆ ಹತ್ಯೆ ಮಾಡಿದ. ನಾವು ಮಹಾತ್ಮಗಾಂಧಿ ಅವರ ಹಿಂದೂತ್ವದಲ್ಲಿ ನಂಬಿಕೆ ಇಟ್ಟಿದ್ದೇವೆ. ಬಿಜೆಪಿ ಪರಿವಾರ ಗೋಡ್ಸೆಯ ಕೊಲೆಗಡುಕ ಸಿದ್ಧಾಂತವನ್ನು ಪಾಲಿಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.

25 ಅಡಿ ಎತ್ತರದ ಬಾಪೂಜಿ ಪುತ್ಥಳಿಯನ್ನು ಚರಕ ನೇಯ್ಯುವ ಮೂಲಕ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಲೋಕಾರ್ಪಣೆಗೊಳಿಸಿದರು.

ಬಳಿಕ ಮಾತನಾಡಿದ ಖರ್ಗೆ, ನನ್ನ ಜೀವನವೇ ನನ್ನ ಸಂದೇಶ ಎಂದು ಸಾರುವ ಗಾಂಧೀಜಿ ಮೂರ್ತಿ ಇಡೀ ದೇಶಕ್ಕೆ ಗೌರವ. ಇಡೀ ಜಗತ್ತು ಗಾಂಧೀಜಿ ಅವರನ್ನು ಗೌರವಿಸುತ್ತದೆ. ಬೆಳಗಾವಿ ಇಡೀ ದೇಶಕ್ಕೆ ಗೌರವ ತಂದುಕೊಡುವ ಸ್ಥಳ. ಯಾಕೆಂದರೆ ಗಾಂಧೀಜಿ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆ ವಹಿಸಿದ್ದು ಬೆಳಗಾವಿಯಲ್ಲಿ ಮಾತ್ರ. ಅಂತಹ ಮಹಾತ್ಮನ ಪುತ್ಥಳಿ ಉದ್ಘಾಟನೆ ನನ್ನ ಕೈಯಿಂದ ಆಗಿದ್ದಕ್ಕೆ ನನ್ನ ಜೀವನ ಧನ್ಯವಾಯಿತು ಎಂದರು. ಗಾಂಧಿಯವರು ಹಿಂದೂತ್ವದ ದ್ವೇಷಿಯಾಗಿರುವ, ಗಾಂಧಿ ತತ್ವದ ವಿರೋಧಿಯಾಗಿರುವ ಬಿಜೆಪಿ ಪರಿವಾರ ಸಂವಿಧಾನ ವಿರೋಧಿ-ಅಂಬೇಡ್ಕರ್ ದ್ವೇಷಿಯೂ ಆಗಿದೆ ಎಂದರು.ನಾವು ಮಹಾತ್ಮಗಾಂಧಿಯವರ ವಿಚಾರಗಳನ್ನು ಮುಂದಿನ ಪೀಳಿಗೆಗೆ ಇನ್ನಷ್ಟು ಅರ್ಥಪೂರ್ಣವಾಗಿ ತಲುಪಿಸುವ, ಗಾಂಧಿಯವರ ಗ್ರಾಮ ಪುಟ 2

## ಭದ್ರತಾ ಪಡೆಗಳ ಗುಂಡಿಗೆ 14 ನಕ್ಸಲರ ಬಲಿ

**ಭುವನೇಶ್ವರ್:** ಒಡಿಶಾ-ಛತ್ತೀಸ್‌ಗಢ ಗಡಿಯಲ್ಲಿ ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ 14 ನಕ್ಸಲರನ್ನು ಭದ್ರತಾ ಪಡೆಗಳು ಹತ್ಯೆ ಮಾಡುವಲ್ಲಿ ಯಶಸ್ವಿಯಾಗಿವೆ. ಗುಂಡಿನ ಚಕಮಕಿಯಲ್ಲಿ ಮತ್ತಷ್ಟು ಮಂದಿ ಸಾವಿನ ಶಂಕೆ ವ್ಯಕ್ತವಾಗಿದ್ದು ಘಟನೆ ನಡೆದ ಸ್ಥಳದಲ್ಲಿ ಭದ್ರತಾ ಪಡೆಗಳು ಶೋಧ ನಡೆಸಿದ್ದಾರೆ. ಈ ವೇಳೆ ನಕ್ಸಲರೊಂದಿಗೆ ನಡೆದ ಎನ್‌ಕೌಂಟರ್‌ನಲ್ಲಿ 14 ಮಂದಿ ಮಾವೋವಾದಿಗಳನ್ನು ಪುಟ 2

## ಬಸ್‌ಗೆ ಕಾಯುತ್ತಿದ್ದ ಮಹಿಳೆ ಮೇಲೆ ಅತ್ಯಾಚಾರ!

**ಬೆಂಗಳೂರು :** ಬೆಂಗಳೂರಿನ ಕೆಆರ್ ಮಾರುಕಟ್ಟೆಯಲ್ಲಿ ಬಸ್‌ಗೆ ಕಾಯುತ್ತಿದ್ದ ಮಹಿಳೆ ಮೇಲೆ ಇಬ್ಬರು ಅತ್ಯಾಚಾರ ಎಸಗಿದ ಘಟನೆಯು ನಡೆದಿದೆ. ಈ ಬಗ್ಗೆ ಎಸ್.ಜಿ.ಪಾರ್ಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಭಾನುವಾರ ತಡರಾತ್ರಿ ಈ ಘಟನೆ ನಡೆದಿದ್ದು, 33 ವರ್ಷದ ಸಂತ್ರಸ್ತೆ ನೀಡಿದ ದೂರು ಪುಟ 2

## ದಾಳಿ: ಓರ್ವ ಸಾವು, ಮತ್ತೋರ್ವ ಬಚಾವ್

**ಚಾಮರಾಜನಗರ :** ಹನೂರು ತಾಲೂಕಿನ ಮಿಣ್ಯಂ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೊಪ್ಪ ಗ್ರಾಮದಿಂದ ಅರಣ್ಯದ ರಸ್ತೆಯಲ್ಲಿ ಒಡೆಯರ ಪಾಳ್ಯಕ್ಕೆ ತೆರಳುತ್ತಿದ್ದ ವ್ಯಕ್ತಿಯೊಬ್ಬನ ಮೇಲೆ ಕಾಡಾನೆ ದಾಳಿ ಮಾಡಿದ ಪರಿಣಾಮ, ಸ್ಥಳದಲ್ಲಿಯೇ ಮೃತಪಟ್ಟಿರುವ ಘಟನೆ ನಡೆದಿದೆ.

ಕೊಪ್ಪ ಗ್ರಾಮದ ನಿವಾಸಿ ಪುಟ 2

## ದೆಹಲಿ ಚಲೋ ಜಾಥಾ ಮುಂದೂಡಿಕೆ

**ಚಂಡೀಗಢ:** ಇಂದು ನಡೆಯಬೇಕಿದ್ದ ದಿಲ್ಲಿಗೆ 101 ರೈತರು ನಡೆಸಲು ಉದ್ದೇಶಿಸಿದ್ದ ಕಾಲ್ನಡಿಗೆ ಜಾಥಾವನ್ನು ಮುಂದೂಡಲಾಗಿದೆ ಎಂದು ಪ್ರತಿಭಟನಾನಿರತ ರೈತ ನಾಯಕ ಸರ್ವನ್ ಸಿಂಗ್ ಪಂಧೇರ್ ಪ್ರಕಟಿಸಿದ್ದಾರೆ.

ತಮ್ಮ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ)ಗಾಗಿ ಖಾತರಿ ಕಾನೂನು ರೂಪಿಸುವ ತಮ್ಮ ಬೇಡಿಕೆಗಳ ಕುರಿತು ಶೀಘ್ರವೇ ಮಾತುಕತೆ ನಡೆಸುವಂತೆ ಕೇಂದ್ರ ಸರಕಾರಕ್ಕೆ ಅವರು ಒತ್ತಾಯಿಸಿದ್ದಾರೆ.

ಪಂಜಾಬ್ ಮತ್ತು ಹರಿಯಾಣ ನಡುವಿನ ಗಡಿಯಾದ ಶಂಭುದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಕಿಸಾನ್ ಮಜ್ದೂರ್ ಮೋರ್ಚಾದ ಸಂಚಾಲಕ ಪಂಧೇರ್, ಇದು ಷರತ್ತು ಅಲ್ಲ ಆದರೆ ವಿನಂತಿ, ಆರಂಭದಲ್ಲಿ ಪ್ರಸ್ತಾಪಿಸಿದಂತೆ ಫೆಬ್ರವರಿ 14 ರೊಳಗೆ ಕೇಂದ್ರ ಸರ್ಕಾರ ದೆಹಲಿಯಲ್ಲಿ ಸಭೆ ಕರೆಯಲಿ ಎಂದು ಒತ್ತಾಯಿಸಿದರು.

"ಜನವರಿ 21 ರಂದು 101 ರೈತರು ದೆಹಲಿಗೆ ಜಾಥಾ ನಡೆಸಲಿದ್ದಾರೆ ಎಂದು ನಾವು ಪುಟ 2

## ಗಾಂಧೀಜಿ ಹಾಗೂ ಕಾಂಗ್ರೆಸ್ ಕೊಟ್ಟ ಅಹಿಂಸೆಯ ಆದರ್ಶವನ್ನು ವಿಶ್ವ ಒಪ್ಪಿದೆ

**ಬೆಳಗಾವಿ:** "ಗಾಂಧೀಜಿ ಹಾಗೂ ಕಾಂಗ್ರೆಸ್ ಕೊಟ್ಟ ಅಹಿಂಸೆಯ ಆದರ್ಶವನ್ನು ವಿಶ್ವ ಒಪ್ಪಿದೆ. ಇದನ್ನು ಉಳಿಸಿಕೊಂಡು, ಮುಂದಿನ ಪೀಳಿಗೆಗೆ ತಿಳಿಸಬೇಕು" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಬೆಳಗಾವಿಯ ಸರ್ಕಿಟ್ ಹೌಸ್ ಬಳಿ ಶಿವಕುಮಾರ್ ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ಮಂಗಳವಾರ ಪ್ರತಿಕ್ರಿಯೆ ನೀಡಿದರು.

ಮಂಗಳವಾರದ ಕಾರ್ಯಕ್ರಮಗಳ ಬಗ್ಗೆ ಮಾಧ್ಯಮಗಳು ಕೇಳಿದಾಗ, "ಗಾಂಧೀಜಿ ಅವರ



ತತ್ವ ಆದರ್ಶಗಳು, ಅಂಬೇಡ್ಕರ್ ಅವರು ಕೊಟ್ಟ ಸಂವಿಧಾನ ಉಳಿಸಬೇಕು. ಇದು ಕೇವಲ ಕಾಂಗ್ರೆಸ್ ಪಕ್ಷದ ಕಾರ್ಯಕ್ರಮ ಅಲ್ಲ, ದೇಶದ ಕಾರ್ಯಕ್ರಮ. ಗಾಂಧೀಜಿ ಅವರು ನಮ್ಮೊಂದಿಗೆ ಇಲ್ಲದಿದ್ದರೂ, ತತ್ವ ಸಿದ್ಧಾಂತಗಳ ಮೂಲಕ ಸದಾ ಜೀವಂತವಾಗಿರುತ್ತಾರೆ. ಗಾಂಧೀಜಿ ಅವರ ಪರಂಪರೆಯನ್ನು ನಾವು ಮುಂದುವರಿಸಿಕೊಂಡು ಹೋಗಬೇಕು" ಎಂದು ತಿಳಿಸಿದರು.

"ಕಾಂಗ್ರೆಸ್ ಶಕ್ತಿ ದೇಶದ ಶಕ್ತಿ, ಕಾಂಗ್ರೆಸ್ ಇತಿಹಾಸ ದೇಶದ ಇತಿಹಾಸ. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ನಿಧನದ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮಗಳನ್ನು ಮುಂದೂಡಲಾಗಿತ್ತು. ಹೀಗಾಗಿ ಇಂದು ಜೈ, ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶ ನಡೆಸುತ್ತಿದ್ದೇವೆ. ಈ ಕಾರ್ಯಕ್ರಮದ ಮೂಲಕ ಕರ್ನಾಟಕ ಹಾಗೂ ಬೆಳಗಾವಿ ಇತಿಹಾಸದ ಪುಟ ಸೇರಲಿವೆ" ಎಂದರು.

"ಗಾಂಧೀಜಿ ಅವರು ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟರು, ನಂತರ ಅಂಬೇಡ್ಕರ್ ಅವರು ನಮಗೆ ಸಂವಿಧಾನ ಕೊಟ್ಟರು. ಇವರ ತತ್ವ ಆದರ್ಶ, ಸಾಮಾಜಿಕ ನ್ಯಾಯ ಉಳಿಸಲು ಇಂದಿನ ಸಮಾವೇಶ ಅಗತ್ಯವಾಗಿದೆ. ಪುಟ 2


## ಇಡಿ ಮುಟ್ಟುಗೋಲು ಹಾಕಿಕೊಂಡಿರುವ ಸೈಟ್‌ಗಳಿಗೂ ನಮಗೂ ಸಂಬಂಧವಿಲ್ಲ

**ಮೈಸೂರು :** ಜಾರಿ ನಿರ್ದೇಶನಾಲಯ ವಶಕ್ಕೆ ಪಡೆದಿರುವ 300 ಕೋಟಿ ಮೌಲ್ಯದ 142 ಸೈಟ್‌ಗಳಿಗೂ ನಮ್ಮ 14 ಸೈಟ್ ಗಳಿಗೂ ಯಾವುದೇ ಸಂಬಂಧವಿಲ್ಲ. ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ತಪ್ಪು ಸಂದೇಶ ಹೋಗಲಿ ಎಂದು ಈ ರೀತಿ ಮಾಡಲಾಗುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಆರೋಪ ಮಾಡಿದ್ದಾರೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಕ್ರಮದ ಬಗ್ಗೆ ತನಿಖೆ ನಡೆಸುತ್ತಿರುವ ಇಡಿ, 300 ಕೋಟಿ ಮೌಲ್ಯದ 142 ಸೈಟ್‌ಗಳನ್ನ ವಶಕ್ಕೆ ಪಡೆದಿದೆ. ಈ ವಿಚಾರವನ್ನು ಇಡಿ ತನ್ನ ಅಧಿಕೃತ ಖಾತೆಯಲ್ಲಿ ಟ್ವೀಟ್ ಮಾಡಿತ್ತು. ಆ ಟ್ವೀಟ್ ಅನ್ನು ಸಿಎಂ ಸಿದ್ದರಾಮಯ್ಯ ಅವರಿಗೂ ಟ್ಯಾಗ್ ಮಾಡಲಾಗಿದೆ. ಈ ಕುರಿತು ಜಲದರ್ಶಿನಿಯಲ್ಲಿ ಮಾಧ್ಯಮಗೋಷ್ಠಿ ನಡೆಸಿ ಎಂಎಲ್‌ಸಿ ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಇಡಿ ಅವರು ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಉದ್ದೇಶಪೂರ್ವಕವಾಗಿ ಟ್ಯಾಗ್ ಮಾಡಿ ಟ್ವೀಟ್ ಮಾಡಿಸಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ತಪ್ಪು ಸಂದೇಶ ಹೋಗಲಿ ಎಂದು ಈ ರೀತಿ ಮಾಡಲಾಗಿದೆ. ಇದನ್ನು ಟ್ಯಾಗ್ ಮಾಡಿ ಟ್ವೀಟ್ ಮಾಡುವ ಅಗತ್ಯ ಇರಲಿಲ್ಲ ಎಂದರು. ಪುಟ 2

## ದರ್ಶನ್: ಗನ್ ಲೈಸೆನ್ಸ್ ತಾತ್ಕಾಲಿಕ ಅಮಾನತು



**ಬೆಂಗಳೂರು:** ರೇಣುಕಾಸ್ವಾಮಿ ಹತ್ಯೆ ಪ್ರಕರಣದ ಪ್ರಮುಖ ಆರೋಪಿ ನಟ ದರ್ಶನ್ ಅವರ ಬಳಿಯಿರುವ ಗನ್ ಲೈಸೆನ್ಸ್ ತಾತ್ಕಾಲಿಕವಾಗಿ ಅಮಾನತುಗೊಳಿಸಿ ಬೆಂಗಳೂರು ಪೊಲೀಸ್ ಆಡಳಿತ ವಿಭಾಗ ಆದೇಶಿಸಿದೆ. ಹತ್ಯೆ ಪ್ರಕರಣ ಮುಗಿಯುವವರೆಗೂ ಲೈಸೆನ್ಸ್ ಅಮಾನತು ಮಾಡಲಾಗಿದ್ದು, ಗನ್ ವಶಕ್ಕೆ ಪಡೆದುಕೊಳ್ಳುವಂತೆ ರಾಜರಾಜೇಶ್ವರಿ ನಗರ ಠಾಣೆ ಪೊಲೀಸರಿಗೆ ಸೂಚಿಸಲಾಗಿದೆ. ಹತ್ಯೆ ಪ್ರಕರಣದಲ್ಲಿ ಆರೋಪಿಯಾಗಿ ಜಾಮೀನಿನ ಮೇಲೆ ಹೊರಗಿರುವ ನೀವು ಸಾಕ್ಷಿಗಳ ಮೇಲೆ ಪ್ರಭಾವ ಬೀರುವ ಸಾಧ್ಯತೆಗಳಿವೆ. ನಿಮ್ಮ ಬಳಿಯಿರುವ ಲೈಸೆನ್ಸ್ ಹೊಂದಿರುವ ಗನ್ ಬಳಸಿ ಸಾಕ್ಷಿಗಳನ್ನು ಬೆದರಿಸುವ ಬಗ್ಗೆ ಅನುಮಾನಗಳಿವೆ. ನಿಮ್ಮ ಗನ್ ಲೈಸೆನ್ಸ್ ರದ್ದು ಮಾಡದಿರಲು ಕಾರಣ ನೀಡಿ ಎಂದು ದರ್ಶನ್ ಅವರಿಗೆ ಈ ಹಿಂದೆ ಬೆಂಗಳೂರು ಪೊಲೀಸ್ ಆಡಳಿತ ವಿಭಾಗದ ಡಿಸಿಪಿ ಪದ್ಮಿನಿ ಸಾಹೂ ನೋಟಿಸ್ ನೀಡಿದ್ದರು. ಪುಟ 2

## 1600 ಮಂದಿ ಕ್ಷಮಾದಾನ ಕಡತಕ್ಕೆ ಟ್ರಂಪ್ ಸಹಿ

ವಾಷಿಂಗ್ಟನ್: ಅಮೇರಿಕಾದಲ್ಲಿ ಡೊನಾಲ್ಡ್ ಟ್ರಂಪ್ ಅಧಿಕಾರವಧಿಯ ಎರಡನೆಯ ಯುಗ ಆರಂಭವಾಗಿದೆ,.ಅಧಿಕಾರ ವಹಿಸಿಕೊಂಡ ಮೊದಲ ದಿನವೇ ಯುಎಸ್ ಕ್ಯಾಪಿಟಲ್‌ಗೆ ನುಗ್ಗಿ ದಾಂಧಲೆ ನಡೆಸಿದ್ದ ಸುಮಾರು 1,600 ಅಧಿಕ ಮಂದಿಯನ್ನು ಕ್ಷಮಿಸುವ ಕಡತಕ್ಕೆ ಸಹಿ ಹಾಕಿದ್ದಾರೆ.

2020ರಲ್ಲಿ ಅಮೇರಿಕಾ ಅಧ್ಯಕ್ಷೀಯ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಪರಾಭವಗೊಂಡ ಹಿನ್ನೆಲೆಯಲ್ಲಿ ಅವರ ಅಭಿಮಾನಿಗಳು ಮತ್ತು ಬೆಂಬಲಿಗರು 2021ರ ಜನವರಿ 6 ರಂದು ಅಮೇರಿಕಾದ ಕ್ಯಾಪಿಟಲ್ ಭವನಕ್ಕೆ ನುಗ್ಗಿ ದಾಂಧಲೆ ನಡೆಸಿದ್ದರು.



ಅವರನ್ನು ತಡೆಯಲು ಯತ್ನಿಸಿದ ಪೊಲೀಸರ ಮೇಲೆ ಹಲ್ಲೆ ನಡೆಸಿದ್ದ ಪ್ರಕರಣ ಇದಾಗಿದೆ. ಎರಡನೇ ಅವಧಿಗೆ ಅಧ್ಯಕ್ಷರಾಗಿ ಡೋನಾಲ್ಡ್ ಟ್ರಂಪ್ ಅಧಿಕಾರ ಸ್ವೀಕಾರ ಮಾಡುತ್ತಿದ್ದಂತೆ ವಿವಿಧ ಕಡತಕ್ಕೆ ಸಹಿಹಾಕಿದ್ದು ಅದರಲ್ಲಿ 1600ಕ್ಕೂ ಹೆಚ್ಚು ಪುಟ 2

ಮೊದಲ ಪುಟದಿಂದ

## ಮಹಿಳೆ ಮೇಲೆ ಅತ್ಯಾಚಾರ!

ಆದರಿಸಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಈಗಾಗಲೇ ಪೊಲೀಸರು ಓರ್ವ ಆರೋಪಿಯನ್ನು ಬಂಧಿಸಿದ್ದಾರೆ. ತಲೆ ಮರೆಸಿಕೊಂಡಿರುವ ಮತ್ತೊಬ್ಬ ಆರೋಪಿಗಾಗಿ ಶೋಧ ನಡೆಸಿದ್ದಾರೆ. ಕೆ.ಆರ್.ಮಾರ್ಕೆಟ್‌ನಲ್ಲಿ ಭಾನುವಾರ ರಾತ್ರಿ ಸಂತ್ರಸ್ತೆ ಕಾಯುತ್ತಿದ್ದ ವೇಳೆ ತೆರಳಿದ್ದ ಇಬ್ಬರು ಆರೋಪಿಗಳು ಆಕೆಯನ್ನು ಪುಸಲಾಯಿಸಿ ಗೋಡೌನ್ ಸ್ಟ್ರೀಟ್‌ನ ಮನೆಯೊಂದಕ್ಕೆ ಕರೆದೊಯ್ದಿದ್ದರು. ಅಲ್ಲಿ ಅತ್ಯಾಚಾರವೆಸಗಿ, ಮೊಬೈಲ್, ಹಣ, ಚಿನ್ನದ ಸರ ಕಸಿದುಕೊಂಡು ಹೋಗಿದ್ದಾರೆ ಎಂದು ಸಂತ್ರಸ್ತೆ ಆರೋಪಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಸಂತ್ರಸ್ತೆ ಹಾಗೂ ಆರೋಪಿಗಳಿಗೆ ಹೇಗೆ ಪರಿಚಯವಾಯಿತು, ಆರೋಪಿಗಳ ಹಿನ್ನೆಲೆ ಕುರಿತು ಹೆಚ್ಚಿನ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ದಾಳಿ: ಮತ್ತೋರ್ವ ಬಚಾವ್

ಮುನಿಯಪ್ಪ (40) ಮೃತ ದುರ್ದೈವಿ. ಮುನಿಯಪ್ಪ ಹಾಗೂ ಈತನ ಸ್ನೇಹಿತ ಕುಳ್ಳುಚ್ಚ ಒಡೆಯರಪಾಳ್ಯ ಗ್ರಾಮದ ಜಮೀನುವೊಂದರಲ್ಲಿ ಕೂಲಿ ಕೆಲಸ ಮಾಡಿಕೊಂಡಿದ್ದರು. ಕಾರ್ಯನಿಮಿತ್ತ ಗ್ರಾಮಕ್ಕೆ ಬಂದು ಕೆಲಸ ಮುಗಿದ ನಂತರ ವಾಪಸ್ ಕೆಲಸಕ್ಕೆ ಒಡೆಯರಪಾಳ್ಯ ಗ್ರಾಮಕ್ಕೆ ತೆರಳುತ್ತಿದ್ದಾಗ ಅರಣ್ಯದಲ್ಲಿ ಕಾಡಾನೆ ಇಬ್ಬರ ಮೇಲೆ ದಾಳಿ ನಡೆಸಿದೆ. ಇದರಿಂದಾಗಿ ತೀವ್ರ ಗಾಯಗೊಂಡಿದ್ದ ಮುನಿಯಪ್ಪ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಜೊತೆಯಲ್ಲಿದ್ದ ಈತನ ಸ್ನೇಹಿತ ಕುಳ್ಳುಚ್ಚ ಪ್ರಜ್ಞೆ ಇಲ್ಲದೆ ಅರಣ್ಯದಲ್ಲಿಯೇ ಬಿದ್ದಿದ್ದರು.ಗಸ್ತಿನಲ್ಲಿದ್ದ ಅರಣ್ಯ ಸಿಬ್ಬಂದಿ ಇದನ್ನು ಗಮನಿಸಿ ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ತಕ್ಷಣ ಸ್ಥಳಕ್ಕಾಗಮಿಸಿದ ಅಧಿಕಾರಿಗಳು ಗಾಯಗೊಂಡು ಪ್ರಜ್ಞೆ ಇಲ್ಲದೆ ಬಿದ್ದಿದ್ದ ಕುಳ್ಳುಚ್ಚನನ್ನು ಚಾಮರಾಜನಗರ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಿದ್ದಾರೆ. ಚಿಕಿತ್ಸೆಗೆ ಸ್ಪಂದಿಸುತ್ತಿರುವ ಕುಳ್ಳುಚ್ಚ ಚೇತರಿಸಿಕೊಂಡಿದ್ದಾರೆ ಎಂದು ತಿಳಿದುಬಂದಿದೆ."ಅರಣ್ಯದ ರಸ್ತೆಯಲ್ಲಿ ಕೊಪ್ಪ ಗ್ರಾಮದಿಂದ ಒಡೆಯರಪಾಳ್ಯ ಗ್ರಾಮಕ್ಕೆ ತೆರಳುತ್ತಿದ್ದ ಮುನಿಯಪ್ಪ ಎಂಬುವವರ ಮೇಲೆ ಕಾಡಾನೆ ದಾಳಿ ನಡೆಸಿದ ಪರಿಣಾಮ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಈತನ ಜೊತೆಗಿದ್ದ ಕುಳ್ಳುಚ್ಚನನ್ನು ಚಿಕಿತ್ಸೆಗೆ ದಾಖಲು ಮಾಡಲಾಗಿದೆ" ಎಂದು ವಲಯ ಅರಣ್ಯಾಧಿಕಾರಿ ಪುಟ್ಟರಾಜು ತಿಳಿಸಿದ್ದಾರೆ.

## ಜಾಥಾ ಮುಂದೂಡಿಕೆ

ಈ ಹಿಂದೆ ಘೋಷಿಸಿದ್ದೆವು. ನಾವು ಈ ಬಗ್ಗೆ ಚರ್ಚಿಸಿದ್ದೇವೆ ಮತ್ತು ಸರ್ಕಾರಕ್ಕೆ ಹೆಚ್ಚಿನ ಸಮಯ ನೀಡಲು ಜನವರಿ 26 ರವರೆಗೆ ಜಾಥಾ ಮುಂದೂಡಲು ಎರಡೂ ವೇದಿಕೆಗಳು ನಿರ್ಧರಿಸಿವೆ. ನಾವು ಜನವರಿ 26 ರಂದು ಮುಂದಿನ ನಿರ್ಧಾರ ತೆಗೆದುಕೊಳ್ಳಲಿದ್ದೇವೆ. ಇದು ನಮ್ಮ ಷರತ್ತು ಅಲ್ಲ, ಆದರೆ ಇದು ರೈತರು ಮತ್ತು ಅವರ ಪ್ರತಿಭಟನೆಗೆ ಸಂಬಂಧಿಸಿದ ವಿಷಯವಾಗಿರುವುದರಿಂದ ನವದೆಹಲಿಯಲ್ಲಿ ಆದಷ್ಟು ಬೇಗ ಸಭೆ ಕರೆಯುವಂತೆ ಸರ್ಕಾರಕ್ಕೆ ವಿನಂತಿ" ಎಂದು ಅವರು ಹೇಳಿದರು.

ಮಾತುಕತೆಗೆ ಕೇಂದ್ರದ ಪ್ರಸ್ತಾಪದ ಹೊರತಾಗಿಯೂ, ಉಪವಾಸ ನಿರತ ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೆವಾಲ್ ಅವರು ಎಂಎಸ್‌ಪಿ ಖಾತರಿ ಕಾನೂನು ಜಾರಿಗೆ ಬರುವವರೆಗೂ ಉಪವಾಸ ಸತ್ಯಾಗ್ರಹವನ್ನು ಮುಂದುವರಿಸುವುದಾಗಿ ಘೋಷಿಸಿದ್ದಾರೆ.

ಶನಿವಾರ ತಡರಾತ್ರಿ ಅವರಿಗೆ ವೈದ್ಯಕೀಯ ಚಿಕಿತ್ಸೆ ನೀಡಲಾಗಿದೆಯಾದರೂ ಅವರ ಆರೋಗ್ಯವು ಗಂಭೀರವಾಗಿದೆ. ನವೆಂಬರ್ 26 ರಿಂದ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ, ಕ್ಯಾನ್ಸರ್ ರೋಗದಿಂದ ಬಳಲುತ್ತಿರುವ ದಲ್ಲೆವಾಲ್ ಅವರ ಉಪವಾಸ ಸತ್ಯಾಗ್ರಹ 56 ದಿನಗಳನ್ನು ಪೂರೈಸಿದ್ದು, ಅವರ ಆರೋಗ್ಯದ ಬಗ್ಗೆ ವೈದ್ಯರು ಆತಂಕ ವ್ಯಕ್ತಪಡಿಸಿದ್ದಾರೆ.

ಜಂಟಿ ಕಾರ್ಯದರ್ಶಿ ಪ್ರಿಯಾ ರಂಜನ್ ನೇತೃತ್ವದ ಕೇಂದ್ರ ಕೃಷಿ ಸಚಿವಾಲಯದ ಅಧಿಕಾರಿಗಳ ನಿಯೋಗ ಶನಿವಾರ ಸಂಜೆ ದಲ್ಲೆವಾಲ್ ಅವರನ್ನು ಭೇಟಿಯಾಗಿ ಕಳೆದ 11 ತಿಂಗಳುಗಳಿಂದ ಆಂದೋಲನವನ್ನು ಮುನ್ನಡೆಸುತ್ತಿರುವ ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯೇತರ) ಮತ್ತು ಕಿಸಾನ್ ಮಜ್ದೂರ್ ಮೋರ್ಚಾದ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿತು.

## 14 ನಕ್ಸಲರ ಬಲಿ

ಹತ್ಯೆ ಮಾಡಿದ್ದು ಸ್ಥಳದಲ್ಲಿ ಅಪಾರ ಪ್ರಮಾಣದ ಮದ್ದು ಗುಂಡು ಮತ್ತು ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ವಿವಿಧ ಅಪರಾಧ ಪ್ರಕರಣಗಳಲ್ಲಿ ಬೇಕಾಗಿದ್ದ ಪ್ರಮುಖ ನಕ್ಸಲ್ ನಾಯಕ ಮತ್ತು 1 ಕೋಟಿ ಬಹುಮಾನ ಹೊತ್ತಿದ್ದ ನಕ್ಸಲ್ ಮುಖಂಡನ್ನು ಏನ್ ಕೌಂಟರ್ ನಲ್ಲಿ ಭದ್ರತಾ ಪಡೆಗಳು ಹತ್ಯೆ ಮಾಡಿದ್ದಾರೆ ನಿನ್ನೆಯಷ್ಟೇ ಇಬ್ಬರು ನಕ್ಸಲರನ್ನು ಹತ್ಯೆ ಮಾಡಿದ ಬೆನ್ನಲ್ಲೇ ಇಂದು ಮತ್ತೆ 12 ಮಂದಿ ನಕ್ಸಲರನ್ನು ಹತ್ಯೆ ಮಾಡಿದ್ದಾರೆ.

ಕಳೆದ ಎರಡು ದಿನಗಳ ಅವಧಿಯಲ್ಲಿ ಈ ಸಂಖ್ಯೆ 16 ಕ್ಕೆ ಏರಿಕೆಯಾಗಿದ್ದು ಭದ್ರತಾ ಪಡೆಗಳು ನಕ್ಸಲರ ವಿರುದ್ಧ ಸಮರ ಸಾರಿದ್ದಾರೆ

ಒಡಿಶಾ ಮತ್ತು ಛತ್ತೀಸ್‌ಗಢ ಪೊಲೀಸರು ನಡೆಸಿದ ಜಂಟಿ ಕಾರ್ಯಾಚರಣೆಯ ಸಂದರ್ಭದಲ್ಲಿ ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಕನಿಷ್ಠ 14 ನಕ್ಸಲರು ಸಾವನ್ನಪ್ಪಿದ್ದಾರೆ.

ಭದ್ರತಾ ಪಡೆಗಳು ಇಬ್ಬರು ನಕ್ಸಲರನ್ನು ಹೊಡೆದುರುಳಿಸಿದ ಒಂದು ದಿನದ ನಂತರ ಈ ಘಟನೆ ನಡೆದಿದೆ.

ಕೇಂದ್ರ ಮೀಸಲು ಪೊಲೀಸ್ ಪಡೆ ಸಹಾಯದಿಂದ ಅಂತರರಾಜ್ಯ ಕಾರ್ಯಾಚರಣೆಯು ಒಡಿಶಾದ ನುವಾಪಾಡಾ ಜಿಲ್ಲೆ ಮತ್ತು ಛತ್ತೀಸ್‌ಗಢದ ಗರಿಯಾಬಂಧ್ ಜಿಲ್ಲೆಯ ಗಡಿ ಪ್ರದೇಶಗಳಲ್ಲಿ ನಡೆದಿದೆ.

ಗಡಿ ಪ್ರದೇಶದ ಆಳವಾದ ಕಾಡುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅನೇಕ ನಕ್ಸಲರ ಬಗ್ಗೆ ಗುಪ್ತಚರ ಮಾಹಿತಿಯ ಮೇರೆಗೆ ಜಂಟಿ ಪಡೆಗಳು ಕಾರ್ಯಾಚರಣೆ ನಡೆಸಿಜ ನಕ್ಸಲರನ್ನು ಹತ್ಯೆ ಮಾಡಲಾಗಿದೆ ಎಂದು ಭದ್ರತಾ ಪಡೆಯ ಅಧಿಕಾರಿಗಳು ತಿಳಿಸಿದ್ದಾರೆ.

ಎನ್‌ಕೌಂಟರ್ ನಂತರ ಭದ್ರತಾ ಪಡೆಗಳು ಶಸ್ತ್ರಾಸ್ತ್ರಗಳು, ಮದ್ದುಗುಂಡುಗಳು ಮತ್ತು ಸ್ಫೋಟಕಗಳ ಬೃಹತ್ ಸಂಗ್ರಹವನ್ನು ವಶಪಡಿಸಿಕೊಂಡಿವೆ. ಒಡಿಶಾ ಪೊಲೀಸರ ಪ್ರಕಾರ, ನಕ್ಸಲ್ ಕಡೆಯಿಂದ ಸಾವನ್ನಪ್ಪಿದವರ ಸಂಖ್ಯೆ ಹೆಚ್ಚಿರಬಹುದು ಎಂದು ಹೇಳಲಾಗಿದೆ.

## ಭಾರತಕ್ಕೆ ಭರ್ಜರಿ ಜಯ

ವೇಗದಲ್ಲೇ ಪೆವಿಲಿಯನ್‌ಗೆ ಕಳುಹಿಸುವಲ್ಲಿ ಟೀಮ್ ಇಂಡಿಯಾ ಬೌಲರ್‌ಗಳು ಯಶಸ್ವಿಯಾದರು.

ಪರಿಣಾಮ 14.3 ಓವರ್‌ಗಳಲ್ಲಿ ಮಲೇಷ್ಯಾ ತಂಡವು ಕೇವಲ 31 ರನ್‌ಗಳಿಸಿ ಆಲೌಟ್ ಆಯಿತು. ಟೀಮ್ ಇಂಡಿಯಾ ಪರ ವೈಷ್ಣವಿ ಶರ್ಮಾ 4 ಓವರ್‌ಗಳಲ್ಲಿ ಕೇವಲ 5 ರನ್ ನೀಡಿ 5 ವಿಕೆಟ್ ಕಬಳಿಸಿದರೆ, ಆಯುಷಿ ಶುಕ್ಲಾ 3.3 ಓವರ್‌ಗಳಲ್ಲಿ 8 ರನ್ ನೀಡಿ 3 ವಿಕೆಟ್ ಉರುಳಿಸಿದರು. ಇನ್ನು ಜೋಶಿತಾ ಒಂದು ವಿಕೆಟ್ ಪಡೆಯುವಲ್ಲಿ ಯಶಸ್ವಿಯಾದರು.

**17 ಎಸೆತಗಳಲ್ಲಿ ಮುಗಿದ ಪಂದ್ಯ:** 32 ರನ್‌ಗಳ ಸುಲಭ ಗುರಿ ಪಡೆದ ಟೀಮ್ ಇಂಡಿಯಾ ಪರ ಆರಂಭಿಕರಾಗಿ ಕಣಕ್ಕಿಳಿದ ಗೊಂಗಡಿ ತ್ರಿಷಾ 12 ಎಸೆತಗಳಲ್ಲಿ 5 ಫೋರ್‌ಗಳೊಂದಿಗೆ 27 ರನ್ ಬಾರಿಸಿದರೆ, ಕಮಿಲಿನಿ 4 ರನ್ ಕಲೆಹಾಕಿದರು. ಈ ಮೂಲಕ ಭಾರತ ತಂಡವು 2.5 ಓವರ್‌ಗಳಲ್ಲಿ 32 ರನ್ ಕಲೆಹಾಕಿ 10 ವಿಕೆಟ್‌ಗಳ ಅಮೋಘ ಜಯ ಸಾಧಿಸಿದೆ.

## ಸೈಟ್‌ಗಳಿಗೂ ನಮಗೂ ಸಂಬಂಧವಿಲ್ಲ

ಮುಡಾ ಪ್ರಕರಣವನ್ನು ಸಿಬಿಐಗೆ ವಹಿಸುವ ಸಲುವಾಗಿ ಇದೇ 27ರಂದು ನ್ಯಾಯಾಲಯದಲ್ಲಿ ವಿಚಾರಣೆ ಇದೆ. ಹೀಗಾಗಿ ನ್ಯಾಯಾಲಯದ ದಿಕ್ಕು ತಪ್ಪಿಸುವ ಸಲುವಾಗಿ ಈ ರೀತಿಯಾಗಿ ಮಾಡಿರಬಹುದು ಎಂದು ಸಿಎಂ ಪುತ್ರ ಡಾ. ಯತೀಂದ್ರ ಸಿದ್ದರಾಮಯ್ಯ ಅನುಮಾನ ವ್ಯಕ್ತಪಡಿಸಿದರು.

ಇಡಿ ಅವರು ಮುಡಾದಲ್ಲಿ ಬೇರೆಯವರು ಮಾಡಿರುವ ಹಗರಣಗಳ ಕುರಿತು ತನಿಖೆ ಮಾಡಿದ್ದಾರೆ. ಅದನ್ನು ಟ್ವೀಟ್ ಮಾಡಿದ್ದಾರೆ. ಮುಡಾದಲ್ಲಿ ಬೇನಾಮಿ ಸೈಟ್‌ಗಳು ಹಂಚಿಕೆ ಆಗಿರುವುದೇ ಬಿಜೆಪಿ ಆಡಳಿತದ ಅವಧಿಯಲ್ಲಿ. ಮುಡಾ ಹಗರಣದ ಹೊಣೆಯನ್ನು ಬಿಜೆಪಿಯೇ ಹೊರಬೇಕು ಎಂದು ಅವರು ಹೇಳಿದರು.



ಶ್ರೀ ಸಿದ್ದಗಂಗಾ ಮಠದ ಮಠಾಧೀಶರಾಗಿದ್ದ ಕರ್ನಾಟಕ ರತ್ನ ಪರಮಪೂಜ್ಯ ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮಿಗಳ ಪುಣ್ಯಸ್ಮರಣೆ ಹಾಗೂ ದಾಸೋಹ ದಿನ ದ ಪ್ರಯುಕ್ತ ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಮೈಸೂರು ಸ್ಯಾಂಡಲ್ ಸೋಪ್ ಫ್ಯಾಕ್ಟರಿ ವೃತ್ತದ ಬಳಿಯಿರುವ ಬಸವಧಾಮ ಉದ್ಯಾನವನದಲ್ಲಿನ ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮಿಜಿಗಳ ಪ್ರತಿಮೆಗೆ ಸ್ಥಳೀಯ ಶಾಸಕರಾದ ಕೆ. ಗೋಪಾಲಯ್ಯನವರು ಮಾಲಾರ್ಪಣೆ ಮಾಡಿ ಪುಷ್ಪ ನಮನ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಮಾಜಿ ಶಾಸಕ ನೆ ಲ ನರೇಂದ್ರ ಬಾಬು ವಿಧಾನ ಪರಿಷತ್ ಮಾಜಿ ಸದಸ್ಯ ಲಕ್ಷ್ಮೀನಾರಾಯಣ್ ಪಾಲಿಕೆ ಮಾಜಿ ಉಪ ಮೇಯರ್ ಗಳಾದ ಹೇಮಲತಾ ಗೋಪಾಲಯ್ಯ, ಎಸ್ ಹರೀಶ್ ಮುಖಂಡರುಗಳಾದ ಬಿ ಡಿ ಶ್ರೀನಿವಾಸ್, ವೆಂಕಟೇಶ್ ಮೂರ್ತಿ, ವೆಂಕಟೇಶ್, ಗಂಗಾ ಹನುಮಯ್ಯ, ಅವೀನ್ ಆರಾಧ್ಯ ಸೇರಿದಂತೆ ನೂರಾರು ಮುಖಂಡರು ಪಾಲ್ಗೊಂಡಿದ್ದರು.




ಕೇಂದ್ರ ಕಾರ್ಮಿಕ, ಜವಳಿ ಹಾಗೂ ಕೌಶಲ್ಯಾಭಿವೃದ್ಧಿ ಸ್ಥಾಯಿ ಸಮಿತಿ ವತಿಯಿಂದ ಸಂಸದ ಬಸವರಾಜ ಬೊಮ್ಮಾಯಿಯವರ ಅಧ್ಯಕ್ಷತೆಯಲ್ಲಿ ಮಂಗಳವಾರ ಬೆಂಗಳೂರಿನಲ್ಲಿ ವಿವಿಧ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಹಾಗೂ ಅಧಿಕಾರಿಗಳ ಜೊತೆ ಸಭೆ ನಡೆಸಿದರು.

## ದರೋಡೆ ಪ್ರಕರಣ: ಸಂತ್ರಸ್ತರು ಮತ್ತು ದರೋಡೆಕೋರರ ಕಾರು ಪತ್ತೆ

**ಮೈಸೂರು:** ನಿನ್ನೆ ಮೈಸೂರಿನಲ್ಲಿ ನಡೆದಿದ್ದ ದರೋಡೆ ಪ್ರಕರಣ ಸಂಬಂಧ ಸಂತ್ರಸ್ತರು ಮತ್ತು ದರೋಡೆಕೋರರ ಕಾರುಗಳು ಪತ್ತೆಯಾಗಿದೆ.

ಮಾರ್ಬಳ್ಳಿ ಬಳಿ ಸಂತ್ರಸ್ತರ ಕಾರು ಪತ್ತೆಯಾದರೇ ಗೋಪಾಲಪುರ ಗ್ರಾಮದ ಬಳಿ ದರೋಡೆಕೋರಾರ ಇನ್ನೋವಾ ಕಾರು ಪತ್ತೆಯಾಗಿದೆ. ಜಯಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲೆ ಕೃತ್ಯ ನಡೆದ ಆರು ಕಿಲೋಮೀಟರ್ ದೂರದಲ್ಲಿ ಕಾರುಗಳು ಪತ್ತೆಯಾಗಿವೆ. ಜಯಪುರ ಠಾಣಾ ವ್ಯಾಪ್ತಿಯ ಏಳೆಂಟು ಕಿಲೋಮೀಟರ್ ಅಂತರದಲ್ಲಿ ಬಿಟ್ಟು ಪರಾರಿಯಾಗಿದ್ದಾರೆ

ಡಿಎಲ್ –08 ಸಿಎಕೆ 9775 ನಂಬರಿನ ಕಾರು ಇದಾಗಿದ್ದು ದರೋಡೆಕೋರರು ಅಸಲಿಗೆ ನಂಬರ್ ಪ್ಲೇಟ್ ಬದಲಿಸಿದ್ದಾರೆ. ದರೋಡೆಕೋರರ ಕಾರಿನ ಒಳಗೆ ಐದಕ್ಕೂ ಹೆಚ್ಚು ನಕಲಿ ನಂಬರ್ ಪ್ಲೇಟ್ ಗಳು ಪತ್ತೆಯಾಗಿದ್ದು ರೋಡ್ ರಾಬರಿಗೂ ಮುನ್ನ ಕತರ್ನಾಕ್ ಪ್ಲಾನ್ ರೂಪಿಸಿದ್ದರು ಎನ್ನಲಾಗಿದೆ. ಬೆಂಗಳೂರು ನೋಂದಣಿಯ ನಂಬರ್ ಕೂಡ ನಕಲಿ ಎಂದು ಪೊಲೀಸರು ಶಂಕಿಸಿದ್ದಾರೆ

ಈ ಸಂಬಂಧ ಮಾತನಾಡಿರುವ ದೂರುದಾರ ಮಹಮ್ಮದ್ ಅಶ್ರಫ್ , ಪ್ರಕರಣ ಸಂಬಂಧ ದರೋಡೆಗೆಂದು6 ರಿಂದ 7 ಮಂದಿಯಿದ್ದ ಆಗಂತುಕರ ತಂಡ ಮೂರು ಕಾರಿನಲ್ಲಿ ಬಂದಿದ್ದರು.

ಕೆಂಪುಬಣ್ಣದ ಸ್ವಿಫ್ಟ್ ಕಾರ್, ಇನ್ನೋವಾ ಗ್ರೇ ಕಲರ್ ಕಾರ್, ಸಿಲ್ವರ್ ಬಣ್ಣದ ಇನ್ನೋವಾದಲ್ಲಿ ಬಂದಿದ್ದರು. ಕೆಂಪುಬಣ್ಣದ ಸ್ವಿಫ್ಟ್ ಕಾರು ನಮ್ಮ ಕಾರನ್ನ ಅಡ್ಡ ಹಾಕಿದರು. ಪಕ್ಕದಲ್ಲಿ ಗ್ರೇ ಬಣ್ಣದ ಇನ್ನೋವಾ ಕಾರು ಬಂದು ನಿಂತಿತ್ತು. ಹಿಂಭಾಗದಿಂದ ಸಿಲ್ವರ್ ಕಾರ್ ನಿಂತುಕೊಂಡಿತು. ನಾವು ಹಿಂದೆ– ಮುಂದೆ, ಅಕ್ಕ– ಪಕ್ಕ ಯಾವ ಕಡೆಯೂ ಹೋಗದಂತೆ ಲಾಕ್ ಮಾಡಿದರು. ಇಬ್ಬರು ಜಾಕ್ ರಾಡ್ ನಿಂದ ನಮ್ಮ ಮೇಲೆ ಹಲ್ಲೆ ಮಾಡಿದರು.

ಮತ್ತಿಬ್ಬರು ಸ್ಪ್ಯಾನರ್ ನಿಂದ ಕಿಟಕಿ ಗಾಜುಗಳನ್ನ ಹೊಡೆದು ಹಾಕಿದರು. ಒಬ್ಬ ವ್ಯಕ್ತಿ ತನ್ನ ಕೈಯಲ್ಲಿದ್ದ ಸ್ಪ್ರೇ ನಮ್ಮ ಮುಖಕ್ಕೆ ಹಾಕಿದ. ತಕ್ಷಣ ಉರಿ ತಾಳಲಾರದೆ ನಾವು ಕಣ್ಣು ಉಜ್ಜಿಕೊಳ್ಳುತ್ತಿದ್ದೆವು. ಜಾಕ್ ರಾಡ್ ನಿಂದ ನನ್ನ ಹಾಗೂ ಸೂಫಿಯ ಮೊಣಕೈಗೆ ಹೊಡೆದರು. ತಕ್ಷಣ ಬ್ಯಾಗಿನಲ್ಲಿದ್ದ ಒಂದೂವರೆ ಲಕ್ಷ ಹಣ ಕಸಿದುಕೊಂಡರು. ನನ್ನ ಬಳಿಯಿದ್ದ ವಿವೋ ಮೊಬೈಲ್ ಕೂಡ ಕದ್ದುಕೊಂಡು ಹೋದರು ಎಂದು ಘಟನೆ ಬಗ್ಗೆ ಎಫ್ ಐಆರ್ ನಲ್ಲಿ ವಿವರಿಸಿದ್ದಾರೆ.

ಡಿಎಲ್ –08 ಸಿಎಕೆ 9775 ಇನ್ನೋವಾ, ಕೆಎ05–ಎನ್ ಎಲ್ 6188 ಗ್ರೇ ಕಲರ್ ಕಾರ್ ನಲ್ಲಿ ಬಂದಿದ್ದ ಆಗಂತುಕರು, ನಮ್ಮ ಮೇಲೆ ಹಲ್ಲೆ ಬಳಿಕ ಕೆಎಲ್03–ವೈ 1261 ಎಕೋ ಫೋರ್ಡ್ ಕಾರು ತೆಗೆದುಕೊಂಡು ಹೋದರು. ನಂತರ ಹಂಪಾಪುರ ಆಸ್ಪತ್ರೆಯಲ್ಲಿ ನಾವು ಚಿಕಿತ್ಸೆ ಪಡೆದವು. ಬಳಿಕ ಜಯಪುರ ಠಾಣೆಯಲ್ಲಿ ದೂರು ನೀಡಿದ್ದೇವೆ ಎಂದು ಮಹಮ್ಮದ್ ಅಶ್ರಫ್ ಅವರಿಂದ ದೂರು ದಾಖಲಿಸಿದ್ದಾರೆ ಚಾಕೊಲೇಟ್ ಡೀಲರ್ ಜೊತೆಗೆ ಅಡಕೆ ತೋಟ ಗುತ್ತಿಗೆ ಪಡೆದು ವ್ಯಾಪಾರ ಮಾಡುತ್ತಿದ್ದೆ ಎಂದು ದೂರಿನಲ್ಲಿ ಮಹಮ್ಮದ್ ಅಶ್ರಫ್ ಉಲ್ಲೇಖಿಸಿದ್ದಾರೆ. ಬೆಳಗಿನ ಜಾವ ಮೂರು ಗಂಟೆಗೆ ತಮ್ಮ ಸ್ವಗ್ರಾಮದಿಂದ ವೈನಾಡಿಗೆ ಬಸ್ಸಿನಲ್ಲಿ ಬಂದೆ. ಅಲ್ಲಿಂದ ಸೂಫಿ ಜೊತೆ ಗುಂಡ್ಲುಪೇಟೆ, ನಂಜನಗೂಡು ಮಾರ್ಗದಲ್ಲಿ ಓಡಾಡಿದೆ. ಬಳಿಕ ಮಾನಂದವಾಡಿ ರಸ್ತೆ ಬಳಿ 9.15 ರ ಬಳಿ ಬರುವಾಗ ಅಟ್ಯಾಕ್ ಮಾಡಿದರು ಅಂತ ದೂರು ನೀಡಿದ್ದಾರೆ.

# ತ್ರಿಪುರ, ಮಣಿಪುರ, ಮೇಘಾಲಯ ಸಂಸ್ಥಾಪನಾ ದಿನ

ಈಶಾನ್ಯ ರಾಜ್ಯಗಳಾದ ಮಣಿಪುರ, ಮೇಘಾಲಯ ಮತ್ತು ತ್ರಿಪುರ ಪ್ರತ್ಯೇಕ ರಾಜ್ಯಗಳಾಗಿ ಇಂದಿಗೆ 53 ವರ್ಷಗಳಾಗಿವೆ. ಪ್ರತಿಯೊಂದು ರಾಜ್ಯವು ಅದರಂತೆ ಆದ ರೋಮಾಂಚಕ ಸಂಸ್ಕೃತಿ, ವಿಶಿಷ್ಟ ಇತಿಹಾಸ ಮತ್ತು ಮನಮೋಹಕ ಭೂದೃಶ್ಯಗಳೊಂದಿಗೆ ಗುರುತಿಸಿಕೊಂಡಿದೆ.

ಮೂರೂ ರಾಜ್ಯಗಳಲ್ಲಿ ರಾಜ್ಯೋತ್ಸವ ದಿನವನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಗುತ್ತದೆ. ಸಾಂಸ್ಕೃತಿಕ ಕಾರ್ಯಕ್ರಮಗಳು, ಮೆರವಣಿಗೆಗಳು, ಸಂಗೀತ ಪ್ರದರ್ಶನಗಳು ಮತ್ತು ಸಾಂಪ್ರದಾಯಿಕ ನೃತ್ಯಗಳು ಪ್ರತಿ ಪ್ರದೇಶದ ಶ್ರೀಮಂತ ಪರಂಪರೆಯನ್ನು ಪ್ರದರ್ಶಿಸುತ್ತವೆ. ಜನರು ತಮ್ಮ ಹಂಚಿಕೆಯ ಇತಿಹಾಸ ಮತ್ತು ಪ್ರತಿ ರಾಜ್ಯವು ಭಾರತೀಯ ಒಕ್ಕೂಟಕ್ಕೆ ತರುವ ವಿಶಿಷ್ಟ ಪಾತ್ರದ ಬಗ್ಗೆ ಹೆಮ್ಮೆಪಡುತ್ತಾರೆ.

ಸ್ವಾತಂತ್ರ್ಯದ ಸಮಯದಲ್ಲಿ, ಈಶಾನ್ಯವು ಅಸ್ಸಾಂನ ಬಯಲು ಪ್ರದೇಶಗಳು, ಬೆಟ್ಟದ ಜಿಲ್ಲೆಗಳು ಮತ್ತು ಈಶಾನ್ಯ ಗಡಿ ಪ್ರದೇಶವನ್ನು ಒಳಗೊಂಡಿತ್ತು. ಮಣಿಪುರ ಮತ್ತು ತ್ರಿಪುರಾ ರಾಜ್ಯಗಳಿಗೆ 1949 ರಲ್ಲಿ ಕೇಂದ್ರಾಡಳಿತ ಪ್ರದೇಶದ ಸ್ಥಾನಮಾನ ನೀಡಲಾಯಿತು. ನಾಗಾಲ್ಯಾಂಡ್ ಡಿಸೆಂಬರ್ 1, 1963 ರಂದು ರಾಜ್ಯತ್ವವನ್ನು ಸಾಧಿಸಿದೆ.

ಅಸ್ಸಾಂ ಮರುಸಂಘಟನೆ (ಮೇಘಾಲಯ) ಕಾಯಿದೆ 1969 ರ ಮೂಲಕ ಮೇಘಾಲಯ ಸ್ವಾಯತ್ತ ರಾಜ್ಯವಾಯಿತು. ಅಂತಿಮವಾಗಿ, 1972 ರಲ್ಲಿ, ಈಶಾನ್ಯ ಮರುಸಂಘಟನೆ ಕಾಯಿದೆಯಿಂದ ತ್ರಿಪುರಾ ಮತ್ತು ಮೇಘಾಲಯಕ್ಕೆ ಸಂಪೂರ್ಣ ರಾಜ್ಯತ್ವವನ್ನು ನೀಡಲಾಯಿತು. 1986 ರ ಮಿಜೋ ಒಪ್ಪಂದದ ಪ್ರಕಾರ, ಮಿಜೋರಾಂ 1987 ರಲ್ಲಿ ಪೂರ್ಣ ಪ್ರಮಾಣದ ರಾಜ್ಯವಾಗಿ ಹೊರಹೊಮ್ಮಿತು. ಅದೇ ವರ್ಷದಲ್ಲಿ, (ಅರುಣಾಚಲ ಪ್ರದೇಶ) ಪೂರ್ಣ ರಾಜ್ಯತ್ವವನ್ನು ನೀಡಲಾಯಿತು.

ಸರಿಸುಮಾರು 10,491 ಕಿಮೀ2 ವರೆಗೆ ಹರಡಿರುವ ತ್ರಿಪುರವು ಉತ್ತರ, ದಕ್ಷಿಣ ಮತ್ತು ಪಶ್ಚಿಮಕ್ಕೆ ಬಾಂಗ್ಲಾದೇಶ ಮತ್ತು ಪೂರ್ವಕ್ಕೆ ಅಸ್ಸಾಂ ಮತ್ತು ಮಿಜೋರಾಂನಿಂದ ಗಡಿಯಾಗಿದೆ. ಹಿಂದೂ ಬಂಗಾಳಿ ಬಹುಸಂಖ್ಯಾತರು ವೈವಿಧ್ಯಮಯ ಸ್ಥಳೀಯ ಸಮುದಾಯಗಳೊಂದಿಗೆ ಸಹ–ಅಸ್ತಿತ್ವದಲ್ಲಿದ್ದಾರೆ. ಉಷ್ಣವಲಯದ ಹವಾಮಾನ, ಕಾಲೋಚಿತ ಮಳೆ ಮತ್ತು ಹಚ್ಚ ಹಸಿರಿನ ಕಾಡುಗಳು ತ್ರಿಪುರವನ್ನು ಅನನ್ಯವಾಗಿಸುತ್ತದೆ. ಪ್ರೈಮೇಟ್ ಜಾತಿಗಳಲ್ಲಿ ಸಮೃದ್ಧವಾಗಿರುವ ರಾಜ್ಯವು ವಿವಿಧ ಸಾಂಪ್ರದಾಯಿಕ ನೃತ್ಯಗಳು ಮತ್ತು ಉತ್ಸಾಹಭರಿತ ಆಚರಣೆಗಳನ್ನು ಹೊಂದಿದೆ.

ಇಂಫಾಲ್ ಕಂಗ್ಲೀಪಾಕ್ ಅಥವಾ ಸನಾಲಿಬಾಕ್ ಎಂದೂ ಕರೆಯುತ್ತಾರೆ, ಇದು ಮಣಿಪುರದ ರಾಜಧಾನಿಯಾಗಿ ಕಾರ್ಯನಿರ್ವಹಿಸುತ್ತದೆ. ನಾಗಾಲ್ಯಾಂಡ್, ಮಿಜೋರಾಂ, ಅಸ್ಸಾಂ ಮತ್ತು ಮ್ಯಾನ್ಮಾರ್ ಗಡಿಯಲ್ಲಿರುವ ಮಣಿಪುರವು ವೈವಿಧ್ಯಮಯ ಜನಸಂಖ್ಯೆಯನ್ನು ಹೊಂದಿದೆ. ಬ್ರಿಟಿಷ್ ಆಳ್ವಿಕೆಯಲ್ಲಿ, ಮಹಾರಾಜ ಬುಧಚಂದ್ರರು 1949 ರಲ್ಲಿ ರಾಜ್ಯವನ್ನು ಭಾರತದೊಂದಿಗೆ ವಿಲೀನಗೊಳಿಸುವ ಒಪ್ಪಂದಕ್ಕೆ ಸಹಿ ಹಾಕಿದರು. ಮಣಿಪುರದ ಕೃಷಿ ಆರ್ಥಿಕತೆ ಮತ್ತು ಜಲವಿದ್ಯುತ್ ಸಾಮರ್ಥ್ಯವು ಅದರ ಪ್ರಾಮುಖ್ಯತೆಯನ್ನು ಹೆಚ್ಚಿಸುತ್ತದೆ ಮತ್ತು ಇದು ಮಣಿಪುರಿ ನೃತ್ಯದ ಜನ್ಮಸ್ಥಳವಾಗಿದೆ.

ಸಂಸ್ಕೃತದಲ್ಲಿ ಮೋಡಗಳ ವಾಸಸ್ಥಾನ ಎಂದರ್ಥ, ಮೇಘಾಲಯವು 22,430 ಚದರ ಕಿಲೋಮೀಟರ್‌ಗಳಷ್ಟು ಹರಡಿದೆ. ಮೂಲತಃ ಅಸ್ಸಾಂನ ಭಾಗವಾಗಿದ್ದ ಇದು 1972 ರಲ್ಲಿ ಪ್ರತ್ಯೇಕ ರಾಜ್ಯವಾಯಿತು.

ರಾಜಧಾನಿ ಶಿಲ್ಲಾಂಗ್ ಖಾಸಿ, ಗಾರೋ ಮತ್ತು ಜೈನ್ತಿಯಾ ಬೆಟ್ಟಗಳಿಂದ ಆವೃತವಾಗಿದೆ. ಖಾಸಿ, ಪನಾರ್, ಗಾರೋ ಮತ್ತು ಇಂಗ್ಲಿಷ್ ಇಲ್ಲಿ ಮಾತನಾಡುವ ಭಾಷೆಗಳು. ಭಾರತದ ಅತ್ಯಂತ ತೇವ ಪ್ರದೇಶವಾದ ಮೇಘಾಲಯವು ಮುಖ್ಯವಾಗಿ ಕಾಡುಗಳಿಂದ ಆವೃತವಾಗಿದೆ.

ಕೇಂದ್ರದ ಕೃಷಿ ಸಚಿವರಾದ ಶ್ರೀ ಶಿವರಾಜ್ ಸಿಂಗ್ ಚೌಹಾಣ್ ಅವರು ಇಂದು ಬೆಳಗ್ಗೆ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರನ್ನು ಬೃಹತ್ ಕೈಗಾರಿಕೆ ಸಚಿವಾಲಯದಲ್ಲಿ ಭೇಟಿ ಮಾಡಿ ತಮ್ಮ ಪುತ್ರರ ವಿವಾಹಕ್ಕೆ ಆಮಂತ್ರಣ ನೀಡಿದರು.

ಈ ಸಂದರ್ಭದಲ್ಲಿ ಶ್ರೀಮತಿ ಚೌಹಾಣ್ ಅವರು ಕೂಡ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಕರ್ನಾಟಕದ ಕೃಷಿ ಕ್ಷೇತ್ರದ ಸಮಸ್ಯೆಗಳು, ಕೇಂದ್ರದಿಂದ ಸಿಗಬೇಕಿರುವ ನೆರವು, ಅಡಿಕೆ ಮತ್ತು ಕೊಬ್ಬರಿ ಬೆಳೆಗಾರರ ಸಮಸ್ಯೆಗಳ ಬಗ್ಗೆ ಕೃಷಿ ಸಚಿವರ ಜತೆ ಕುಮಾರಸ್ವಾಮಿ ಅವರು ಸಮಾಲೋಚನೆ ನಡೆಸಿದರು.

## ‘ಕೈ’ ಮುಖಂಡರಿಗೆ ಗ್ರಾಮಕ್ಕೆ ನಿಷೇಧ: ಹೀಗೊಂದು ಬೋರ್ಡ್..!

**ಮೈಸೂರು:** ಸಿಎಂ ಸಿದ್ದರಾಮಯ್ಯ ಕ್ಷೇತ್ರ ವರುಣ ವ್ಯಾಪ್ತಿಯ ನಗರ್ಲೆ ಗ್ರಾಮದಲ್ಲಿ ಕಾಂಗ್ರೆಸ್ ಮುಖಂಡರಿಗೆ ಗ್ರಾಮಕ್ಕೆ ನಿಷೇಧಿಸಲಾಗಿದೆ ಎಂದು ಬೋರ್ಡ್ ಹಾಕಲಾಗಿದೆ.

ಗ್ರಾಮದ ದಲಿತ ಸಮುದಾಯದಿಂದ ದಲಿತ ಸಮುದಾಯದ ಕಾಂಗ್ರೆಸ್ ಮುಖಂಡರ ವಿರುದ್ಧವೇ ಬೋರ್ಡ್ ಹಾಕಲಾಗಿದೆ. ಅಂಬೇಡ್ಕರ್ ಪ್ರತಿಮೆ ಮಾಡಿಸುತ್ತೇವೆ ಎಂದು ಚುನಾವಣೆಗೂ ಮುನ್ನ ಸಿಎಂ ಸಿದ್ದರಾಮಯ್ಯ ಹಾಗೂ ಹೆಚ್.ಸಿ ಮಹದೇವಪ್ಪರಿಂದ ದಲಿತ ಸಮುದಾಯಕ್ಕೆ ಭರವಸೆ ನೀಡಿದ್ದರು.

ಲೋಕಸಭಾ ಚುನಾವಣೆಗೂ ಮುನ್ನ ಎಂಎಲ್ ಸಿ ಯತೀಂದ್ರ ಸಿದ್ದರಾಮಯ್ಯ ಗುದ್ದಲಿ ಪೂಜೆ ಮಾಡಿದ್ದರು. 3 ಲಕ್ಷ ರೂ. ನೀಡಿ ಬೆಸ್ ಮೆಂಟ್ ನಿರ್ಮಾಣ ಮಾಡಲಾಗಿದ್ದು, ಉಳಿದ ಕಾಮಗಾರಿಗೆ ಇನ್ನೂ 20 ಲಕ್ಷ ರೂ. ಹಣಕ್ಕೆ ಬೇಡಿಕೆ ಇಡಲಾಗಿತ್ತು. ಆದರೆ ಈಗ ಕೇವಲ 3 ಲಕ್ಷ ನೀಡುತ್ತೇವೆ ಎಂದು ಸಿಎಂ ಆಪ್ತ ಸಿಟಿ ಕುಮಾರ್ ಹೇಳಿದ್ದು, ಈ ಹಿನ್ನಲೆಯಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಸಚಿವ ಹೆಚ್.ಸಿ ಮಹದೇವಪ್ಪ ಪರ ನಿಂತಿದ್ದ ನಗರ್ಲೆ ದಲಿತ ಸಮುದಾಯದ ನಾಯಕರ ವಿರುದ್ಧ ಸಿಡಿದ ದಲಿತ ಮುಖಂಡರು ಕಾಂಗ್ರೆಸ್ ಮುಖಂಡರಿಗೆ ಗ್ರಾಮಕ್ಕೆ ನಿಷೇಧಿಸಲಾಗಿದೆ ಅ ಎಂದು ಬೋರ್ಡ್ ಹಾಕಿದ್ದಾರೆ. ನಗರ್ಲೆ ಗ್ರಾಮದ ಕಾಂಗ್ರೆಸ್ ಮುಖಂಡರು ಕೈಲಾಗದವರು. ಗ್ರಾಮಕ್ಕೆ ಕಾಂಗ್ರೆಸ್ ಮುಖಂಡರನ್ನು ನಿಷೇಧಿಸಲಾಗಿದೆ ಎಂದು ದಲಿತ ಸಮುದಾಯದ ಮುಖಂಡರು ಬೋರ್ಡ್ ಹಾಕಿದ್ದಾರೆ.

## ಚಿನ್ನಾಭರಣ ಕಳವು: ಪ್ರಕರಣ ದಾಖಲು

**ಬೆಂಗಳೂರು** : ಉದ್ಯಮಿ ಹಾಗೂ ಜೆಡಿಎಸ್ ಎಂಎಲ್‌ಸಿ ಟಿ. ಎ ಶರವಣ ಅವರ ಮಾಲೀಕತ್ವದ ಶ್ರೀ ಸಾಯಿ ಗೋಲ್ಡ್ ಪ್ಯಾಲೇಸ್‌ನ ಚಿನ್ನಾಭರಣಗಳನ್ನ ಪಡೆದು ವಂಚಿಸಿರುವ ಆರೋಪ ಕೇಳಿ ಬಂದಿದೆ.

ಹಾಲ್ ಮಾರ್ಕ್ಸ್ ಸೀಲ್ ಹಾಕಲು ನೀಡಿದ್ದ 1.249 ಕೆ.ಜಿ ತೂಕದ ಚಿನ್ನಾಭರಣ ವಂಚಿಸಲಾಗಿದೆ ಎಂದು ಶ್ರೀ ಸಾಯಿ ಗೋಲ್ಡ್ ಪ್ಯಾಲೇಸ್‌ನ ಮ್ಯಾನೇಜರ್ ನೀಡಿದ ದೂರಿನನ್ವಯ ಬಸವನಗುಡಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಜನವರಿ 14ರಂದು ಶ್ರೀ ಸಾಯಿ ಗೋಲ್ಡ್ ಪ್ಯಾಲೇಸ್ ಬಸವನಗುಡಿ ಶಾಖೆಯ 1 ಕೆಜಿ 249 ಗ್ರಾಂ ಚಿನ್ನದ ಆಭರಣಗಳನ್ನು ಹಾಲ್ ಮಾರ್ಕ್ ಹಾಕಲು ನಗರತ್ ಪೇಟೆಯ ಕೊನಾರ್ಕ್ ಹಾಲ್ ಮಾರ್ಕಿಂಗ್ ಸೆಂಟರ್‌ಗೆ ನೀಡಲಾಗಿತ್ತು.

ಜನವರಿ 15ರಂದು ಚಿನ್ನಾಭರಣ ಕೊಡುವಂತೆ ಕೊನಾರ್ಕ್ ಹಾಲ್ ಮಾರ್ಕಿಂಗ್ ಸೆಂಟರ್‌ನ ಮಾಲೀಕ ಭರತ್ ಚಟಡ್ ಅವರನ್ನ ಕೇಳಿದಾಗ, "ತಮ್ಮ ಸಂಸ್ಥೆಯ ಉದ್ಯೋಗಿ ಕಳ್ಳತನ ಮಾಡಿದ್ದಾನೆ" ಎಂದು ಉತ್ತರಿಸುತ್ತಿದ್ದಾರೆ ಎಂದು ದೂರಲಾಗಿದೆ.

ಶ್ರೀ ಸಾಯಿ ಗೋಲ್ಡ್ ಪ್ಯಾಲೇಸ್ ಬಸವನಗುಡಿ ಶಾಖೆಯ ಮ್ಯಾನೇಜರ್ ನೀಡಿರುವ ದೂರಿನನ್ವಯ ಬಸವನಗುಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಮೊದಲ ಪುಟದಿಂದ

## ಬಿಜೆಪಿ ಸಂವಿಧಾನ ವಿರೋಧಿ

ಸ್ವರಾಜ್ಯದ ಕನಸನ್ನು ನನಸು ಮಾಡುವ ಗುರಿಯೊಂದಿಗೆ ಜೈ ಭಾಪು–ಜೈ ಭೀಮ್–ಜೈ ಸಂವಿಧಾನ ಅಭಿಯಾನಯನ್ನು ಮುನ್ನಡೆಸುತ್ತೇವೆ ಎಂದರು.

ನೂರು ವರ್ಷಗಳ ಹಿಂದೆ ಕರ್ನಾಟಕದಲ್ಲಿ ನಡೆದ ಎಐಸಿಸಿ ಅಧಿವೇಶನದ ಅಧ್ಯಕ್ಷತೆ ವಹಿಸಿದ್ದು ಮಹಾತ್ಮಗಾಂಧಿ. ಆ ದಿನ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಈ ನೆಲದಲ್ಲಿ ಹೆಚ್ಚಿಸಿದರು ಎಂದು ಸ್ಮರಿಸಿದರು.

ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಸಂಸದೆ ಪ್ರಿಯಾಂಕ ಗಾಂಧಿ, ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ಉಪ ಅಧ್ಯಕ್ಷ ಲವಾಣಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

## ಕಡತಕ್ಕೆ ಟ್ರಂಪ್ ಸಹಿ

ಮಂದಿಯನ್ನು ಮನ್ನಿಸುವ ಆದೇಶವೂ ಸೇರಿದೆ. ಇದರ ಜೊತೆಗೆ ಪ್ರಮುಖರು ಆರೋಪಿಗಳ ಶಿಕ್ಷೆ ಕಡಿಮೆ ಮಾಡುವ ಆದೇಶಕ್ಕೂ ಡೊನಾಲ್ಡ್ ಟ್ರಂಪ್ ಸಹಿ ಹಾಕಿದ್ದು ಅವರ ಬೆಂಬಲಿಗರು ಮತ್ತು ಕಾರ್ಯಕರ್ತರಲ್ಲಿ ಹರ್ಷದ ಹೊನಲು ಮೂಡಿದೆ.

ಗಲಭೆಯ ಸಮಯದಲ್ಲಿ ಎಸಗಿದ ಅಪರಾಧಗಳಿಗಾಗಿ ಆರೋಪ ಹೊರಿಸಲ್ಪಟ್ಟ ಮತ್ತು ಅನೇಕ ಪ್ರಕರಣಗಳಲ್ಲಿ ಜೈಲಿನಲ್ಲಿರಿಸಲ್ಪಟ್ಟ ಬೆಂಬಲಿಗರಿಗೆ ಸಹಾಯ ಮಾಡುವ ರಿಪಬ್ಲಿಕನ್ ಪಕ್ಷದ ಪ್ರಚಾರ ಭರವಸೆಯಲ್ಲಿ ನೀಡಿದ್ದ ಭರವಸೆಯನ್ನು ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಈಡೇರಿಸುವ ಮೂಲಕ ನುಡಿದಂತೆ ನಡೆದಿದ್ದಾರೆ.

ಹಾಲಿ ಅಧ್ಯಕ್ಷರಾಗಿದ್ದ ಡೊನಾಲ್ಡ್ ಟ್ರಂಪ್ ಅವರನ್ನು ಡೆಮೋಕ್ರಾಟ್ ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿ ಜೋ ಬಿಡೆನ್ ಅವರ 2020 ರಲ್ಲಿ ಸೋಲಿಸಿ ವಿಜಯ ಆಚರಿಸುವ ವೇಲೆ ಡೊನಾಲ್ಡ್ ಟ್ರಂಪ್ ಬೆಂಬಲಿಗರು ಕಾಪಿಟಲ್ ಭವನಕ್ಕೆ ನುಗ್ಗಿ ದಾಂಧಲೆ ನಡೆಸಿದ್ದಲ್ಲದೆ ಪೊಲೀಸರ ಮೇಲೆ ಹಲ್ಲೆ ನಡೆಸಿದ್ದರು

ಡೊನಾಲ್ಡ್ ಟ್ರಂಪ್ ಕ್ಷಮಾದಾನ ನೀಡುವ ಕಡತಕ್ಕೆ ಸಹಿ ಹಾಕುತ್ತಿದ್ದಂತೆ ಬಲಪಂಥೀಯ ಪ್ರೌಡ್ ಬಾಯ್ಸ್ ಗುಂಪಿನ ಮಾಜಿ ನಾಯಕ ಎನ್ರಿಕ್ ಟ್ಯಾರಿಯೊ ಅವರ ವಕೀಲರು ತಮ್ಮ ಕಕ್ಷಿದಾರರನ್ನು ಫೆಡರಲ್ ಜೈಲಿನಿಂದ ಬಿಡುಗಡೆ ಮಾಡಲಾಗುತ್ತದೆ ಎಂದು ನಿರೀಕ್ಷೆಯಲ್ಲಿದ್ದೇವೆ ಎಂದಿದ್ದಾರೆ 2021ರ ಜನವರಿ 6 ರಂದು ನಡೆದ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂಎತ ಶಿಕ್ಷೆ ಅನುಭವಿಸುತ್ತಿರುವ ಕೆಲವು ಫೆಡರಲ್ ಕೈದಿಗಳನ್ನು ಸೋಮವಾರದೊಳಗೆ ಬಿಡುಗಡೆ ಮಾಡಬಹುದು ಎಂದು ಬ್ಯೂರೋ ಆಫ್ ಪ್ರಿಸನ್ಸ್ ವಕ್ತಾರರು ದೃಢಪಡಿಸಿದ್ದಾರೆ ಡೊನಾಲ್ಟ್ ಟ್ರಂಪ್ ಅವರ ಪ್ರಚೋದನಕಾರಿ ಭಾಷಣದ ನಂತರ 2021 ರಲ್ಲಿ ಸಾವಿರಾರು ಜನರು ಕ್ಯಾಪಿಟಲ್‌ಗೆ ಬಂದು ಬ್ಯಾರಿಕೇಡ್‌ಗಳನ್ನು ಕಿತ್ತುಹಾಕಿದರು, ಪೊಲೀಸರೊಂದಿಗೆ ಹಲ್ಲೆ ನಡೆಸಿ ಚುನಾವಣಾ ಫಲಿತಾಂಶ ರದ್ದು ಗೊಳಿಸುವಂತೆ ಆಗ್ರಹಿಸಿದ್ದರು ಗಲಭೆಯಲ್ಲಿ ಆರೋಪಿಸಲಾದ ಸುಮಾರು 1,600 ಜನರಲ್ಲಿ ಅನೇಕರನ್ನು ಕಾನೂನು ವ್ಯವಸ್ಥೆಯಿಂದ ಅನ್ಯಾಯವಾಗಿ ನಡೆಸಲಾಗಿದೆ ಮತ್ತು ಸೋಮವಾರ ಪ್ರಮಾಣವಚನ ಸ್ವೀಕರಿಸಿದ ನಂತರ ಕ್ಯಾಪಿಟಲ್‌ನಲ್ಲಿ ಬೆಂಬಲಿಗರಿಗೆ ನೀಡಿದ ಹೇಳಿಕೆಗಳಲ್ಲಿ ಅವರನ್ನು "ಒತ್ತೆಯಾಳುಗಳು" ಎಂದು ಕರೆದಿದ್ದಾರೆ ಎಂದು ಟ್ರಂಪ್ ವಾದಿಸಿದ್ದಾರೆ.

## ತಾತ್ಕಾಲಿಕ ಅಮಾನತು

ನೋಟಿಸ್‌ಗೆ ಉತ್ತರಿಸಿದ್ದ ದರ್ಶನ್, "ತಾವು ಓರ್ವ ಸೆಲೆಬ್ರಿಟಿ, ತಾವು ಹೋಗುವ ಕಡೆಗಳಲ್ಲಿ ಸಾಕಷ್ಟು ಜನ ಸೇರುತ್ತಾರೆ. ಈ ವೇಳೆ ತಮ್ಮ ಆತ್ಮರಕ್ಷಣೆಗಾಗಿ ಗನ್ ಅವಶ್ಯಕತೆಯಿದೆ" ಎಂದಿದ್ದರು.

ದರ್ಶನ್ ನೀಡಿದ್ದ ಕಾರಣ ಪರಿಗಣಿಸದ ಬೆಂಗಳೂರು ಪೊಲೀಸ್ ಆಡಳಿತ ವಿಭಾಗ, ಮುನ್ನೆಚ್ಚರಿಕಾ ಕ್ರಮವಾಗಿ ದರ್ಶನ್ ಅವರ ಗನ್ ಲೈಸೆನ್ಸ್ ತಾತ್ಕಾಲಿಕ ಅಮಾನತು ಮಾಡಿದೆ.

ಗನ್ ಲೈಸೆನ್ಸ್ ರದ್ದು ಮಾಡದಂತೆ ಮನವಿ ಮಾಡಿದ್ದ ದರ್ಶನ್: ನಟ ಪಡೆದಿರುವ ಗನ್ ಅನ್ನು ರದ್ದುಪಡಿಸುವ ಸಂಬಂಧ ಪೊಲೀಸ್ ಇಲಾಖೆ ನೋಟಿಸ್ ಜಾರಿ ಮಾಡಿತ್ತು. ಇದಕ್ಕೆ ಉತ್ತರಿಸಿದ್ದ ದರ್ಶನ್, ಗನ್ ಲೈಸೆನ್ಸ್ ರದ್ದುಪಡಿಸದಂತೆ ದರ್ಶನ್ ಕೋರಿದ್ದರು.

ರೇಣುಕಾಸ್ವಾಮಿ ಹತ್ಯೆ ಕೇಸ್‌ನಲ್ಲಿ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿಲ್ಲ. ಕಾನೂನಾತ್ಮಕವಾಗಿ ಜಾಮೀನು ಪಡೆದುಕೊಂಡಿದ್ದೇನೆ. ಜಾಮೀನಿಗೆ ವಿಧಿಸಿರುವ ಷರತ್ತುಗಳನ್ನೂ ಪಾಲನೆ ಮಾಡುತ್ತಿದ್ದೇನೆ. ಬೆಂಗಳೂರಿನಿಂದ ಹೊರಗೆ ಹೋಗುವ ಮುನ್ನ ಕೋರ್ಟ್ ಅನುಮತಿ ಸಹ ಪಡೆದಿದ್ದೇನೆ. ಹೀಗಾಗಿ, ತಾವು ಪಡೆದ ಬಂದೂಕಿನ ಪರವಾನಗಿ ರದ್ದುಪಡಿಸುವ ಅಗತ್ಯ ಇಲ್ಲ. ಜೊತೆಗೆ, ತಾನು ಕನ್ನಡ ಸಿನಿಮಾ ರಂಗದ ಖ್ಯಾತ ನಟನಾಗಿದ್ದು, ಅಸಂಖ್ಯಾತ ಅಭಿಮಾನಿ ಬಳಗವಿದೆ. ಸಿನಿಮಾ ಚಿತ್ರೀಕರಣ ಮತ್ತು ವೈಯಕ್ತಿಕ ಕಾರ್ಯಕ್ರಮಗಳಿಗೆ ಬೆಂಗಳೂರಿನಿಂದ ಹೊರಗೆ ಪ್ರಯಾಣಿಸುವೆ. ನನ್ನ ಭದ್ರತೆ ಸಲುವಾಗಿ ಬಂದೂಕು ಬಳಕೆ ಅಗತ್ಯವಾಗಿದೆ. ಸುರಕ್ಷತೆಯ ಹಿನ್ನೆಲೆಯಲ್ಲಿ ಬಂದೂಕಿನ ಅಗತ್ಯವಿದೆ ಎಂದು ದರ್ಶನ್ ಮನವಿ ಮಾಡಿದ್ದರು.ಕಳೆದ ಜೂನ್ 8ರಂದು ಚಿತ್ರದುರ್ಗ ಮೂಲದ ರೇಣುಕಾಸ್ವಾಮಿಯನ್ನ ಅಪಹರಿಸಿ ಬರ್ಬರವಾಗಿ ಹತ್ಯೆ ಮಾಡಿದ ಆರೋಪದಡಿ ಜೂ.8ರಂದು ನಟ ದರ್ಶನ್, ಪವಿತ್ರಾ ಗೌಡ ಸೇರಿದಂತೆ ಹಂತ–ಹಂತವಾಗಿ 17 ಮಂದಿಯನ್ನು ಕಾಮಾಕ್ಷಿಪಾಳ್ಯ ಠಾಣೆ ಪೊಲೀಸರು ಬಂಧಿಸಿದ್ದರು. ಎಲ್ಲಾ ಆರೋಪಿಗಳು ಸದ್ಯ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದಾರೆ.

## ಆದರ್ಶವನ್ನು ವಿಶ್ವ ಒಪ್ಪಿದೆ

ಸ್ವಾತಂತ್ರ್ಯ ಬಂದ ನಂತರ ದೇಶಕ್ಕೆ ಪ್ರಜಾಪ್ರಭುತ್ವ ವ್ಯವಸ್ಥೆ ನೀಡಲಾಗಿದ್ದು, ಅದರಿಂದಲೇ

ನಾವು ಇಂದು ನಾಯಕರಾಗಿದ್ದೇವೆ. ಇದನ್ನು ಉಳಿಸಿಕೊಳ್ಳಲು ನಾವು ಇಂದು ಸೇರಿದ್ದೇವೆ" ಎಂದು ತಿಳಿಸಿದರು.

**ಗಾಂಧಿ, ಅಂಬೇಡ್ಕರ್ ಹೆಸರಲ್ಲಿ ಜಾತ್ರೆ ಮಾಡುತ್ತಿದ್ದೇವೆ:**

ಗಾಂಧಿ ಹಾಗೂ ಅಂಬೇಡ್ಕರ್ ಹೆಸರಲ್ಲಿ ಕಾಂಗ್ರೆಸ್ ಜಾತ್ರೆ ಮಾಡುತ್ತಿದೆ ಎಂಬ ಬಿಜೆಪಿ ನಾಯಕರ ಟೀಕೆ ಬಗ್ಗೆ ಕೇಳಿದಾಗ, "ಹೌದು, ನಾವು ಜಾತ್ರೆ ಮಾಡುತ್ತಿದ್ದೇವೆ. ಇಲ್ಲ ಎಂದವರು ಯಾರು? ಒಳ್ಳೆಯದಾಗಬೇಕು, ಸಂಸ್ಕೃತಿ ಉಳಿಯಲು ಜಾತ್ರೆ ಮಾಡಲಾಗುತ್ತದೆ. ಸಂಕ್ರಾಂತಿ ಸಮಯದಲ್ಲಿ ಹೊಸ ಸಂಕ್ರಮಣ, ಹೊಸ ಹುರುಪು ರೈತರ ಬದುಕಿಗೆ ಒಳ್ಳೆಯದಾಗಲಿ ಎಂದು ಮಾಡುತ್ತಾರೆ. ಅದೇ ರೀತಿ ಗಾಂಧೀಜಿ ಅವರು ಕಾಂಗ್ರೆಸ್ ಅಧ್ಯಕ್ಷರಾಗಿ ನೂರು ವರ್ಷಗಳು ತುಂಬಿರುವ ಹಿನ್ನೆಲೆಯಲ್ಲಿ ನಾವು ಜಾತ್ರೆ ಮಾಡುತ್ತಿದ್ದೇವೆ" ಎಂದು ತಿಳಿಸಿದರು. ಕಾರ್ಯಕ್ರಮದ ಬಗ್ಗೆ ಬಿಜೆಪಿ ನಾಯಕರ ಟೀಕೆ ಬಗ್ಗೆ ಕೇಳಿದಾಗ, "ನಾನು ಬಿಜೆಪಿ ನಾಯಕರ ಟೀಕೆಗಳ ಬಗ್ಗೆ ಪ್ರತಿಕ್ರಿಯೆ ನೀಡುವುದಿಲ್ಲ. ಅವರಿಗೆ ಸ್ವಾತಂತ್ರ್ಯ ಚಳುವಳಿ ಎಂದರೆ ಏನು ಎಂಬುದೇ ಗೊತ್ತಿಲ್ಲ. ಈ ಚಳುವಳಿಯಲ್ಲಿ ಕಾಂಗ್ರೆಸಿಗರು ಮಾಡಿದ ತ್ಯಾಗ ಬಲಿದಾನಗಳ ಬಗ್ಗೆ ಅವರಿಗೆ ಅರಿವಿಲ್ಲ. ಗೋಡ್ಸೆ ಸಿದ್ಧಾಂತ ಪಕ್ಷದವರಿಂದ ನಾವು ಮಾತು ಕೇಳಬೇಕಿಲ್ಲ. ಈ ದೇಶಕ್ಕೆ ಗಾಂಧೀಜಿ, ಇಂದಿರಾಗಾಂಧಿ, ರಾಜೀವ್ ಗಾಂಧಿ ಅವರ ಪ್ರಾಣತ್ಯಾಗ, ಸೋನಿಯಾ ಗಾಂಧಿ ಅವರ ಅಧಿಕಾರ ತ್ಯಾಗದ ಬಗ್ಗೆ ನಮಗೆ ಗೊತ್ತಿದೆ" ಎಂದು ಹೇಳಿದರು.

**ಯಾರ ಹಣೆಯಲ್ಲಿ ಏನು ಬರೆದಿದೆಯೋ ಕಾದು ನೋಡೋಣ:**

ನೀವು ಅನೇಕ ತ್ಯಾಗಗಳನ್ನು ಮಾಡಿದ್ದೀರಿ ಎನ್ನುವ ಹೇಳಿಕೆ ಬಗ್ಗೆ ಕೇಳಿದಾಗ, "ನಾನು ಅಂತಹ ದೊಡ್ಡ ನಾಯಕನಾಗಲು ಆಗುವುದಿಲ್ಲ. ನಾನು ಕಾಂಗ್ರೆಸ್ ಪಕ್ಷದ ಸಾಮಾನ್ಯ ಕಾರ್ಯಕರ್ತ. ಯಾರ ಹಣೆಯಲ್ಲಿ ಏನು ಬರೆದಿದೆಯೋ ಕಾದುನೋಡೋಣ" ಎಂದರು.

ಗಾಂಧಿ ಹತ್ಯೆ ಬಗ್ಗೆ ನೆಹರೂ ಅವರ ಮೇಲೆ ಯತ್ನಾಳ್ ಅವರು ಮಾಡಿರುವ ಆರೋಪದ ಬಗ್ಗೆ ಕೇಳಿದಾಗ, "ನಾನು ಇಂತಹ ಹೇಳಿಕೆಗಳಿಗೆ ಪ್ರತಿಕ್ರಿಯೆ ನೀಡುವುದಿಲ್ಲ. ಇಂತಹ ಹೇಳಿಕೆಗಳು ಆ ಪಕ್ಷದ ಮನಸ್ಥಿತಿ ತೋರುತ್ತದೆ. ಅವರ ಹೇಳಿಕೆ ಬಗ್ಗೆ ಅವರ ಪಕ್ಷ ಉತ್ತರ ನೀಡಬೇಕು" ಎಂದರು.

ಕಾರ್ಯಕ್ರಮದ ಮೂಲಕ ಪಕ್ಷದಲ್ಲಿ ಒಗ್ಗಟ್ಟು ಮೂಡುವುದೇ ಎಂದು ಕೇಳಿದಾಗ, "ನಿಮಗೆ ತಲೆ ಕೆಟ್ಟಿದೆ. ನೀವು ಮಾಧ್ಯಮಗಳು ನಿಮ್ಮದೇ ಆದ ಘನತೆ ಗಳಿಸಿದ್ದೀರಿ. ನಮ್ಮಲ್ಲಿ ಒಗ್ಗಟ್ಟಿಲ್ಲ ಎಂದು ಹೇಳಿದವರು ಯಾರು? ಯಾರೋ ಹೇಳಿದ ಮಾತುಗಳಿಗೆ ನಾನು ಉತ್ತರ ನೀಡಲು ಆಗುವುದಿಲ್ಲ. ಯುವ ಪತ್ರಕರ್ತರು, ನಿಮ್ಮಲ್ಲಿರುವ ಹಿರಿಯರಿಂದ ಸರಿಯಾಗಿ ತರಬೇತಿ ಪಡೆಯಿರಿ" ಎಂದು ಮಾಧ್ಯಮದವರಿಗೆ ಕಿವಿಮಾತು ಹೇಳಿದರು.

ರಾಜ್ಯದಲ್ಲಿ ದರೋಡೆ ಪ್ರಕರಣಗಳು ಹೆಚ್ಚುತ್ತಿವೆ ಎಂದು ಕೇಳಿದಾಗ, "ಈ ವಿಚಾರವಾಗಿ ಗೃಹಸಚಿವರು ಉತ್ತರ ನೀಡುತ್ತಾರೆ" ಎಂದರು.

# ದೇವಾಲಯದ ಅಭಿವೃದ್ಧಿಗೆ ಕಾರ್ಯಗಳಿಗೆ ಸದಾ ಸಿದ್ಧ:ರಾಜೀವ್



**ಶಿಡ್ಲಘಟ್ಟ:** ತಲಕಾಯಲಬೆಟ್ಟದ ಶ್ರೀವೆಂಕಟರಮಣಸ್ವಾಮಿ ದೇವಾಲಯದ ಅಭಿವೃದ್ಧಿಗೆ ಕಾರ್ಯಗಳಿಗೆ ವ್ಯವಸ್ಥಾಪನಾ ಸಮಿತಿ ಹಾಗೂ ಭಕ್ತರೊಂದಿಗೆ ನಾನೂ ಕೈ ಜೋಡಿಸಲು ಸದಾ ಸಿದ್ದ ಎಂದು ಕೆಪಿಸಿಸಿ ಸಂಯೋಜಕರಾದ ರಾಜೀವ್‌ಗೌಡ ತಿಳಿಸಿದರು.

ತಾಲ್ಲೂಕಿನ ಸಾದಲಿ ಹೋಬಳಿ ತಲಕಾಯಲಬೆಟ್ಟದ ಪುರಾಣ ಪ್ರಸಿದ್ಧ ಶ್ರೀವೆಂಕಟರಮಣಸ್ವಾಮಿ ದೇವಾಲಯದ ರಾಜಗೋಪುರ, ದ್ವಾರ ಬಾಗಿಲು ಮತ್ತು ಬೆಟ್ಟದ ಮೇಲೆ ಡಿಜಿಟಲ್‌ನ ಮೂರು ನಾಮದ ಚಿನ್ನೆಃಯ ಪ್ರತಿಮೆ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಸಾವಿರಾರು ವರ್ಷಗಳ ಇತಿಹಾಸ ದೇವಾಲಯಕ್ಕೆ ಇದ್ದು ಗ್ರೇಡ್–1 ದೇವಾಲಯವಾಗಿದ್ದು ರಾಜ್ಯದ ಮೂಲೆ ಮೂಲೆ ಗಳಲ್ಲೂ ಭಕ್ತರಿದ್ದಾರೆ,ಪ್ರತಿ ವರ್ಷ ಫೆಬ್ರವರಿಯಲ್ಲಿ ನಡೆಯುವ ಶ್ರೀಮತ್ಯಕಲ್ಯಾಣ ಬ್ರಹ್ಮರಥೋತ್ಸವ ಸೇರಿದಂತೆ ವರ್ಷದ ಎಲ್ಲಾ ದಿನಗಳಲ್ಲೂ ಇಲ್ಲಿ ಪೂಜೆ ನಡೆಯಲಿದೆ ಎಂದು ಹೇಳಿದರು.

ಹಾಗಾಗಿ ಭಕ್ತರಿಗೆ ಇನ್ನಷ್ಟು ಮೂಲ ಸೌಕರ್ಯಗಳನ್ನು ಒದಗಿಸುವ ಜತೆಗೆ ದೇವಾಲಯದ ರಾಜಗೋಪುರ,ದ್ವಾರ ಬಾಗಿಲು ಮತ್ತು ಬೆಟ್ಟದ ಮೇಲೆ 3 ನಾಮದ ಚಿನ್ನೆಃಯನ್ನು ಅಳವಡಿಸುವುದು ಸೇರಿ ಇನ್ನೂ ಅನೇಕ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲಾಗುವುದು ಎಂದರು.

ದೇವಾಲಯದ ಅಭಿವೃದ್ಧಿ, ಭಕ್ತರಿಗೆ ಮೂಲಸೌಕರ್ಯಗಳನ್ನು ಕಲ್ಪಿಸುವಲ್ಲಿ ಜಾತಿ, ಧರ್ಮ, ಪಕ್ಷ ತಾರತಮ್ಯ ಇರಬಾರದು. ದೇವಾಲಯಗಳ ಕಾರ್ಯ ಎಂದರೆ ಅದು ನಮ್ಮ ಬದುಕಿನಲ್ಲಿ ನಮಗೆ ಸಿಗುವ ದೇವರ ಸೇವೆ ಮಾಡುವಂತಹ ಕಾರ್ಯ ಎಂದು ನಾನು ಭಾವಿಸಿದ್ದೇನೆ" ಎಂದು ಹೇಳಿದರು.

ಫೆಬ್ರವರಿ ತಿಂಗಳಲ್ಲಿ ಬ್ರಹ್ಮರಥೋತ್ಸವ ನಡೆಯಲಿದ್ದು, ಅಷ್ಟರೊಳಗೆ ರಾಜಗೋಪುರ, ಬೆಟ್ಟದ ಮೇಲೆ ತೆರಳಲು ಭಕ್ತರಿಗೆ ರಸ್ತೆ, ದ್ವಾರ ಬಾಗಿಲುಗಳ ನಿರ್ಮಾಣ, 3 ನಾಮಗಳ ಡಿಜಿಟಲ್ ಚಿನ್ನೆಃಯ ಅಳವಡಿಕೆ ಕಾರ್ಯವನ್ನು ಪೂರ್ಣಗೊಳಿಸಿ ಅವುಗಳ ಉದ್ಘಾಟನೆಗೆ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರನ್ನು ಆಹ್ವಾನಿಸಲಾಗುವುದು ಎಂದು ವಿವರಿಸಿದರು.

ಭೂಮಿ ಪೂಜೆ ನೆರವೇರಿಸುವುದಕ್ಕೂ ಮುನ್ನ ಶ್ರೀವೆಂಕಟರಮಣಸ್ವಾಮಿ ದೇವಾಲಯದಲ್ಲಿ ಪೂಜೆ ನೆರವೇರಿಸಿ ಎಲ್ಲಾ ಕಾಮಗಾರಿಗಳು ನಿರ್ವಿಘ್ನವಾಗಿ ನೆರವೇರಲಿ ಎಂದು ಭಗವಂತನಲ್ಲಿ ಪ್ರಾರ್ಥಿಸಲಾಯಿತು.

ಈ ಸಂದರ್ಭದಲ್ಲಿ ದೇವಾಲಯದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಡಿ.ಪಿ.ನಾಗರಾಜ್, ಸಾದಲಿ ಗೋವಿಂದರಾಜು, ತಿಮ್ಮನಾಯಕನಹಳ್ಳಿ ಆನಂದ್, ಶ್ರೀನಿವಾಸರೆಡ್ಡಿ, ಪಾಂಡುರಂಗಪ್ಪ ಮತ್ತಿತರರು ಪಾಲ್ಗೊಂಡಿದ್ದರು.

# ಕೋ ಆಪರೇಟಿವ್ ನೂತನ ಶಾಖೆ ಉದ್ಘಾಟನೆ



**ಮಾಲೂರು:** ಪಟ್ಟಣದ ಅರಳೇರಿ ರಸ್ತೆಯಲ್ಲಿ ನೂತನವಾಗಿ ಕೆಳಿಕೆ ಸೊಣ್ಣಪ್ಪ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿ ಮಾಲೂರು ಶಾಖೆಯನ್ನು ಉದ್ಘಾಟಿಸಲಾಯಿತು.

ಸೊಸೈಟಿ ಮುಖ್ಯ ವ್ಯವಸ್ಥಾಪಕ ವಿ.ಮನೋಜ್ ಕುಮಾರ್, ಮಾತನಾಡಿ, ಈ ಸೊಸೈಟಿಯ ಉದ್ದೇಶ ಎಲ್ಲಾ ವರ್ಗದ ಸಣ್ಣ ವ್ಯಾಪಾರಿಗಳು, ಮಹಿಳಾ ಮತ್ತು ಗೃಹ ಸದಸ್ಯರಿಗೆ ಹಣಕಾಸು ಮತ್ತು ಉಪಯುಕ್ತ ವಿವಿಧೋದ್ದೇಶ ಸೇವೆಗಳ ಸಲುವಾಗಿ ಕೆಳಿಕೆ ಸೊಣ್ಣಪ್ಪ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿಯನ್ನು ಪ್ರಾರಂಭಿಸಿಲಾಗಿದೆ.

ಉಳಿತಾಯ ಮತ್ತು ಚಾಲ್ತಿ ಖಾತೆ, ಇ ಸ್ಟಾಂಪ್ ಪೇಪರ್, ಖಾಯಂ, ಅವರ್ತ, ನಿಖರ, ಪಿಗ್ಮಿ ಠೇವಣಿ ಖಾಯಂ ಖಾತೆ ಬಡ್ಡಿ ಠೇವಣಿಗಳನ್ನು ಪಡೆದು ನಿಮ್ಮ ಹಣವನ್ನು ದ್ವಹುಣಹೊಳಿಸಿ ಠೇವಣಿಗಳ ಮೇಲಿನ 8 ರಿಂದ10% ಬಡ್ಡಿ ವರೆಗೆ ಪಡೆಯಬಹುದಾಗಿದೆ. ಈ ಸಂದರ್ಭದಲ್ಲಿ ಸೊಸೈಟಿ ಮುಖ್ಯ ವ್ಯವಸ್ಥಾಪಕ ಮನೋಜ್ ಕುಮಾರ್, ಅನಿಲ್ ಕುಮಾರ್, ಮುನಿರತ್ನಮ್ಮ, ವೆಂಕಟೇಶ್, ನಮ್ಮ ಕರ್ನಾಟಕ ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಚಾಕನಹಳ್ಳಿ ನಾಗರಾಜ್, ಉಪಾಧ್ಯಕ್ಷ ಆಟೋ ಶ್ರೀನಿವಾಸ್, ಜಿಲ್ಲಾ ಗೌರವಾಧ್ಯಕ್ಷ ಬಡಗಿಶ್ರೀನಿವಾಸ್, ಜಿಲ್ಲಾಧ್ಯಕ್ಷ ಎಸ್.ಎಂ.ರಾಜು, ಚನ್ನಕೃಷ್ಣ, ಕೆ.ಎನ್. ಜಗದೀಶ್, ಕರವೇ ತಾಲ್ಲೂಕು ಅಧ್ಯಕ್ಷ ಶಿವಾರನಾಣಿ , ಮಡಿವಾಳ ವೆಂಕಟೇಶ್, ಶ್ರೀನಿವಾಸ್, ಟಸ್ಕರ್ ಬಾಬು, ಮೊಟ್ಟೆ ನಾರಾಯಣಸ್ವಾಮಿ, ನಾರಾಯಣರೆಡ್ಡಿ, ಮಂಜುನಾಥ್ , ಕೃಷ್ಣಪ್ಪ ಸೇರಿದಂತೆ ಹಲವಾರು ಮುಖಂಡರು ಭಾಗವಹಿಸಿ ಶುಭಾ ಹಾರೈಸಿದರು.

# ತಿಮ್ಮೇಗೌಡ ಬಸವನಗುಡಿ ಕ್ಷೇತ್ರದ ಅಧ್ಯಕ್ಷ



**ಬೆಂಗಳೂರು:** ನಗರ ಅಧ್ಯಕ್ಷ ಹೆಚ್‌ಎಂ ರಮೇಶ್ ಗೌಡ ಹೆಣ್ಣೂರ್ ರವರು ವರಿಷ್ಠರ ಆದೇಶದಂತೆ ಬಸವನಗುಡಿ ವಿಧಾನಸಭಾ ಕ್ಷೇತ್ರದ ಅಧ್ಯಕ್ಷರನ್ನಾಗಿ ತಿಮ್ಮೇಗೌಡರಿಗೆ ಆದೇಶ ಪತ್ರ ನೀಡಿದರು.

ನಂತರ ಮಾತನಾಡಿದ ರಮೇಶ್ ಗೌಡ ಹೆಣ್ಣೂರ್ ಅವರು ಬಸವನಗುಡಿ ವಿಧಾನಸಭಾ ಕ್ಷೇತ್ರದಲ್ಲಿರುವ ಟಿ ತಿಮ್ಮೇಗೌಡರು ಸುಮಾರು ಮೂರು ಬಾರಿ ಬಿಬಿಎಂಪಿ ಚುನಾವಣೆಯಲ್ಲಿ ಜಯಗಳಿಸಿ ಬಿಬಿಎಂಪಿಯಲ್ಲಿ ವಿರೋಧ ಪಕ್ಷದ ನಾಯಕರಾಗಿ ಅಧಿಕಾರ ಮಾಡಿದ್ದಾರೆ ಬಸವನಗುಡಿ ತಮ್ಮ ಕ್ಷೇತ್ರದಲ್ಲಿ ಅನೇಕ ಜನಪರ ಕಾರ್ಯಕ್ರಮಗಳನ್ನು ಮಾಡಿ ಸೈ ಎನಿಸಿಕೊಂಡಿದ್ದಾರೆ ಸರ್ಕಾರದ ಸೌಲಭ್ಯಗಳನ್ನು ಒದಗಿಸಿ ಕೊಟ್ಟಿದ್ದಾರೆ ಬಸವನಗುಡಿ ಕ್ಷೇತ್ರದ ಜನಾನುರಾಗಿ ಯಾಗಿರುವ ಟೀ ತಿಮ್ಮೇಗೌಡರಿಗೆ ಬಸವನ ಗುಡಿ ಕ್ಷೇತ್ರದ ಅಧ್ಯಕ್ಷರನ್ನಾಗಿ ಮಾಡಿರುವುದು ಸಂತೋಷ ತಂದಿದೆ ಎಂದರು

ನಂತರ ಮಾತನಾಡಿದ ತಿಮ್ಮೆಗೌಡರು ಈ ಕ್ಷೇತ್ರದಲ್ಲಿ ನಾನು ಸುಮಾರು ಮೂವತ್ತು ವರ್ಷಗಳಿಂದ ಜೆಡಿಎಸ್ ಪಕ್ಷದಲ್ಲಿ ದುಡಿದಿದ್ದೇನೆ ಹಾಗಾಗಿ ಇಲ್ಲಿನ ಜನರ ನಾಡಿಮಿಡಿತ ನನಗೆ ಚೆನ್ನಾಗಿ ಗೊತ್ತಿದೆ ಪಕ್ಷದ ಹಿತ ದೃಷ್ಟಿಯಿಂದ ಎಲ್ಲರನ್ನೂ ಒಗ್ಗೂಡಿಸಿಕೊಂಡು ಹೋಗುತ್ತೇನೆ ಎಂದು ಹೇಳಿದರು ಅದರಂತೆ ಜೆಡಿಎಸ್ ಪಕ್ಷ ನನಗೀಗ ಹೊಸ ಜವಾಬ್ದಾರಿ ವಹಿಸಿದೆ ಅದನ್ನು ಪ್ರಾಮಾಣಿಕವಾಗಿ ನಿರ್ವಹಿಸುತ್ತೇನೆ ಎಂದು ಹೇಳಿದರು ಪಕ್ಷದ ತತ್ವ ಸಿದ್ಧಾಂತಗಳನ್ನು ಮೈಗೂಡಿಸಿಕೊಂಡು ಎಲ್ಲರೊಂದಿಗೆ ಶ್ರಮಿಸಿ ಪಕ್ಷವನ್ನು ಸದೃಢವಾಗಿ ಕಟ್ಟುತ್ತೇನೆ ಎಂದು ಹೇಳಿದರು

ಇದೇ ಸಂದರ್ಭದಲ್ಲಿ ಎಂ ರಾಜು ರವರಿಗೆ ಬೆಂಗಳೂರು ಮಹಾನಗರ ಹಿರಿಯ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿದ ಬೆಂಗಳೂರು ನಗರ ಅಧ್ಯಕ್ಷ ರಮೇಶ್ ಗೌಡ ಹೆಣ್ಣೂರ್ ರವರು ಇಬ್ಬರಿಗೂ ಶುಭಾಶಯಗಳನ್ನು ತಿಳಿಸಿದರು ಈ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಟಿ ಎ ಶರವಣ ಮತ್ತು ವೆಂಕಟೇಶ್ ಗೌಡ ಕಾರ್ಯಾಧ್ಯಕ್ಷ ನಾರಾಯಣಸ್ವಾಮಿ ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ತುಳಸಿರಾಮ್ ಮಹಿಳಾ ಘಟಕದ ಅಧ್ಯಕ್ಷ ಶೈಲಜಾ ರಾವ್ ಹಾಗೂ ಬಸವನಗುಡಿಯ ಅನೇಕ ಮುಖಂಡರು ಉಪಸ್ಥಿತರಿದ್ದರು

# ರಸ್ತೆ ಸುರಕ್ಷತಾ ಸಪ್ತಾಹ ಜಾಗೃತಿ ಬೈಕ್ ರ್‍ಯಾಲಿ



**ವರದಿ: ಮುಬಷೀರ್ ಅಹಮದ್**

**ಚಿಕ್ಕಬಳ್ಳಾಪುರ:** ಹೆಲ್ಮೆಟ್ ಧರಿಸದೆ ದ್ವಿಚಕ್ರ ವಾಹನ ಸಂಚಾರ,ಸೀಟ್ ಬೆಲ್ಟ್ ದರಿಸದೆ ಲಘು ವಾಹನಗಳ ಸವಾರಿ ಮಾಡುವುದರಿಂದ ಆಗುವ ಅಫಘಾತಗಳು ಜೀವನ ಅಂತ್ಯಕ್ಕೆ ಆಹ್ವಾನ ನೀಡಲಿದೆ, ಸಂಚಾರಿ ಪೊಲೀಸರು ಪದೆ ಪದೆ ಎಚ್ಚರಿಕೆ ನೀಡಿದರು ಹೆಲ್ಮೆಟ್ ಧರಿಸದೆ ನಿರ್ಲಕ್ಷ ವಹಿಸುತ್ತಿರುವ ಕಾರಣ ಇಂದು ಟ್ರಾಫಿಕ್ ಪೊಲೀಸರೆ ಅಂತಹ ಸವಾರರಿಗೆ ದಂಡ ವಿಧಿಸಿ ಹೆಲ್ಮೆಟ್ ವಿತರಣೆ ಮಾಡುವ ಕಾರ್ಯಕ್ರಮದ ಜತೆಗೆ ಜನರಲ್ಲಿ ರಸ್ತೆ ಸುರಕ್ಷತೆ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರವನ್ನ ಹಮ್ಮಿಕೊಂಡಿದ್ದರು. ಜನರ ಜೀವನ ಸುರಕ್ಷಿತವಾಗಿರಿಸುವುದೆ ನಮ್ಮ ಗುರಿಯಾಗಿದ್ದು ಅದನ್ನ ಅರ್ಥಮಾಡಿ ಕೊಂಡು ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಜಿಲ್ಲಾ ವರಿಷ್ಟಾದಿಕಾರಿ ಕುಶಲ್ ಚೌಕ್ಸೆ ಕರೆ ನೀಡಿದರು.

ಚಿಕ್ಕಬಳ್ಳಾಪುರ ಜಿಲ್ಲಾ ಸಂಚಾರಿ ಪೊಲೀಸ್ ರಿಂದ ಸೋಮವಾರ ನಗರದ ಪ್ರಮುಖ ರಸ್ತೆಗಳಲ್ಲಿ ರಸ್ತೆ ಸುರಕ್ಷತಾ ಸಪ್ತಾಹದ ಬಗ್ಗೆ ಜಾಗೃತಿ ಆಂದೋಲನ ಹಮ್ಮಿಕೊಳ್ಳಲಾಗಿತ್ತು. ಶಿಡ್ಲಘಟ್ಟ ವೃತ್ತದಲ್ಲಿ ಹೆಲ್ಮೆಟ್ ಧರಿಸದೆ ಸಂಚಾರ ಮಾಡುತಿದ್ದ ದ್ವಿಚಕ್ರ ವಾಹನ ಸವಾರರಿಗೆ ದಂಡ ವಿಧಿಸಿ ಉಚಿತವಾಗಿ ಹೆಲ್ಮೆಟ್ ನೀಡಿ ಸಧಾ ಹೆಲ್ಮೆಟ್ ಧರಿಸಿಯೇ ಸಂಚಾರ ಮಾಡುವಂತೆ ಅರಿವು ಮೂಡಿಸದರು.

ಕಾರ್ಯಕ್ರಮದಲ್ಲಿ ಬಾಗವಹಿಸಿದ್ದ ಎಸ್.ಪಿ.ಕುಶಲ್ ಚೌಕ್ಸೆ ಮಾತನಾಡಿ ಜನನಿಬಿಡ ಜಾಗದಲ್ಲಿ ನಮ್ಮ ಪೊಲೀಸರು ಸಂಚಾರಿ ನಿಯಮಗಳ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡುತಿದ್ದಾರೆ. ಸಾರ್ವಜನಿಕರು ತಮ್ಮ ತಮ್ಮ ಮನೆಗಳಲ್ಲಿ ನಿಮಗಾಗಿ ಕಾಯುತ್ತಿರುವ ಜನರಿದ್ದಾರೆ, ನಿಮ್ಮ ಜೀವ ಉಳಿಸಿಕೊಂಡು ಅವರೊಟ್ಟಿಗೆ ಸುಖ ಸಂಸಾರ ಮಾಡಲಿಕ್ಕೆ ಸಧಾ ಹೆಲ್ಮೆಟ್ ಧರಿಸಿ ಸೀಟ್ ಬೆಲ್ಟ್ ದರಿಸಿ ಮೈನರ್ ಮಕ್ಕಳಿಗೆ ದ್ವಿಚಕ್ರ ವಾಹನ ಚಾಲನೆಗೆ ಅವಕಾಶ ನೀಡಬೇಡಿ. ಜಿಲ್ಲೆಯಲ್ಲಿ ಇಶಾ ಕೇಂದ್ರ ಸ್ಥಾಪನೆಯಾದ ಮೇಲೆ ಹೊರ ಜಿಲ್ಲೆಗಳಿಂದ ಬೈಕ್ ಸವಾರರ ಸಂಚಾರ ಹೆಚ್ಚಾಗಿದೆ, ಯುವಕರಲ್ಲಿ ಗಾಂಜಾ ಮತ್ತು ಕುಡಿತದ ಚಟಗಳು ಹೆಚ್ಚಾಗಿ ಅಫಘಾತಗಳಿಗೆ ದಾರಿ ಮಾಡಿಕೊಡುವಂತಾಗಿದೆ ಆದ್ದರಿಂದ ನಮ್ಮ ಪೊಲೀಸರು ಖಡಕ್ ಆಕ್ಷನ್ ತೆಗೆದುಕೊಂಡು ದಂಡ ವಿದಿಸಿ ಹೆಚ್ಚರಿಕೆ ನೀಡುತಿದ್ದಾರೆ ಎಂದರು.

ಇದೆ ಕಾರ್ಯಕ್ರಮದಲ್ಲಿ ದ್ವಿಚಕ್ರ ವಾಹನ ಸವಾರರಿಗೆ ಉಚಿತವಾಗಿ ಹೆಲ್ಮೆಟ್ ಒದಗಿಸಿದ ಧಾನಿಗಳು ಹರೀಶ್ ಮತ್ತು ಭವಿತ್ ರನ್ನ ಸನ್ಮಾನಿಸಿದರು.

ಈ ಸಂದರ್ಬದಲ್ಲಿ ಎ.ಎಸ್.ಪಿ ರಾಜಾ ಇಮಾಂ ಕಾಸಿಂ,ಡಿ.ವೈ. ಎಸ್.ಪಿ ಶಿವಕುಮಾರ್,ವೃತ್ತ ನಿರೀಕ್ಷಕ ಮಂಜುನಾಥ್, ಟ್ರಾಫಿಕ್ ಎಸ್.ಐ ಮಂಜುಳ,ಟೌನ್ ಎಸ್.ಐ ಅಮರ್,ನಂದಿ ಗಿರಿಧಾಮ ಎಸ್.ಐ ಶರಣಪ್ಪ, ಇತರೆ ಸಿಬ್ಬಂದಿ ಮತ್ತು ಇತರರು ಉಪಸ್ಥಿತರಿದ್ದರು.

# 23ರಂದು ಜಿಲ್ಲಾ ಮಟ್ಟದ ಸಿದ್ದರಾಮೇಶ್ವರ ಜಯಂತಿ

**ಚಿಕ್ಕಬಳ್ಳಾಪುರ:** ನಗರದ ಒಕ್ಕಲಿಗರ ಕಲ್ಯಾಣ ಮಂಟಪದಲ್ಲಿ ಜನವರಿ 23ರಂದು ಮಧ್ಯಾಹ್ನ 12.30ಕ್ಕೆ ಜಿಲ್ಲಾ ಮಟ್ಟದ ಸಿದ್ದರಾಮೇಶ್ವರ ಜಯಂತಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಎಂ.ವಿ ಕೃಷ್ಣಪ್ಪ ತಿಳಿಸಿದರು.

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಅಂದು ಬೆಳಿಗ್ಗೆ ಅಂಬೇಡ್ಕರ್ ಭವನದ ಮುಂಭಾಗದಿಂದ ವಿವಿಧ ಕಲಾ ತಂಡಗಳೊಂದಿಗೆ ಸಿದ್ದರಾ ಮೇಶ್ವರರ ಪಲ್ಲಕ್ಕಿ ಮೆರವಣಿಗೆ ಆರಂಭವಾಗಲಿದೆ ಎಂದು ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವಡಾ. ಎಂ.ಸಿ.ಸುಧಾಕರ್, ಶಾಸಕ ಪ್ರದೀಪ್ ಈಶ್ವರ್, ಸಂಸದರಾದ ಡಾ.ಕೆ.ಸುಧಾಕರ್, ಮಲ್ಲೇಶ್ ಬಾಬುಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರುಎಂದರು.

ಜ.14ರಂದು ಜಯಂತಿ ನಡೆಯಬೇಕಾಗಿತ್ತು. ಆದರೆ ಬಾಗೇಪಲ್ಲಿ ಮತ್ತು ಚಿಂತಾಮಣಿ ಯಲ್ಲಿ ಕಾರ್ಯಕ್ರಮ ನಡೆದ ಕಾರಣ 23ಕ್ಕೆ ಜಿಲ್ಲಾ ಮಟ್ಟದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಮುಖಂಡ ವಿಜಯಕುಮಾಮಾತನಾಡಿ ಸಿದ್ದರಾಮೇಶ್ವರರು ಭೋವಿ ಸಮುದಾಯದ ಗುರುಗಳು. ಹಲವು ವಚನಗಳನ್ನು ರಚಿಸಿದ ಮಹಾಜ್ಞಾನಿ ಎಂದರು.

ಮುಖಂಡ ನಾರಾಯಣಸ್ವಾಮಿ ಮಾತನಾಡಿ, ಸಮುದಾಯಕ್ಕೆ ಚಿಕ್ಕಬಳ್ಳಾಪುರದಲ್ಲಿ 10 ಗುಂಟೆ ಜಾಗ ನೀಡಬೇಕು ಎಂದು ಕೋರಿದರು. ಈ ಸಂದರ್ಭದಲ್ಲಿ ಲಕ್ಷ್ಮೀನಾರಾಯಣ, ಪೆದ್ದಪ್ಪಯ್ಯ, ಚಿಂತಾಮಣಿ ಶ್ರೀನಿವಾಸ್, ಜಯಕುಮಾರ ವೆಂಕಟರಮಣಪ್ಪ ಮತ್ತು ಇತರರು ಇದ್ದರು.

# ಯತ್ನಾಳ್ ಬಿಎಸ್‌ವೈ ಕೈಕಾಲು ಹಿಡಿದು ಬಿಜೆಪಿಗೆ ಬಂದ ವ್ಯಕ್ತಿ

**ದಾವಣಗೆರೆ:** ಯತ್ನಾಳ್‌ನಂತಹ ವಿಕೃತ ಮನಸ್ಸಿನ ವ್ಯಕ್ತಿಯನ್ನ ನಾನು ನೋಡಿಲ್ಲ. ರಮೇಶ್ ಜಾರಕಿಹೊಳಿ ಒಳ್ಳೆ ಮನುಷ್ಯ, ಆ ವ್ಯಕ್ತಿಯನ್ನೂ ಹಾಳು ಮಾಡುತ್ತಿದ್ದಿಯ. ಕಾಂಗ್ರೆಸ್‌ನವರು ಬಿಜೆಪಿಗೆ ಬಂದ್ರು, ಅವರಿಗೂ ಪ್ರಚೋದನೆ ಮಾಡುತ್ತಿದ್ದಿಯ. ಇವತ್ತಿನಿಂದಲ್ಲ, ಕಳೆದ ಏಳೆಂಟು ವರ್ಷಗಳಿಂದ ಯತ್ನಾಳ್‌ಗೆ ಇದೇ ಕೆಲಸ ಎಂದು ಮಾಜಿ ಸಚಿವ ಎಂ. ಪಿ ರೇಣುಕಾಚಾರ್ಯ ವಾಗ್ದಾಳಿ ನಡೆಸಿದರು.



ನಗರದಲ್ಲಿ ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಹಿಂದೆ ಹೀಗೆಯೇ ಮಾತನಾಡಿ ಭಾರತೀಯ ಜನತಾ ಪಾರ್ಟಿಯಿಂದ ಉಚ್ಚಾಟನೆ ಆಗಿದ್ದರು. ಆದ್ರೆ ಯಡಿಯೂರಪ್ಪನವರು ಹೋಗಲಿ ಅಂತ ಕರೆತಂದ್ರು. ಈ ಮನುಷ್ಯ ಕಾಲಿಡಿದು ಒಳಗೆ ಬಂದರು. ಯತ್ನಾಳ್ ಗೋಮುಖ ವ್ಯಾಘ್ರ ಅಂತ ಯಡಿಯೂರಪ್ಪನವರಿಗೆ ಗೊತ್ತಾಗಲಿಲ್ಲ. ಯಡಿಯೂರಪ್ಪ ಬೆಳ್ಳಗಿರುವುದೆಲ್ಲ ಹಾಲು ಅಂತ ನಂಬುತ್ತಾರೆ. ಅಷ್ಟು ಪರಿಶುದ್ಧವಾದ ರಾಜಕಾರಣಿ ಯಡಿಯೂರಪ್ಪನವರು. ಅಂತವರಿಗೆ ದ್ರೋಹ ಮಾಡುತ್ತಿದ್ದಿಯ ಎಂದು ಕಿಡಿಕಾರಿದರು.

ಬಸನಗೌಡ ಯತ್ನಾಳ್, ರಮೇಶ್ ಜಾರಕಿಹೊಳಿಗೆ ಬಿಎಸ್‌ವೈ ಬಗ್ಗೆ ಮಾತನಾಡುವ ಯಾವುದೇ ನೈತಿಕತೆ ಇಲ್ಲ. ಜಾರಕಿಹೊಳಿಗೆ ವಿಜಯೇಂದ್ರ ಧಮ್ಕಿ ಹಾಕಿಲ್ಲ, ಶಾಸಕ ರಮೇಶ್ ಜಾರಕಿಹೊಳಿ ಮಾತಿನಿಂದ ಬಿಎಸ್‌ವೈಗೆ ನೋವಾಗಿದ್ದನ್ನು ಅವರ ಅಭಿಮಾನಿಗಳು ಸಹಿಸಲ್ಲ ಎಂದಿದ್ದಾರೆ. ವಿಜಯೇಂದ್ರ ಜಾರಕಿಹೊಳಿಯನ್ನ ನೋಡಿಕೊಳ್ತಿನಿ ಅಂತಾ ಹೇಳಿಲ್ಲ ಎಂದು ರೇಣುಕಾಚಾರ್ಯ ಸಮರ್ಥಿಸಿಕೊಂಡರು.

# ಅಂಚೆ ವಿಭಾಗದಲ್ಲಿ ವಾಕ್–ಇನ್–ಇಂಟರ್‌ವ್ಯೂ

**ಚಾಮರಾಜನಗರ:**ನಂಜನಗೂಡು ಅಂಚೆ ವಿಭಾಗದಿಂದ ಅಂಚೆ ಜೀವ ವಿಮೆ, ಗ್ರಾಮೀಣ ಅಂಚೆ ಜೀವ ವಿಮೆ ಮಾರಾಟಕ್ಕೆ ತೊಡಗಿಸಿಕೊಳ್ಳುವ ಏಜೆಂಟ್‌ಗಳಿಗಾಗಿ ವಾಕ್–ಇನ್–ಇಂಟರ್‌ವ್ಯೂ SPOs ಜ.23ರಂದು ಬೆಳಿಗ್ಗೆ 11 ಗಂಟೆಗೆ ನಂಜನಗೂಡು ವಿಭಾಗದಲ್ಲಿ ನಡೆಯಲಿದೆ ಎಂದು ನಂಜನಗೂಡು ವಿಭಾಗದ ಅಂಚೆ ಅಧೀಕ್ಷಕರಾದ ಎನ್. ಗೋವಿಂದರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅವಧಿ ವಿಸ್ತರಣೆ

**ಚಾಮರಾಜನಗರ:** ಸಾರ್ವಜನಿಕ ಗ್ರಂಥಾಲಯ ಇಲಾಖೆಯಡಿಯಲ್ಲಿ ರಾಜ್ಯದ ನಾಲ್ಕು ಕಂದಾಯ ವಿಭಾಗಗಳಾದ ಬೆಂಗಳೂರು, ಮಂಗಳೂರು, ಧಾರವಾಡ ಹಾಗೂ ಕಲಬುರಗಿ ಕೇಂದ್ರಗಳಲ್ಲಿ ಆರು ತಿಂಗಳ ಅವಧಿಯ ಗ್ರಂಥಾಲಯ ವಿಜ್ಞಾನ ತರಬೇತಿ ಶಾಲಾ ಪ್ರವೇಶಕ್ಕೆ ಅರ್ಜಿ ಸಲ್ಲಿಸುವ ಅವಧಿಯನ್ನು ಜನವರಿ 31ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ವಿದ್ಯುತ್ ವ್ಯತ್ಯಯ

**ಚಾಮರಾಜನಗರ:** ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಬೇಗೂರು ಉಪವಿಭಾಗ ಶಾಖಾ ವ್ಯಾಪ್ತಿಯಲ್ಲಿ 11 ಕೆವಿ ರಂಗನಾಥಪುರ ಎನ್.ಜೆ.ವೈ. ಫೀಡರನ ವಿದ್ಯುತ್ ಅಡಚಣೆ ಕಡಿಮೆ ಮಾಡಲು ಮಾರ್ಗದ ನಿರ್ವಹಣೆ ಕಾಮಗಾರಿಯನ್ನು ನಾಳೆ ಹಮ್ಮಿಕೊಂಡಿರುವುದರಿಂದ ಕಬ್ಬಹಳ್ಳಿ 66/11 ಕೆವಿ ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜಾಗುವ 11 ಕೆವಿ ರಂಗನಾಥಪುರ ಎನ್.ಜೆ.ವೈ. ಮಾರ್ಗದಲ್ಲಿ ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಉಚಿತ ದೂ.ಸಂ 1912 ಗೆ ಕರೆ ಮಾಡುವಂತೆ ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.5ರಿಂದ ಕಾರ್ಯಗಾರ

**ಚಾಮರಾಜನಗರ:** ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗ ಸಂಸ್ಥೆಯಾಗಿರುವ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಸೈಬರ್ ಸೆಕ್ಯುರಿಟಿ ಅಂಡ್ ಇಂಟರ್ನೆಟ್ ಸೇಫ್ಟಿ ವಿಷಯದ ಕುರಿತು ಫೆಬ್ರವರಿ 5 ರಿಂದ 7 ರವರೆಗೆ ಮೂರು ದಿನಗಳ ಕಾರ್ಯಗಾರವನ್ನು ಬೆಂಗಳೂರಿನ ಅಕಾಡೆಮಿ ಕಚೇರಿಯಲ್ಲಿ ಆಯೋಜಿಸಲಾಗಿದೆ.

ಕಾರ್ಯಗಾರದಲ್ಲಿ ಇತ್ತೀಚಿನ ದಿನಗಳಲ್ಲಿ ನಡೆಯುತ್ತಿರುವ ಆನ್‌ಲೈನ್ ವಂಚನೆಗಳನ್ನು ತಡೆಗಟ್ಟಲು ಮುಂಜಾಗ್ರತ ಕ್ರಮಗಳು ಮತ್ತು ಅಂತರ್ಜಾಲ ಸುರಕ್ಷತೆ ಉಪಯೋಗದ ಬಗ್ಗೆ ವಿವಿಧ ನುರಿತ ತಜ್ಞರಿಂದ ಉಪನ್ಯಾಸಗಳನ್ನು ಏರ್ಪಡಿಸಲಾಗಿದೆ. ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು ಕಾರ್ಯಗಾರದಲ್ಲಿ ಭಾಗವಹಿಸಲಿದ್ದಾರೆ.

ಕಾರ್ಯಗಾರದಲ್ಲಿ ಭಾಗವಹಿಸಲು 2 ಸಾವಿರ ರೂ. ನೊಂದಣಿ ಶುಲ್ಕವನ್ನು ನಿಗದಿಪಡಿಸಲಾಗಿದ್ದು ಆಸಕ್ತರು ಜನವರಿ 31 ರೊಳಗೆ https://forms.gle/9Fds6N5vjzLpjNGX7 ಮೂಲಕ ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ವಿ.ಕೆ. ಶ್ರೀನಿವಾಸು (ಮೊ.ಸಂ.9620767819, ದೂ.ಸಂ 080–29721550) ಮತ್ತು ಅಕಾಡೆಮಿಯ ವೆಬ್ ಸೈಟ್ https://kstacademy.in ಸಂಪರ್ಕಿಸುವಂತೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎ.ಎಂ. ರಮೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೂತನ ತಹಶೀಲ್ದಾರ್‌ಗೆ ಅಧಿಕಾರ ಹಸ್ತಾಂತರ



**ಮಾಲೂರು:** ತಾಲ್ಲೂಕಿನ ನೂತನ ತಹಶೀಲ್ದಾರ್‌ಆಗಿ ರೂಪ ಎಂ.ವಿ.ರವರು ನಿರ್ಗಮಿತ ತಹಶೀಲ್ದಾರ್ ಕೆ.ರಮೇಶ್ ಅವರಿಂದ ಅಧಿಕಾರ ಸ್ವೀಕರಿಸಿದರು. ಕಂದಾಯ ಭವನದ ಆಡಿಟ್ ಶಾಖೆಯಿಂದ ವರ್ಗಾವಣೆಗೊಂಡಿರುವ ರೂಪ ಎಂ.ವಿ ರವರು ಗ್ರೇಡ್ 1 ತಹಶೀಲ್ದಾರ್ ಆಗಿ ಅಧಿಕಾರ ಸ್ವೀಕರಿಸಿದರು, ಕೆ.ರಮೇಶ್ ಆವರಿಗೆ ಸ್ಥಳ ನಿಯುಕ್ತಿಗೊಳಿಸದೆ ಸರ್ಕಾರದಲ್ಲಿ ವರದಿ ಮಾಡಿಕೊಳ್ಳುವಂತೆ ಆದೇಶಿಸಲಾಗುತ್ತು.

ನೂತನವಾಗಿ ಅಧಿಕಾರ ಸ್ವೀಕರಿಸಿರುವ ತಹಶೀಲ್ದಾರ್ ರೂಪ ಅವರಿಗೆ ಜನಪರ, ಪಕ್ಷಾತೀತ, ಪಾರದರ್ಶಕ ಆಡಳಿತ ನೀಡುವಂತೆ ಸಾರ್ವಜನಿಕರು ಸಾಮಾಜಿಕ ಜಾಲತಾಣಗಳಲ್ಲಿ ಶುಭಾಶಯ ಕೋರಿದ್ದಾರೆ.

ಈ ಸಂದರ್ಭದಲ್ಲಿ ಗ್ರೇಡ್ 2 ತಹಶೀಲ್ದಾರ್ ಹರಿಪ್ರಸಾದ್ ಸೇರಿದಂತೆ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಭಾವೈಕ್ಯದ ಶಹಜಾದೆ ಮಸ್ತಾನ್ ಶಾ ಖಾದ್ರಿ ಉರುಸು



**ಕೊಲ್ಹಾರ:** ತಾಲೂಕಿನ ಕೂಡಗಿ ಗ್ರಾಮದಲ್ಲಿರುವ ಹಜರತ್ ಶಾಹಜಾದೆ ಮಸ್ತಾನಶಾ ಖಾದ್ರಿ ಅವರ ಉರುಸು ಹಿಂದೂ–ಮುಸ್ಲಿಂ ಭಾಂದವರು ಸೋಮವಾರ ಭಾವೈಕ್ಯ ದೊಂದಿಗೆ ಸಂಭ್ರಮದಿಂದ ಆಚರಿಸಿದರು. ಹಲವಾರು ವರ್ಷಗಳಿಂದ ನಡೆದುಕೊಂಡು ಬಂದಿರುವ ಉರುಸಿನ ಹಿಂದಿನ ರಾತ್ರಿ ದಿನ ಬಹು ನಿರೀಕ್ಷಿತ ಮತ್ತು ಪ್ರಮುಖವಾಗಿ ಪವಾಡ ವೆನಿಸುವಂತಹ ಗಂಧ ಮಹೋತ್ಸವ ನಡೆಯುತ್ತದೆ.

ಉರುಸಿನ ಪ್ರಯುಕ್ತ ಹಜರತ್ ಶಾಹಜಾದೆ ಮಸ್ತಾನಶಾ ಖಾದ್ರಿ ದರ್ಗಾದಲ್ಲಿ ಭಕ್ತಾದಿಗಳು ಅನೇಕ ರೀತಿಯ ನೈವೇದ್ಯಗಳನ್ನು ಓದಿಕೆ ಮಾಡುವ ಮೂಲಕ ಭಕ್ತರು ದಿಡು ನಮಸ್ಕಾರ ಹಾಕುವ ಮೂಲಕ ತಮ್ಮ ಇಷ್ಟಾರ್ಥ ಬೇಡಿಕೊಳ್ಳುತ್ತ ಹರಕೆ ತೀರಸುತ್ತಿರುವರು ಒಂದೆಡೆ ಯಾದರೆ ಹಜರತ ಮಸ್ತಾನಶಾ ಖಾದ್ರಿ ಅವರು ದರ್ಶನ ಪಡೆಯಲು ಬಾಲಕರು, ಯುವಕರು, ಯುವತಿಯರು, ಮಧ್ಯವಯಸ್ಕರು, ವೃದ್ಧರು ಎಂಬ ವಯೋಮಾನದ ಭೇದವಿಲ್ಲದೆ ದಿನವಿಡೀ ಭಕ್ತಾದಿಗಳು ದರ್ಗಾಕ್ಕೆ ಆಗಮಿಸಿ ಸಾಲಿನಲ್ಲಿ ನಿಂತು ದರ್ಶನ ಪಡೆದು ಹರಕೆ ಹೊತ್ತ ಭಕ್ತರು, ದರ್ಗಾಕ್ಕೆ ಛಾದರ್ ಸಮರ್ಪಿಸುತ್ತಿರು ದೃಶ್ಯ ಸಾಮಾನ್ಯವಾಗಿತ್ತು.

ಸ್ಥಳೀಯರಲ್ಲದೆ ಅನೇಕ ಪಟ್ಟಣಗಳಿಂದ ಮತ್ತು ಹಳ್ಳಿಗಳಿಂದ ಆಗಮಿಸ್ದಿದ ಭಕ್ತಾದಿಗಳು ದರ್ಗಾದ ಅಕ್ಕ–ಪಕ್ಕದಲ್ಲಿ ಟೆಂಟ್‌ಗಳನ್ನು ಹಾಕಿ ಬೀಡು ಬಿಟ್ಟಿದ್ದರು ಮತ್ತು ದರ್ಗಾ ಮುಂಭಾಗದ ಆವರಣದಲ್ಲಿ ಭಕ್ತಾದಿಗಳಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ಈ ಸಂದರ್ಭದಲ್ಲಿ ಸದ್ದಾಂ ಹೊನ್ಯಾಳ, ಹಸನ ಕೊಲ್ಹಾರ , ಕರ್ನಾಟಕ ಕಾರ್ಯನಿರತ ಧ್ವನಿ ಸಂಘಟನೆಯ ಕೊಲ್ಹಾರ ತಾಲ್ಲೂಕು ಅಧ್ಯಕ್ಷರಾದ ದಸ್ತಗಿರಿ ಬಿದರಿ, ಬಂದೇನವಾಜ್ ಕಳಸಕೊಪ್ಪ, ಮುನ್ನಾ ಕಮತಗಿ ಸೇರಿದಂತೆ ಸಾವಿರಾರು ಭಕ್ತರು ಇದ್ದರು.

# ದಲಿತ ಕುಟುಂಬಗಳಿಗೆ ವಸತಿ ಕಲ್ಪಿಸಿ:ಚಲಪತಿ



**ಶಿಡ್ಲಘಟ್ಟ:** ಸಮಾಜದಲ್ಲಿ ಎಲ್ಲರಂತೆ ದಲಿತರು ಕೂಡ ಸ್ವಾಭಿಮಾನದಿಂದ ಬದುಕನ್ನು ಕಟ್ಟಿಕೊಳ್ಳಲು ದಲಿತ ಕುಟುಂಬಗಳಿಗೆ ಕೃಷಿ ಭೂಮಿ ಮಂಜೂರು ಮಾಡಿ ವಸತಿ ಕಲ್ಪಿಸಬೇಕೆಂದು ಒತ್ತಾಯಿಸಿ ನಿರಂತರ ಹೋರಾಟ ಮಾಡುತ್ತಿದ್ದರೂ ಸರ್ಕಾರವು ಕಿವಿ ಕೇಳದಂತೆ, ಮಾತು ಬಾರದಂತೆ ವರ್ತಿಸುತ್ತಿದೆ ಎಂದು ದಸಂಸ ತಾಲ್ಲೂಕು ಸಂಚಾಲಕ ಚಲಪತಿ ಆರೋಪಿಸಿದರು.

ತಾಲ್ಲೂಕು ಕಚೇರಿ ಮುಂಭಾಗದಲ್ಲಿ "ನೆಮ್ಮದಿಯ ಬದುಕಿಗಾಗಿ ಭೂಮಿ ಘನತೆಯ ಬದುಕಿಗಾಗಿ ಒಂದು ಸೂರು" ಅನಿರ್ದಿಷ್ಟ ಧರಣಿಯಲ್ಲಿ ಅವರು ಮಾತನಾಡಿದರು.

ಬದುಕಿಗಾಗಿ ಕೃಷಿ ಭೂಮಿಯನ್ನು ಮಂಜೂರು ಮಾಡುವಂತೆ ದರಕಾಸ್ತು ಸಮಿತಿಗಳಿಗೆ ಅರ್ಜಿ ಹಾಕಿಕೊಂಡು ತಾತ ಮುತ್ತಾತಂದಿರ ಕಾಲದಿಂದಲೂ ಅನುಭವದಲ್ಲಿದ್ದು ಕೃಷಿ ನಡೆಸುತ್ತಿದ್ದರೂ ಸರಕಾರವು ದಲಿತ ಕುಟುಂಬಗಳಿಗೆ ಜಮೀನು ಮಂಜೂರು ಮಾಡಿಲ್ಲ ಎಂದು ಹೇಳಿದರು.

ದಲಿತರ ಕಾಲೋನಿ, ಬಡಾವಣೆಗಳಲ್ಲಿ ಕುಡಿಯುವ ನೀರು, ಚರಂಡಿ, ರಸ್ತೆ, ಬೀದಿ ದೀಪ, ಸ್ವಚ್ಚತೆಯಂತ ಕನಿಷ್ಠ ಸವಲತ್ತುಗಳನ್ನು ಒದಗಿಸಬೇಕು, ಬದುಕಿದ್ದಾಗ ಕೃಷಿ ಭೂಮಿ ಹಾಗೂ ಮನೆ, ಸತ್ತಾಗ ಹೂಳಲು ಸ್ಮಶಾನ ಜಾಗ ಒದಗಿಸಬೇಕೆಂದು ಆಗ್ರಹಿಸಿದರು.

ತಾಲ್ಲೂಕು ಸೇರಿದಂತೆ ಅನೇಕ ತಾಲ್ಲೂಕುಗಳಲ್ಲಿ ಬಗರ್ ಹುಕುಂ ಸಾಗುವಳಿ ದರಕಾಸ್ತು ಸಮಿತಿಗಳನ್ನೆ ರಚಿಸಿಲ್ಲ, ರಚಿಸಿದ್ದರೂ ಪ್ರಭಾವಿಗಳು, ನಾಯಕರ ಹಿಂಬಾಲಕರಿಗೆ ಮಾತ್ರ ಒಂದಷ್ಟು ಜಮೀನು ಮಂಜೂರು ಮಾಡಿದ್ದಾರೆ ಹೊರತು ದಲಿತ ಕುಟುಂಬಗಳಿಗೆ ಭೂಮಿ ಮಂಜೂರು ಮಾಡಿಲ್ಲ, ಜಮೀನುಗಳಿಗೆ ಸಂಬಂಧಿಸಿದಂತೆ ರೆಕಾರ್ಡ್ ರೂಂಗಳಲ್ಲಿ ರಿಯಲ್ ಎಸ್ಟೇಟ್ ಭೂ ಮಾಫಿಯಾದವರ ಮಾತಷ್ಟೆ ನಡೆಯುತ್ತದೆ ಎಂದು ಆರೋಪಿಸಿದರು.

ಪ್ರತಿಭಟನೆ, ಧರಣಿ, ಮೌನ ಮೆರವಣಿಗೆ ಸೇರಿ ನಾನಾ ರೀತಿಯಲ್ಲಿ ನಮ್ಮ ಮನದಾಳದ ನೋವನ್ನು ವ್ಯಕ್ತಪಡಿಸಿದ್ದರೂ ಅಧಿಕಾರಿಗಳು, ಜನಪ್ರತಿನಿಗಳು , ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸುವ ಬದಲಿಗೆ ಕಣ್ಣೊರೆಸುವ ಮತ್ತು ತಕ್ಷಣಕ್ಕೆ ಬೀಸೋ ದೊಣ್ಣೆಯಿಂದ ಪಾರಾಗುವಂತ ಕೆಲಸಗಳನ್ನು ಮಾಡಿಕೊಂಡು ಬಂದಿದೆ ಹೊರತು ಸಮಸ್ಯೆ ನಿವಾರಿಸುವ ಪ್ರಾಮಾಣಿಕ ಪ್ರಯತ್ನ ಮಾಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಗರದಲ್ಲಿ ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಸೂಕ್ತ ಜಾಗಕ್ಕಾಗಿ 30 ವರ್ಷಗಳ ಸುದೀರ್ಘ ಹೋರಾಟ ನಡೆಸಬೇಕಾಯಿತು,ಇದೀಗ ಜಾಗ ಗುರ್ತಿಸಲಾಗಿದೆ 10 ಕೋಟಿ ರೂ. ವೆಚ್ಚದಲ್ಲಿ ಸುಸಜ್ಜಿತವಾದ ಅಂಬೇಡ್ಕರ್ ಭವನ ನಿರ್ಮಿಸಬೇಕೆಂಬುದು ನಮ್ಮ ಬೇಡಿಕೆಯನ್ನು ಸರಕಾರ ಎಷ್ಟರ ಮಟ್ಟಿಗೆ ಈಡೇರಿಸುತ್ತದೆಯೋ ಕಾದು ನೋಡಬೇಕೆಂದರು.

ಸ್ಥಳಕ್ಕೆ ತಾಲ್ಲೂಕು ಆಡಳಿತದ ಪರವಾಗಿ ಅಧಿಕಾರಿಗಳು, ಜನಪ್ರತಿನಿಧಿಗಳು ಭೇಟಿ ಕೊಟ್ಟು ಸಮಸ್ಯೆಗಳನ್ನು ಆಲಿಸದ ಹಿನ್ನಲೆಯಲ್ಲಿ ಅನಿರ್ದಿಷ್ಟಾವಧಿಯ ಧರಣಿ ಮುಂದುವರೆದಿದೆ. ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು, ಕಾರ್ಯಕರ್ತರು, ಮಹಿಳಾ ಸದಸ್ಯರು ಧರಣಿಯಲ್ಲಿ ಪಾಲ್ಗೊಂಡಿದ್ದರು.

# ಅನ್ನದಾನೀಶ್ವರ ಮಠದಲ್ಲಿ ಶರಣ ಸಂಸ್ಕೃತಿ ಉತ್ಸವ



**ಕುಕನೂರ:** ಪಟ್ಟಣದ ಅನ್ನದಾನೀಶ್ವರ ಶಾಖಾಮಠದಲ್ಲಿ ಶ್ರೀಮಠದ ಮಹಾದೇವ ಸ್ವಾಮೀಜಿ ಪೂಜ್ಯರ 2ನೇ ವರ್ಷದ ಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ುಒಜು 10 ದಿನಗಳ ಶರಣ ಸಂಸ್ಕೃತಿ ಉತ್ಸವ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದು ಶರಣ ಸಂಸ್ಕೃತಿ ಉತ್ಸವ ಸಮಿತಿ ಅಧ್ಯಕ್ಷ ಅಂದಪ್ಪ ಜವಳಿ ಹೇಳಿದರು.

ಅವರು ಕುಕನೂರ ಪಟ್ಟಣದ ಅನ್ನದಾನೀಶ್ವರ ಶಾಖಾಮಠದಲ್ಲಿ ಆಮಂತ್ರಣ ಪತ್ರಿಕೆ ಬಿಡುಗಡೆ ಮಾಡಿ ಮಾತನಾಡುತ್ತಾ ಕುಕನೂರ ಪಟ್ಟಣದಲ್ಲಿ ಇದೆ ಜನವರಿ 21 ರಿಂದ 30 ರವರೆಗೆ ವಿಶೇಷವಾಗಿ ಶರಣರ ಚರಿತಾಮೃತ ಪ್ರವಚನ, ವಿಶೇಷ ಚೇತನರ ಸಾಮೂಹಿಕ ವಿವಾಹಗಳು, ರೈತರ ಸಮಾವೇಶ, ಸಾಂಸ್ಕೃತಿಕ ಸಂಭ್ರಮ ಸೇರಿದಂತೆ ಹಲವಾರು ಕಾರ್ಯಕ್ರಮಗಳನ್ನ ಹಮ್ಮಿಕೊಳ್ಳಲಾಗಿದೆ ಇಂತಹ ಕಾರ್ಯಕ್ರಮಕ್ಕೆ ಭಕ್ತರ ಸಹಕಾರ ನೀಡಿ ಯಶಸ್ವಿಗೋಳಿಸಬೇಕೆಂದು ಕರೆ ನೀಡಿದರು.

ನಂತರ ಮಾತನಾಡಿದ ಸಮಿತಿ ಕಾರ್ಯದರ್ಶಿ ವೀರಣ್ಣ ಅಣ್ಣಿಗೇರಿ ಶರಣರ ಚಿಂತನೆಗಳನ್ನ ಸಮಾಜ ಜನ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು, ಬಸವವಾದಿ ಶರಣರು ಸಮಾಜಕ್ಕೆ ಅನನ್ಯ ಕೊಡುಗೆ ನೀಡಿದ್ದಾರೆ ಅಂತಹ ಶರಣರ ಚಿಂತನಾ ಕಾರ್ಯಕ್ಕೆ ಭಕ್ತರು ತುಂಬಾ ಜನ ಸೇರಬೇಕು ಎಂದರು. ರಶೀಧ ಸಾಬ್ ಅಣಜೀಗೇರಿ ಮಾತನಾಡಿ ಎಲ್ಲಾರು ಒಂದಾಗಿ ಮಾಡಿದಾಗ ಮಾತ್ರ ಈ ಕಾರ್ಯಕ್ರಮ ಯಶಸ್ವಿಗೊಳಿಸಲು ಸಾಧ್ಯ ಭಕ್ತರು ಜಾತಿ ಮತ ಪಂಥ ಹೊಂದಾಗಬೇಕು ಎಂದರು.

ಸಂಧರ್ಭದಲ್ಲಿ ಗದಿಗೆಪ್ಪ ಪವಾಡಶೆಟ್ಟಿ, ವೀರಯ್ಯ ತೋಂಟದಾರ್ಯಮಠ, ಸಂಗಮೆಶ ಕಲ್ಮಠ, ರಾಮನಗೌಡ ಹುಚನೂರ, ಕಾಳಿ ಲಕ್ಷ ಹಣ,ಪ್ರಭು ಶಿವಸಿಂಪರ ಸೇರಿದಂತೆ ಹಲವಾರು ಜನಇದ್ದರು.

# ನಾಗಮಂಗಲ ಪತ್ರಕರ್ತರ ಸಂಘಕ್ಕೆ ರಾಜ್ಯಮಟ್ಟದ ಪ್ರಶಸ್ತಿ



**ನಾಗಮಂಗಲ:** ತುಮಕೂರನಲ್ಲಿ ನಡೆದ 39ನೇ ರಾಜ್ಯ ಮಟ್ಟದ ಪತ್ರಕರ್ತರ ಸಮ್ಮೇಳನದಲ್ಲಿ ಮಂಡ್ಯ ಜಿಲ್ಲೆಯಿಂದ ನಾಗಮಂಗಲ ತಾಲೂಕು ಪತ್ರಕರ್ತರ ಸಂಘಕ್ಕೆ ಉತ್ತಮ ತಾಲೂಕು ಮಟ್ಟದ ಪತ್ರಕರ್ತರ ಸಂಘಕ್ಕೆ ರಾಜ್ಯಮಟ್ಟದ ಪ್ರಶಸ್ತಿ ಪ್ರಧಾನ ಮಾಡಲಾಯಿತು.

39ನೇ ರಾಜ್ಯ ಮಟ್ಟದ ಪತ್ರಕರ್ತರ ಸಮ್ಮೇಳನದ ಪ್ರಧಾನ ವೇದಿಕೆಯಲ್ಲಿ ರಾಜ್ಯ ಪತ್ರಕರ್ತರ ಸಂಘದ ಅಧ್ಯಕ್ಷರಾದ ಶಿವಾನಂದ ತಗಡೂರು ರವರು ನಾಗಮಂಗಲ ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷರಾದ ಸೀತಾರಾಮ್ ಮತ್ತು ಪ್ರಧಾನ ಕಾರ್ಯದರ್ಶಿಯಾದ ವಸಂತ್ ರವರುಗಳಿಗೆ ಸಂಘದ ತಾಲೂಕು ಮಟ್ಟದ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಇದೇ ಸಂದರ್ಭದಲ್ಲಿ ತುಮಕೂರು ಜಿಲ್ಲಾಧಿಕಾರಿಗಳಾದ ಶುಭಕಲ್ಯಾಣ ಹಾಗೂ ಚಿಕ್ಕನಾಯಕನಹಳ್ಳಿ ಶಾಸಕರಾದ ಸುರೇಶ್ ಬಾಬು. ರಾಜ್ಯ ಪದಾಧಿಕಾರಿಗಳು ರಾಜ್ಯ ಪತ್ರಕರ್ತರ ಸಂಘದ ಪ್ರತಿನಿಧಿ ಸಿ.ಎನ್ ಮಂಜುನಾಥ್. ತಾಲೂಕು ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷರಾದ ಪಿ.ಜೆ ಜಯರಾಮ ಸಂಘದ ಸದಸ್ಯರು ಪದಾಧಿ ಕಾರಿಗಳಾದ ಉಪಾಧ್ಯಕ್ಷರಾದ ಚನ್ನಕೇಶವ. ಖಜಾಂಚಿ ಮಹೇಶ್. ದೇ. ರಾ. ಜಗದೀಶ್ ನಾರಾಯಣಸ್ವಾಮಿ. ಕೃಷ್ಣಾಚಾರಿ.ವಸಂತ್. ಕಾರ್ಯದರ್ಶಿ ಉಲ್ಲಾಸ್. ರವಿ.ಶ್ರೀನಿವಾಸ್ ಕುಮಾರ್. ರವರುಗಳು ಹಾಜರಿದ್ದರು.

ಅಭಿನಂದನೆಗಳು ನಾಗಮಂಗಲದ ಪತ್ರಕರ್ತರ ಸಂಘಕ್ಕೆ ರಾಜ್ಯಮಟ್ಟದ ಉತ್ತಮ ತಾಲೂಕು ಪತ್ರಕರ್ತರ ಸಂಘ ಗೌರವಕ್ಕೆ ಪಾತ್ರವಾಗಿರುವ ಸಂಘಕ್ಕೆ ಹಾಗೂ ಸಂಘದ ಎಲ್ಲಾ ಪದಾಧಿಕಾರಿಗಳಿಗೆ ನಾಗಮಂಗಲ ಕರ್ನಾಟಕ ರೈತ ಕೃಷಿ ಸಂವರ್ಧನ ಕೇಂದ್ರ ತಾಲೂಕು ರೈತ ಬಾಂಧವರ ಪರವಾಗಿ ಅಭಿನಂದನೆ ಸಲ್ಲಿಸಿದ್ದಾರೆ.

# ಅರವಿಂದ್ ಗೌಡ ಪಾಟೀಲ್‌ರಿಂದ ಜನಸಂಪರ್ಕ ಕಾರ್ಯಕ್ರಮ



**ಕುಕನೂರು:** ಮಾಜಿ ಶಾಸಕ ಶಿವಶರಣಪ್ಪ ಗೌಡ ಪಾಟೀಲ್ ಅವರ ಪುತ್ರ ಕೊಪ್ಪಳ ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಅರವಿಂದ್ ಗೌಡ ಪಾಟೀಲ್ ಇಂದು ಕುಕನೂರು ತಾಲೂಕಿನ ಬಳಗೇರಿ ಗ್ರಾಮಕ್ಕೆ ಭೇಟಿ ಕೊಡುವುದರ ಮೂಲಕ ತಮ್ಮ ಜನ ಸಂಪರ್ಕ ಕಾರ್ಯಕ್ರಮ ಇಂದೂ ಕೂಡಾ ಮುಂದುವರೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಮ್ಮ ತಂದೆ ಮಾಜಿ ಶಾಸಕರಾಗಿದ್ದ ಶಿವಶರಣಪ್ಪ ಗೌಡ ಪಾಟೀಲ್ ಅವರ ಆಡಳಿತದ ಕಾಲದಿಂದಲೂ ತಾಲೂಕಿನ ಎಲ್ಲ ಸಮುದಾಯ, ಸಮಾಜದ ಪ್ರೀತಿ ವಿಶ್ವಾಸ, ಬೆಂಬಲ ನಮ್ಮ ಕುಟುಂಬದ ಮೇಲಿದೆ. ತಾಲೂಕಿನ ಎಲ್ಲ ಸಮಾಜದವರು ನಮ್ಮ ಕುಟುಂಬದ ಸದಸ್ಯರಿದ್ದಂತೆ. ತಮ್ಮ ತಂದೆ ಮಾಜಿ ಶಾಸಕ ಶಿವಶರಣಪ್ಪ ಗೌಡ ಪಾಟೀಲ್ ರು ತಮ್ಮ ಅವಧಿಯಲ್ಲಿ ಮಾಡಿದ 20 ವರ್ಷಗಳ ಹಿಂದಿನ ಕೆಲಸಗಳು ಈಗಲೂ ಜನರ ನೆನಪಿನಲ್ಲಿ ಉಳಿಯುವಂತಿವೆ. ಅವರು ಶಾಸಕರಾಗಿದ್ದ ಸಮಯದಲ್ಲಿ ತಾಲೂಕಿನ ಎಲ್ಲಾ ಭಾಗದಲ್ಲಿಯು ಅನೇಕ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ.ಜನರು ಈಗಲೂ ಅವರ ಮೇಲೆ ಪ್ರೀತಿ ಅಭಿಮಾನ ಹೊಂದಿದ್ದಾರೆ ಎಂದು ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಅರವಿಂದ್ ಗೌಡ ಪಾಟೀಲ್ ಹೇಳಿದರು.

ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಮತ್ತು ಪ್ರಭಾವಿ ಮುಖಂಡರಾಗಿರುವ ಅರವಿಂದ್ ಗೌಡ ಅಪಾರ ಬೆಂಬಲಿಗರೊಂದಿಗೆ ಇಂದು ಕುಕನೂರು ತಾಲೂಕಿನ ಬಳಗೇರಿ ಗ್ರಾಮದ ಶ್ರೀ ಬಳ್ಳೇಶ್ವರ ದೇವಸ್ಥಾನಕ್ಕೆ ಭೇಟಿ ಕೊಟ್ಟು ವಿಶೇಷ ಪೂಜೆ ಮಾಡಿಸಿದರು. ನಂತರ ದುರ್ಗಾದೇವಿ ದೇವಸ್ಥಾನಕ್ಕೆ ಭೇಟಿ ಕೊಟ್ಟು ಜೀರ್ಣೋದ್ದಾರ ಕಾರ್ಯಕ್ಕೆ ದೇಣಿಗೆ ನೀಡಿದರು. ಮತ್ತು ಗ್ರಾಮದ ಮೂವರು ಬುದ್ದಿ ಮಾಂದ್ಯ ಮಕ್ಕಳನ್ನು ಭೇಟಿಯಾಗಿ ಕುಟುಂಬದವರಿಗೆ ಆರ್ಥಿಕ ಸಹಾಯ ಮಾಡಿದರು.

ಜನರ ಕಷ್ಟಗಳಿಗೆ ಸ್ಪಂದಿಸಿ ಕೈಲಾದಷ್ಟು ಸೇವೆ, ಸಹಾಯ ಮಾಡಲು ಜನರೊಂದಿಗೆ ಬೆರೆಯುತ್ತಿದ್ದೇವೆ. ಎಲ್ಲ ಸಮುದಾಯದ ವರಿಂದ ನಮ್ಮ ಕುಟುಂಬದ ಮೇಲಿನ ಪ್ರೀತಿ,ಅಪಾರ ಬೆಂಬಲ ಈಗಲೂ ಇದೆ. ಮುಂದೆಯೂ ಇರುತ್ತದೆ ಎಂದು ಅರವಿಂದ್ ಗೌಡ ಪಾಟೀಲ್ ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮದ ಭಕ್ತ ಕನಕದಾಸರ ಮೂರ್ತಿ ಮತ್ತು ಡಾ ಬಿ ಆರ್ ಅಂಬೇಡ್ಕರ್ ಅವರ ವೃತ್ತಕ್ಕೆ ಹೂ ಮಾಲೆ ಅರ್ಪಿಸಿ ಗೌರವ ಸಲ್ಲಿಸಿದರು. ಈ ಸಂದರ್ಭದಲ್ಲಿ ಬಳ್ಳೇಶ್ ಹೂಗಾರ್, ಲಕ್ಷ್ಮಣ್ ಕಮ್ಮಾರ್, ಶಿವಪ್ಪ ಬಡಿಗೇರ್, ದೊಡ್ಡಪ್ಪ ಕೋಮಾರ್, ಈರಪ್ಪ ಕುರಿ, ಬಸನಗೌಡ ಮಾಲಿ ಪಾಟೀಲ್, ಮುದಿಯಪ್ಪ ಕಮತರ್, ವಿರೂಪಾಕ್ಷ ಯ್ಯ ವೀರಕ್ತಮಠ, ಪಕೀರಪ್ಪ ತಳವಾರ್ ಅನೇಕರು ಉಪಸ್ಥಿತರಿದ್ದರು.

# ಅಜ್ಞಾನದಿಂದ ಜ್ಞಾನದ ಕಡೆ ನಡೆಯಿರಿ



**ಶಿರಾ:** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ರಾಷ್ಟ್ರದಲ್ಲೇ ವಿಶಿಷ್ಟ ಯೋಜನೆಯಾಗಿ ರೂಪುಗೊಂಡಿದೆ. ಎಲ್ಲರನ್ನೂ ಸನ್ಮಾರ್ಗದ ಕಡೆ, ಭಕ್ತಿಯ ಕಡೆ ಕೊಂಡೋಯ್ಯುತ್ತಿದೆ. ಯೋಜನೆಯ ಸದ್ಬಳಕೆ ಮಾಡಿಕೊಂಡು ಅಜ್ಞಾನದಿಂದ ಜ್ಞಾನದ ಕಡೆ ನಡೆಯಿರಿ ಎಂದು ಶ್ರೀ ಸಿದ್ದಾರೂಢ ಶಿವಾನಂದ ಮಂದಿರದ ಶ್ರೀ ಚಿದಾನಂದ ಭಾರತಿ ಸ್ವಾಮೀಜಿ ಕರೆ ನೀಡಿದರು.

ಅವರು ಶಿರಾ ತಾಲ್ಲೂಕಿನ ಬುಕ್ಕಾಪಟ್ಟಣ ಗ್ರಾಮದಲ್ಲಿ ಪ್ರಗತಿ ಬಂಧು ಸ್ವ ಸಹಾಯ ಸಂಘಗಳ ಒಕ್ಕೂಟ ಸೋಮುವಾರದಂದು ಹಮ್ಮಿಕೊಂಡಿದ್ದ ಬಿಲ್ವಾರ್ಚನೆ ಹಾಗೂ ಧಾರ್ಮಿಕ ಸಭಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ ಈ ಮನುಷ್ಯ ಜನ್ಮದಲ್ಲಿ ಎರಡು ಮುಖ್ಯವಾದ ಗತಿಗಳಿವೆ. ಒಂದು ಸದ್ಗತಿ, ಮೊತ್ತೊಂದು ದುರ್ಗತಿ. ಸನ್ಮಾರ್ಗದಲ್ಲಿ ನಡೆದರೆ ಸದ್ಗತಿ, ದುರ್ಮಾರ್ಗದಲ್ಲಿ ನಡೆದರೆ ದುರ್ಗತಿ ಪ್ರಾಪ್ತಿ ಯಾಗುತ್ತದೆ.

ದುರ್ಗತಿ ಯಾದಲ್ಲಿ ಅದು ಹೀನ ಜನ್ಮ, ಸದ್ಗತಿ ಆದಲ್ಲಿ ಅದು ವಿಶೇಷ ಜನ್ಮ ಎನಿಸಿಕೊಳ್ಳುತ್ತದೆ ಎಂದು ಅಭಿಪ್ರಾಯ ಪಟ್ಟರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ತುಮಕೂರು ಜಿಲ್ಲಾ ನಿರ್ದೇಶಕರಾದ ದಿನೇಶ್ ಮಾತನಾಡಿ ಶ್ರೀ ಕ್ಷೇತ್ರ ಧರ್ಮಸ್ಥಳ ಯೋಜನೆ ತುಮಕೂರು ಜಿಲ್ಲೆಗೆ ಕಾಲಿಟ್ಟು ಹದಿನಾಲ್ಕು ವರ್ಷಗಳು ಉರುಳಿ ಹೋಗಿವೆ. ಈ ಅವಧಿಯಲ್ಲಿ ಜಿಲ್ಲೆಯ ಸಾವಿರಾರು ಮಹಿಳೆಯರು ಯೋಜನೆಯ ಲಾಭ ಪಡೆದಿದ್ದಾರೆ. ದೊರೆತ ಸೌಲಭ್ಯ ವನ್ನ ಸದ್ಬಳಕೆ ಮಾಡಿಕೊಂಡು ಜೀವನ ಮಟ್ಟವನ್ನ ಸುಧಾರಿಸಿಕೊಂಡಿದ್ದಾರೆ. ಕಳೆದ ಹದಿನಾಲ್ಕು ವರುಷದಲ್ಲಿ ಬುಕ್ಕಾಪಟ್ಟಣ ವಲಯದಲ್ಲಿ ದೇವಸ್ಥಾನಗಳ ಜೀರ್ಣೋದ್ದಾರಕ್ಕಾಗಿ 60 ಲಕ್ಷ ರೂ ನೀಡಲಾಗಿದೆ. ಈ ವಲಯ ವ್ಯಾಪ್ತಿಯ ಐದು ಪಂಚಾಯತ್ ಗಳಲ್ಲಿ 421 ಸ್ವಸಹಾಯ ಸಂಘಗಳು ರಚನೆಯಾಗಿವೆ. ಪ್ರಸಕ್ತ ವರ್ಷದಲ್ಲಿ ಪ್ರಗತಿ ನಿಧಿ ಗುರಿಯಲ್ಲಿ 20 ಕೋಟಿ ರೂ ಸಾಲ ನೀಡುವ ಗುರಿ ಹೊಂದಿದ್ದು ಡಿಸೆಂಬರ್ ಅಂತ್ಯದವರೆಗೆ 17 ಕೋಟಿ ರೂ ಸಾಲ ವಿತರಿಸಲಾಗಿದೆ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಶಿರಾ ಯೋಜನಾಧಿಕಾರಿ ಗಳಾದ ರಮೇಶ್, ಬುಕ್ಕಾಪಟ್ಟಣ ಗ್ರಾಮ ಪಂಚಾಯತ್ ಅಧ್ಯಕ್ಷ ರಾದ ಮುಜಾಯಿದ್, ಶ್ರೀ ಪಾತಾಳ ಲಿಂಗೇಶ್ವರ ಸೇವಾ ಸಮಿತಿ ಅಧ್ಯಕ್ಷ ರಾದ ಬಿ. ಸಿ. ಚನ್ನಬಸಪ್ಪ, ಶಿರಾ ತಾಲ್ಲೂಕು ಪಂಚಾಯತ್ ಮಾಜಿ ಅಧ್ಯಕ್ಷ ರಾದ ಬಿ. ಆರ್. ಮಂಜುನಾಥ್ ಹಾಗೂ ಬುಕ್ಕಾಪಟ್ಟಣ ವಲಯ ಮೇಲ್ವಿಚಾರಕಿಯಾದ ಶ್ರೀ ಮತಿ ಪ್ರಮೀಳಾ ಉಪಸ್ಥಿತರಿದ್ದರು. ಸ್ವ ಸಹಾಯ ಸಂಘಗಳ ಒಕ್ಕೂಟದ ಅಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು ಮತ್ತು ಗ್ರಾಮಸ್ಥರು ಪಾಲ್ಗೊಂಡಿದ್ದರು.

# ರಾಷ್ಟ್ರ ಮಟ್ಟದ ಸಾಹಿತ್ಯ ವಿಭೂಷಣ ಪ್ರಶಸ್ತಿಗೆ ಕಾವ್ಯಮಣಿ ಆಯ್ಕೆ



**ಮಾಗಡಿ:** ಬೆಳಗಾವಿ ಕಸ್ತೂರಿ ಸಿರಿಗನ್ನಡ ವೇದಿಕೆ (ರಿ) ಇವರು ಸಾಹಿತ್ಯ, ಭಾಷೆ, ನೆಲ – ಜಲ, ಸಂಸ್ಕೃತಿ ಮೊದಲಾದ ಕ್ಷೇತ್ರಗಳಲ್ಲಿ ಗಣನೀಯ ಸೇವೆ – ಸಾಧನೆ, ಜ್ಞಾನ, ಪ್ರೀತಿಯನ್ನು ಗುರುತಿಸಿ ರಾಷ್ಟ್ರ ಮಟ್ಟದ ಪ್ರಶಸ್ತಿಗಳನ್ನು ನೀಡಿ ಗೌರವಿಸುತ್ತಿದೆ.

ಸಾಹಿತ್ಯ ಕ್ಷೇತ್ರದಲ್ಲಿ ತಮ್ಮದೇ ಆದ ಸೇವೆಯನ್ನು ಸಲ್ಲಿಸುತ್ತಿರುವ ಮಾಗಡಿ ತಾಲ್ಲೂಕಿನ ಹೆಬ್ಬಳಲು ಗ್ರಾಮದ ಕವಿ – ಸಾಹಿತಿ ವಿಜಯಕುಮಾರ್ ಹೆಚ್ ಎಸ್ (ಕಾವ್ಯಮಣಿ) ರವರು "ರಾಷ್ಟ್ರ ಮಟ್ಟದ ಸಾಹಿತ್ಯ ವಿಭೂಷಣ" ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಸ್ವಾಮಿ ವಿವೇಕಾನಂದರ ಜನ್ಮ ದಿನವಾದ ಜನವರಿ 12 ರ ನಿಮಿತ್ಯವಾಗಿ, 26 ಜನವರಿ 2025 ರಂದು ಗೌರವಪೂರ್ವಕವಾಗಿ "ರಾಷ್ಟ್ರೀಯ ಯುವ ದಿನಾಚರಣೆ ಮತ್ತು ಗೌರವ ಪ್ರಶಸ್ತಿ ಪ್ರದಾನ ಸಮಾರಂಭ"ದಲ್ಲಿ ಪ್ರಶಸ್ತಿಯನ್ನು ಶ್ರೀ ವಿಜಯಕುಮಾರ್ ಹೆಚ್ ಎಸ್ (ಕಾವ್ಯಮಣಿ) ರವರಿಗೆ ನೀಡಿ ಗೌರವಿಸಲಾಗುವುದು ಎಂದು ಕ.ಸಿ.ವೇ ಜಿಲ್ಲಾಧ್ಯಕ್ಷರಾದ ಪ್ರೊ. ಎಚ್. ಎಲ್. ಪೆಂಡಾರಿರವರು ತಿಳಿಸಿದ್ದಾರೆ.

ಹನ್ನೆರಡನೇ ಶತಮಾನದ ಕಾರ್ತಿಕ ದೀಪದಂತೆ ಬಂದ ಕ್ರಾಂತಿಕಾರಿಯಾದ ಬಸವಣ್ಣನವರ ಆಶಯದ "ವಚನ ಮಾಂಗಲ್ಯ" ದ ಮೂಲಕ ಶ್ರೀ ವಿಜಯಕುಮಾರ್ ಹೆಚ್ ಎಸ್ ರವರು ಇತ್ತೀಚೆಗೆ ದಾಂಪತ್ಯಕ್ಕೆ ಕಾಲಿರಿಸಿ ಸಮಾಜದಲ್ಲಿ ಸಮಾತೆಯನ್ನು ಸಾರಿ ಮಾದರಿಯಾದರು. ಇದು ಮಾಗಡಿ ತಾಲೂಕಿನಲ್ಲೇ ಪ್ರಪ್ರಥಮ ವಚನ ಕಲ್ಯಾಣ ಮದುವೆ ಎಂಬ ಹೆಗ್ಗಳಿಕೆಗೆ ಪಾತ್ರವಾಯಿತು. ಇದೀಗ ಶ್ರೀ ವಿಜಯಕುಮಾರ್ ಹೆಚ್ ಎಸ್ ರವರಿಗೆ "ರಾಷ್ಟ್ರ ಮಟ್ಟದ ಸಾಹಿತ್ಯ ವಿಭೂಷಣ" ಪ್ರಶಸ್ತಿ ಲಭಿಸುತ್ತಿರುವುದು ತುಂಬಾ ಹರ್ಷವೆನಿಸುತ್ತಿದೆ.

# ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಮುರಳಿ ಆಯ್ಕೆ


**ಶಿಡ್ಲಘಟ್ಟ:** ಬಹಳ ಕುತೂಹಲದಿಂದ ಕೂಡಿದ್ದ ತಾಲ್ಲೂಕಿನ ವೈ ಹುಣಸೇನಹಳ್ಳಿ ಗ್ರಾಮ ಪಂಚಾಯಿತಿಗೆ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಜಿ.ಎನ್.ಮುರಳಿ ಜಯಗಳಿಸಿದ್ದಾರೆ ಎಂದು ಚುನಾವಣಾ ಅಧಿಕಾರಿ ಜಗದೀಶ್ ತಿಳಿಸಿದರು.

ಚುನಾವಣೆಯ ಪ್ರಕ್ರಿಯೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ನಿಗದತ ಸಮಯದೊಳಗೆ ಎರಡು ನಾಮಪತ್ರಗಳು ಮಾತ್ರ ಸಲ್ಲಿಸಲಾಗಿತ್ತು ,ಅಧ್ಯಕ್ಷ ಸ್ಥಾನಕ್ಕೆ ಸಾಮಾನ್ಯ ಸ್ಥಾನಕ್ಕೆ ಕೆ. ಎಂ. ರವಿಕುಮಾರ್ ಮತ್ತು ಜಿ ಎನ್ ಮುರಳಿ ಮಾತ್ರ ನಾಮಪತ್ರ ಸಲ್ಲಿಸಿದ್ದರು, ಯಾರೂ ನಾಮ ಪತ್ರಗಳನ್ನು ವಾಪಸ್ ಪಡೆಯದೇ ಇರುವುದರಿಂದ ಚುನಾವಣೆ ನಡೆಸಲಾಗಿ ಕೆ ಎಂ. ರವಿಕುಮಾರ್ 8 ಮತಗಳು ಪಡೆದರೆ,ಜಿ ಎನ್ ಮುರಳಿ 9 ಮತಗಳು ಪಡೆದು ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾದರು ಎಂದರು.

ನೂತನವಾಗಿ ಆಯ್ಕೆಯಾದ ಅಧ್ಯಕ್ಷ ಜಿ.ಎನ್.ಮುರಳಿ ಮಾತನಾಡಿ ಎಲ್ಲಾ ಸದಸ್ಯರ ಒಮ್ಮತದಿಂದ ಗ್ರಾಮ ಪಂಚಾಯತಿ ಅಭಿವೃದ್ಧಿಗೆ ಶ್ರಮಿಸುತ್ತೇವೆ ಪಂಚಾಯತಿ ಮಟ್ಟದ ಮೂಲಭೂತ ಸೌಕರ್ಯಗಳಾದ ನೀರು ಸ್ವಚ್ಚತೆ ಬೀದಿ, ದೀಪ ಮತ್ತು ನೈರ್ಮಲ್ಯವನ್ನು ಕಾಪಾಡುವುದರೊಂದಿಗೆ ಸಾರ್ವಜನಿಕರಿಗೆ ಸಮಗ್ರ ರೀತಿಯಲ್ಲಿ ಶ್ರಮಿಸುವೆ ಎಂದರು.

ತೀವ್ರ ಕುತೂಹಲವಾಗಿದ್ದ ವೈ. ಹುಣಸೇನಹಳ್ಳಿ ಗ್ರಾಮ ಪಂಚಾಯತಿಯು 17 ಸದಸ್ಯರ ಬಲದಲ್ಲಿ ಜೆಡಿಎಸ್ ಬೆಂಬಲಿತ 9 ಹಾಗೂ ಕಾಂಗ್ರೆಸ್ ಬೆಂಬಲಿತ ಎಂಟು ಸದಸ್ಯರನ್ನು ಒಳಗೊಂಡಿದ್ದ ಗ್ರಾಮ ಪಂಚಾಯಿತಿಯು ಕೊನೆ ಗಳಿಗೆಯಲ್ಲಿ ಜೆಡಿಎಸ್ ಬೆಂಬಲಿತ ಸದಸ್ಯ ರಾಜಪ್ಪ ಕಾಂಗ್ರೆಸ್ ಬೆಂಬಲಿತ ಸದಸ್ಯರಿಗೆ ಮತನೀಡಿ ಅಧ್ಯಕ್ಷ ಸ್ಥಾನ ಪಡೆಯಲು ಕಾರಣರಾದರು ಜೆಡಿಎಸ್ ಕೈಯಲ್ಲಿದ್ದ ಅಧ್ಯಕ್ಷ ಸ್ಥಾನವು ಕಾಂಗ್ರೆಸ್ ಪಾಲಾಯಿತು.

ಈ ಹಿಂದೆ ಜೆಡಿಡಸ್ ವಶದಲ್ಲಿದ್ದ ವಾರಹುಣಸೇನಹಳ್ಳಿ ಗ್ರಾಮ ಪಂಚಾಯಿತಿ, ಜೆಡಿಎಸ್ ಬೆಂಬಲಿತ ಸದಸ್ಯ ರಾಜಪ್ಪ ಕಾಂಗ್ರೆಸ್ ಬೆಂಬಲಿತ ಅದ್ಯಕ್ಷರ ಆಯ್ಕೆಗೆ ಕೈ ಜೋಡಿಸಿದ ಕಾರಣ ಚುನಾವಣೆ ವೇಳೆ ಕೆಲ ಕಾಲ ಕಾರ್ಯಕರ್ತರು ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿದ ರಾಜಪ್ಪನ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು, ಈ ನಡುವೆ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ನಡೆಯಿತು, ಚಿಂತಾಮಣಿ ಡಿ.ವೈ.ಎಸ್.ಪಿ ಮುರಳಿಧರ್ ನೇತೃತ್ವದಲ್ಲಿ ಶಿಡ್ಲಘಟ್ಟ ನಗರ, ಗ್ರಾಮಾಂತರ ಠಾಣೆ ಹಾಗೂ ದಿಬ್ಬೂರಹಳ್ಳಿ ಪೊಲೀಸ್ ಠಾಣೆಯ ಇನ್ಸ್ ಪೆಕ್ಟರ್ ಗಳು ಮತ್ತು ಪೊಲೀಸರು ಸೂಕ್ತ ಬಂದೋಬಸ್ತ್ ಒದಗಿಸಿ ಪರಿಸ್ಥಿತಿಯನ್ನು ತಿಳಿಗೊಳಿಸಿದರು.



# ವೇಮನರ ಪದ್ಯಗಳು ಮಾನವನ ಜೀವಿತದಲ್ಲಿ ತೊಡಗಿಸಿಕೊಳ್ಳುವ ರತ್ನಗಳು



**ಮಾಲೂರು:** ಮಹಾ ಯೋಗಿ ವೇಮನರ ಸಾಹಿತ್ಯ ಮತ್ತು ತತ್ವಪದಗಳನ್ನು ಕಿರು ಪುಸ್ತಕದಲ್ಲಿ ಮುದ್ರಿಸಿ ಈಗಿನ ಯುವ ಪೀಳಿಗೆಗೆ ನೀಡಿದಾಗ ಮಹಾನ್ ದಾರ್ಶನಿಕರ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೋಳ್ಳಲು ಸಾಧ್ಯವಾಗುತ್ತದೆ ಎಂದು ಶಾಸಕ ಕೆ.ವೈ.ನಂಜೇಗೌಡ ಅಭಿಪ್ರಾಯ ಪಟ್ಟರು,

ಪಟ್ಟಣದ ತಾಲ್ಲೂಕು ಕಚೇರಿಯಲ್ಲಿ ನಡೆದ ಶ್ರೀ ಮಹಾಯೋಗಿ ವೇಮನರ 113 ನೇ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಕೆ ವೈ ನಂಜೇಗೌಡ ರವರು ಭಾಗವಹಿಸಿ ವೇಮನ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ವೇಮನರು ರಚಿಸಿದ ಪದ್ಯಗಳು ಮಾನವನ ಜೀವಿತದಲ್ಲಿ ತೊಡಗಿಸಿಕೊಳ್ಳುವ ರತ್ನಗಳಾಗಿವೆ ಅವರು ಕವನಗಳು ತತ್ವ ಪದ್ಯಗಳು ಮುಂತಾದ ಭಾಷೆಗಳಿಗೆ ಅನುವಾದಗೊಂಡಿವೆ. ಹೀಗಾಗಿ ವೇಮನರ ಸಾಹಿತ್ಯ ಈ ಎಲ್ಲ ಭಾಷಾ ಸಾಹಿತ್ಯಗಳನ್ನು ಶ್ರೀಮಂತಗೊಳಿಸಿದೆ. ಇಂತಹ ಸಾಹಿತ್ಯವನ್ನು ಕಿರು ಪುಸ್ತಕದಲ್ಲಿ ಮುದ್ರಿಸಿ ಶಾಲಾ ಕಾಲೇಜಿನ ಮಕ್ಕಳಿಗೆ ವಿತರಿಸಿ ಅವರ ಹಾದಿಯನ್ನು ಪಾಲನೆ ಮಾಡಬೇಕು. ಅಲ್ಲದೆ ಪಟ್ಟಣದಲ್ಲಿ ಮಹಾ ಯೋಗಿ ವೇಮನ ಪುತ್ಥಳಿ ಸ್ಥಾಪನೆಗೆ ಸ್ಥಳ ಹಾಗೂ ರಸ್ತೆಗೆ ವೇಮನರ ಹೆಸರು ಇಡಲು ಪುರಸಭೆಯ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ ಅವಕಾಶ ಕಲ್ಪಿಸಲಾಗುವುದು ಎಂದರು.

ಕೆ.ಪಿ.ಸಿ.ಸಿ.ಸದಸ್ಯ ಎಂ.ಎಸ್.ಪ್ರದೀಪ್ ರೆಡ್ಡಿ ಮಾತನಾಡಿ, ರೆಡ್ಡಿ ಸಮುದಾಯದವರು ತಾಲ್ಲೂಕಿನಲ್ಲಿ ಸಾವಿರಾರು ಸಂಖ್ಯೆಯಲ್ಲಿದ್ದೇವೆ. ನಮ್ಮ ಸಮುದಾಯಕ್ಕೆ ಭೂಮಿ ನೀಡಿದರೆ ರೆಡ್ಡಿ ಸಮುದಾಯ ಹಾಗೂ ಎಲ್ಲಾ ಸಮುದಾಯಗಳ ಅತಿ ಬಡಕುಟುಂಬದ ವಿದ್ಯಾರ್ಥಿಗಳಿಗೆ ಕಾಲೇಜು, ವಿದ್ಯಾರ್ಥಿ ನಿಲಯ ನಿರ್ಮಾಣ ಮಾಡಲಾಗುವುದು. ಮುಂದಿನ ದಿನಗಳಲ್ಲಿ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲು ಕ್ರಮ ಕೈಗೊಳ್ಳಬೇಕು ಎಂದ ಅವರು ಮಹಾನ್ ವ್ಯಕ್ತಿಯ ವೇಮನರವರ ಪುತ್ಥಳಿಗೆ ನಿರ್ಮಾಣಕ್ರಕೆ ಪ್ರಮುಖ ರಸ್ತೆ, ವೃತ್ತದಲ್ಲಿ ಅವಕಾಶ ನೀಡದರೆ ಮುಂದಿನ ವೇಮನ ಜಯಂತಿಗೆ ಉದ್ಘಾಟನೆ ಮಾಡಲು ಅನುಕೂಲವಾಗಲಿದೆ ಎಂದು ಮನವಿ ಮಾಡಿದರು.

ಪ್ರತಿ ವರ್ಷದಂತೆ ಈ ವರ್ಷವೂ ಸಮುದಾಯ 3 ಮಂದಿ ಹಿರಿಯರನ್ನು ಗುರುತಿಸಿ ಅಭಿನಂದಿಸಲಾಯಿತು.

ಈ ಸಮಯದಲ್ಲಿ ರೆಡ್ಡಿ ಜನಸಂಘದ ತಾಲ್ಲೂಕು ಅಧ್ಯಕ್ಷ ರಾಮಸ್ವಾಮಿರೆಡ್ಡಿ, ತಾ.ಪಂ.ಕಾರ್ಯ ನಿರ್ವಹಣಾಧಿಕಾರಿಗಳಾದ ವಿ. ಕೃಷ್ಣಪ್ಪ , ಗ್ರೇಡ್ – 2 ತಹಸೀಲ್ದಾರ್ ಹರಿಪ್ರಸಾದ್ , ಮುಖಂಡರಾದ ಹನುಮಂತ ರೆಡ್ಡಿ, ಎಸ್.ವಿ.ಗೋವರ್ಧನ್ ರೆಡ್ಡಿ , ಎಂ ವಿ.ವೇಮನ, ಬಾಬುರೆಡ್ಡಿ, ಎಸ್.ಕೃಷ್ಣಾರೆಡ್ಡಿ, ರವೀಂದ್ರರೆಡ್ಡಿ, ಜಗನ್ ರೆಡ್ಡಿ, ಪಾಪರೆಡ್ಡಿ, ನಾರಾಂಯಣರೆಡ್ಡಿ,ನಾಗರಾಜರೆಡ್ಡಿ, ಎನ್. ಸಿದ್ದಾರೆಡ್ಡಿ, ಅಮರೇಶರೆಡ್ಡಿ, ಜನಪ್ರತಿನಿದಿಗಳು, ಅಧಿಕಾರಿಗಳು, ಮುಖಂಡರು, ಹಾಗೂ ಸಮುದಾಯದ ಅನೇಕ ಮುಖಂಡರುಗಳು ಮತ್ತು ಕಾರ್ಯಕರ್ತರು ಹಾಜರಿದ್ದರು.

# ಗ್ಯಾರಂಟಿ ಯೋಜನೆಗೆ ಪ್ರತಿವರ್ಷ ಅಂದಾಜು220 ಕೋಟಿ ರೂ. ವ್ಯಯ

**ಮಂಡ್ಯ:** ಹಲವಾರು ವಿರೋಧಗಳ ನಡುವೆ ರಾಜ್ಯದಲ್ಲಿ ಪಂಚ ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಲಾಯಿತು. ಈ ಯೋಜನೆಯಿಂದ ಪ್ರತಿ ತಾಲ್ಲೂಕಿಗೆ ಒಂದು ವರ್ಷದಲ್ಲಿ ಸುಮಾರು 220 ಕೋಟಿ ರೂ ನೀಡಲಾಗುತ್ತಿದೆ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಅವರು ತಿಳಿಸಿದರು.

ಮದ್ದೂರು ತಾಲ್ಲೂಕಿನ ಕೊಪ್ಪದಲ್ಲಿ ಸೋಮವಾರ ಆಯೋಜಿಸಲಾಗಿದ್ದ ಜನತಾ ದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗ್ಯಾರಂಟಿ ಯೋಜನೆಗಳನ್ನು ಪಡೆಯಲು ಜನರು ಕಚೇರಿಗಳಿಗೆ ಅಲೆದಾಟುವಂತಿಲ್ಲ, ನೇರವಾಗಿ ಫಲಾನುಭವಿಗಳ ಖಾತೆಗೆ ಹಣ ಜಮೆಯಾಗುತ್ತದೆ ಎಂದರು.

ಸಮಸ್ಯೆ ಪರಿಹಾರವಾದ ನಂತರ ಪರಿಹಾರವಾಗಿದೆ ಎಂದು ಯಾರು ಅಭಿನಂದನೆ ಸಲ್ಲಿಸುವುದಿಲ್ಲ. ಹೊಸ ಸಮಸ್ಯೆಗಳ ಪರಿಹಾರಕ್ಕೆ ಅರ್ಜಿ ಸಲ್ಲಿಕೆಯಾಗುತ್ತದೆ. ಸಾರ್ವಜನಿಕರ ಕೆಲಸ ಮಾಡುವುದು ಜನಪ್ರತಿನಿಧಿಗಳ ಕೆಲಸ ಎಂಬ ಮನೋಭಾವನೆಯನ್ನು ಬೆಳಸಿಕೊಳ್ಳಬೇಕು ಎಂದರು.

ಕರ್ನಾಟಕ ರಾಜ್ಯ ಸಾರ್ವಜನಿಕರಿಗೆ ನೀಡುವ ಕಾರ್ಯಕ್ರಮಗಳಿಗೆ ಸಂಗ್ರಹಿಸುವ ಫಲಾನುಭವಿಗಳ ವಿವರಗಳ ಬಗ್ಗೆ ಬೇರೆ ರಾಜ್ಯಗಳು ಮೆಚ್ಚುಗೆ ವ್ಯಕ್ತಪಡಿಸಿ, ವಿವರ ಸಂಗ್ರಹಿಸಲು ರೂಪಿಸಿರುವ ತಂತ್ರಜ್ಞಾನವನ್ನು ಹಂಚಿಕೊಳ್ಳುವಂತೆ ಮನವಿ ಸಲ್ಲಿಸಿರುವುದು ಹರ್ಷದಾಯಕ ವಿಷಯವಾಗಿದೆ ಎಂದರು.

ಕೊಪ್ಪ ಹೋಬಳಿಯಲ್ಲಿ ಇದು ಎರಡನೇ ಬಾರಿಗೆ ಜನತಾ ದರ್ಶನ ಕಾರ್ಯಕ್ರಮವನ್ನು ಆಯೋಜಿಸಿದ್ದು, ಸ್ವೀಕರಿಸುವ ಕುಂದು ಕೊರತೆ ಅರ್ಜಿಗಳನ್ನು ಕಾನೂನು ಚೌಕಟ್ಟಿನಲ್ಲಿ ಪರಿಹರಿಸಲಾಗುವುದು ಎಂದರು.

ಕೊಪ್ಪದಲ್ಲಿ ಬೇಡಿಕೆ ಇರುವ ಪೊಲೀಸ್ ಠಾಣೆ ನಿರ್ಮಾಣ, ನಾಡ ಕಚೇರಿ ಹಾಗೂ ಪ್ರವಾಸಿ ಮಂದಿರ ನಿರ್ಮಾಣಕ್ಕೆ ಸ್ಥಳ ಗುರುತಿಸುವಂತೆ ಈಗಾಗಲೇ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಇದಲ್ಲದೇ ಪಂಚಾಯಿತಿ ಕಚೇರಿ ಹಾಗೂ ಗ್ರಂಥಾಲಯ ನಿರ್ಮಾಣಕ್ಕೆ ಕ್ರಮ ಕೈಗೊಂಡಿದ್ದು, ಸುಮಾರು 1 ಕೋಟಿ ವೆಚ್ಚವಾಗಲಿದೆ ಎಂದರು.

ಸಹಕಾರ ಸಂಘದ ಮೂಲಕ ರೂ.1 ಕೋಟಿ ಸಾಲ ಕೊಪ್ಪ ಹಾಗೂ ಸುತ್ತಮುತ್ತಲಿನ 16 ಹಳ್ಳಿಗಳ ಕೃಷಿ ಪತ್ತಿನ ಸಹಕಾರ ಸಂಘ ಹಲವಾರು ಕಾರಣಗಳಿಂದ ಕೆಲಸ ಸ್ಥಗಿತಗೊಳಿಸಿತ್ತು. ಇದನ್ನು ಸರಿಪಡಿಸಿ ರೈತರು ಹಾಗೂ ಮಹಿಳೆಯರಿಗೆ ಆರ್ಥಿಕವಾಗಿ ಸದೃಢರಾಗಲು ಬಡ್ಡಿರಹಿತವಾಗಿ 1 ಕೋಟಿ ರೂ. ವರೆಗೆ ಸಾಲ ನೀಡಲಾಗಿದೆ. ಇದಕ್ಕೆ ನಬಾ9 ವಿಧಿಸುವ ಬಡ್ಡಿಯನ್ನು ಸರ್ಕಾರ ಭರಿಸುತ್ತಿದೆ ಎಂದರು.



ಗ್ಯಾರಂಟಿ ಯೋಜನೆಗಳ ಜೊತೆಗೆ ಹೈನುಗಾರಿಕೆ ಕೃಷಿ ಸಂಬಂಧಿಸಿದ ಇಲಾಖೆಗಳ ಮೂಲಕ ಕೊಪ್ಪ ಮತ್ತು ಸುತ್ತಮುತ್ತಲಿನ ಗ್ರಾಮದಲ್ಲಿ ಸುಮಾರು 2000 ಫಲಾನುಭವಿಗಳಿಗೆ 1.96 ಕೋಟಿ ರೂ ಸಹಾಯಧನ ನೀಡಲಾಗಿದೆ ಎಂದರು.

ಪೌತಿ ಖಾತೆ ಆಂದೋಲನಕ್ಕೆ ಸಂಬಂಧಿಸಿದಂತೆ ಕಳೆದ ಒಂದುವರೆ ತಿಂಗಳಿನಿಂದ ಕೊಪ್ಪ ವ್ಯಾಪ್ತಿಯಲ್ಲಿ 1275 ಅರ್ಜಿ ಸ್ವೀಕರಿಸಿ ಸುಮಾರು 443 ಪೌತಿ ಖಾತೆ ಮಾಡಿಕೊಡಲಾಗಿದೆ. ಪೌತಿ ಖಾತೆ ಮಾಡಿಸಿಕೊಳ್ಳಲು ರೈತರು ಸಹ ಆಸಕ್ತಿ ತೋರಿಸಿ ಮುಂದೆ ಬರಬೇಕು. ದಾಖಲೆ, ಆರ್.ಟಿ.ಸಿ ಗಳು ಸರಿಯಿದ್ದರೆ ಮಾತ್ರ ಬ್ಯಾಂಕ್ ಅಥವಾ ಸೊಸೈಟಿಗಳಿಂದ ಸಾಲ ಪಡೆಯಲು ಸಾಧ್ಯ ಎಂದರು.

ರೈತರ ಭೂಮಿ ಹಾಗೂ ಇನ್ನಿತರೆ ದಾಖಲೆಗಳನ್ನು ಕಂದಾಯ ಇಲಾಖೆ ಡಿಜಿಟಲ್ ಮಾಡುವ ಭೂ ಸುರಕ್ಷಾ ಯೋಜನೆಯನ್ನು ಜಾರಿಗೆ ತಂದಿರುತ್ತದೆ. ಜಿಲ್ಲೆಯಲ್ಲಿ ಈಗಾಗಲೇ 36 ಲಕ್ಷ ದಾಖಲೆಗಳನ್ನು ಡಿಜಟಲೀಕರಣ ಮಾಡಲಾಗಿದೆ ಎಂದರು.

ಕಂದಾಯ ಇಲಾಖೆಯಲ್ಲಿ ಜನಪರ ಕೆಲಸಗಳು ನಡೆಯುತ್ತಿದ್ದು, ಸುಮಾರು 67 ಲಕ್ಷ ಪೌತಿ ಖಾತೆ, ಹಲವಾರು ವರ್ಷಗಳಿಂದ ಬಾಕಿ ಇದ್ದ ಕೋರ್ಟ್ ಪ್ರಕರಣಗಳನ್ನು ಒಂದು ವರ್ಷದಲ್ಲಿ 16000 ವಿಲೇವಾರಿ ಮಾಡಲಾಗಿದೆ. 18 ಲಕ್ಷ ಆರ್.ಟಿ.ಸಿ ಗಳಿಗೆ ಆಧಾರ್ ಜೋಡಣೆ ಕೆಲಸ ಮಾಡಲಾಗಿದೆ ಎಂದರು.

ಇತಿಹಾಸದಲ್ಲೇ ಮೊದಲ ಬಾರಿಗೆ ನಿರಂತರ 154 ದಿನಗಳು ಕೆ.ಆರ್.ಎಸ್ ನಲ್ಲಿ ನೀರು ತುಂಬಿರುವುದು ಸಂತೋಷದ ವಿಷಯವಾಗಿದೆ. ಜಿಲ್ಲೆಯ ಕೆರೆಗಳಿಗೆ ನೀರು ತುಂಬಿಸಲು ಕ್ರಮ ವಹಿಸಲಾಗಿದೆ ಬೆಳಗಳಿಗೆ ಕಟ್ಟು ಪದ್ಧತಿಯಲ್ಲಿ ನೀರು ಹರಿಸಲು ಪ್ರಾರಂಭಿಸಲಾಗಿದೆ. ರೈತರು ಬಿತ್ತನೆ ಕೆಲಸಗಳನ್ನು ಪ್ರಾರಂಭಿಸುವಂತೆ ತಿಳಿಸಿದರು.

ರೈತರಿಗೆ ಹೆಚ್ಚು ಉಪಯುಕ್ತವಾಗಲಿ ಎಂದು ರೈತರು ಹೆಚ್ಚಿರುವ ಜಿಲ್ಲೆ ಮಂಡ್ಯ ಜಿಲ್ಲೆಯಲ್ಲಿ ಕೃಷಿ ವಿಶ್ವವಿದ್ಯಾಲಯವನ್ನು ವಿ.ಸಿ.ಫಾರಂ ನಲ್ಲಿ ಪ್ರಾರಂಭಿಸಲಾಗುವುದು. ಇಲ್ಲಿ ಕೃಷಿ ತಜ್ಞರು ರೈತರಿಗೆ ಹಲವಾರು ಉಪಯುಕ್ತ ಮಾಹಿತಿಯನ್ನು ನೀಡಲಿದ್ದಾರೆ ಎಂದರು.

ಜಿಲ್ಲಾಧಿಕಾರಿ ಡಾ: ಕುಮಾರ ಅವರು ಮಾತನಾಡಿ ಜನರ ಸಮಸ್ಯೆಗಳನ್ನು ಪರಿಹರಿಸಲು ಜನತಾ ದರ್ಶನ ಕಾರ್ಯಕ್ರಮವನ್ನು ಎರಡನೇ ಬಾರಿಗೆ ಕೊಪ್ಪದಲ್ಲಿ ಆಯೋಜಿಸಲಾಗಿದ್ದು, ಈ ಹಿಂದೆ ಸ್ವೀಕೃತವಾರ ಕುಂದು ಕೊರತೆ ಅರ್ಜಿಗಳಿಗೆ ಪರಿಹಾರ ಒದಗಿಸಲಾಗಿದೆ ಎಂದರು.

ಕಂದಾಯ ಇಲಾಖೆ ಚುರುಕಾಗಿ ಕೆಲಸ ನಿರ್ವಹಿಸುತ್ತಿದ್ದು, ಸ್ವಯಂ ಪ್ರೇರಿತವಾಗಿ ಪೌತಿ ಖಾತೆ ಆಂದೋಲನ, ಪೋಡಿ ದುರಸ್ತಿ, ಆಧಾರ ಸೀಡಿಂಗ್ ಕೆಲಸಗಳನ್ನು ಮನೆ ಮನೆಗೆ ಭೇಟಿ ನೀಡಿ ದಾಖಲೆ ಸಂಗ್ರಹಿಸಿಕೊಂಡು ಮಾಡಿಕೊಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಡಿ.ಸಿ.ಸಿ ಬ್ಯಾಂಕ್ ಅಧ್ಯಕ್ಷ ಜೋಗಿಗೌಡ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್,ಮಂಡ್ಯ ಉಪವಿಭಾಗಾಧಿಕಾರಿ ಶಿವ ಮೂರ್ತಿ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಿಎಂ ಆತಿಶಿ ವಿರುದ್ಧ ಮಾನನಷ್ಟ ಮೊಕದ್ದಮೆ ದಾಖಲಿಸಿದ ಸಂದೀಪ್

**ನವದೆಹಲಿ:** ನವದೆಹಲಿ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಯಾಗಿರುವ, ಕಾಂಗ್ರೆಸ್‌ನ ಹಿರಿಯ ಮುಖಂಡ ಸಂದೀಪ್ ದೀಕ್ಷಿತ್ ಅವರು ದೆಹಲಿ ಸಿಎಂ ಅತಿಶಿ, ಆಮ್ ಆದ್ಮಿ ಪಕ್ಷದ ಸಂಸದ ಸಂಜಯ್ ಸಿಂಗ್ ಮತ್ತು ಪಕ್ಷದ ಇತರ ಮುಖಂಡರ ವಿರುದ್ಧ 10 ಕೋಟಿ ರೂಪಾಯಿಗಳ ಸಿವಿಲ್ ಮತ್ತು ಕ್ರಿಮಿನಲ್ ಮಾನಹಾನಿ ಮೊಕದ್ದಮೆಗಳನ್ನು ದಾಖಲಿಸಿದ್ದಾರೆ.

ಸಂದೀಪ್ ದೀಕ್ಷಿತ್ ಬಿಜೆಪಿಯಿಂದ ಕೋಟ್ಯಂತರ ರೂಪಾಯಿ ಹಣ ಪಡೆದುಕೊಂಡಿದ್ದು, ಮುಂಬರುವ ಚುನಾವಣೆಯಲ್ಲಿ ಆಪ್ ಅನ್ನು ಸೋಲಿಸಲು ಬಿಜೆಪಿಯೊಂದಿಗೆ ಸೇರಿಕೊಂಡು ಪಿತೂರಿ ನಡೆಸಿದ್ದಾರೆ ಎಂದು ಡಿಸೆಂಬರ್ 26, 2024 ರಂದು ನವದೆಹಲಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಸಿಎಂ ಅತಿಶಿ ಮತ್ತು ಸಂಸದ ಸಂಜಯ್ ಸಿಂಗ್ ಆರೋಪಿಸಿದ್ದರು.

ಈ ಆರೋಪಗಳನ್ನು ಸಾರಾಸಗಟಾಗಿ ನಿರಾಕರಿಸಿರುವ ದೀಕ್ಷಿತ್, ಆರೋಪಗಳು ಆಧಾರ ರಹಿತ ಮತ್ತು ಮಾನಹಾನಿಕರ ಎಂದು ಹೇಳಿದ್ದಾರೆ. ಈ ಆರೋಪಗಳಿಂದ ತಮ್ಮ ಪ್ರತಿಷ್ಠೆಗೆ ಉಂಟಾದ ಹಾನಿಗಾಗಿ 10 ಕೋಟಿ ರೂ.ಗಳ ಪರಿಹಾರವನ್ನು ಅವರು ಕೋರಿದ್ದಾರೆ. ದೀಕ್ಷಿತ್ ಸಲ್ಲಿಸಿದ ಸಿವಿಲ್ ಮಾನನಷ್ಟ ಮೊಕದ್ದಮೆಯನ್ನು ನ್ಯಾಯಮೂರ್ತಿ ಪುರುಷೀಂದ್ರ ಕುಮಾರ್ ಕೌರವ್ ಅವರ ನ್ಯಾಯಪೀಠದ ಮುಂದೆ ಸೋಮವಾರ ವಿಚಾರಣೆಗೆ ಪಟ್ಟಿ ಮಾಡಲಾಗಿತ್ತು. ನಂತರ ವಿಚಾರಣೆಯನ್ನು ಫೆಬ್ರವರಿಗೆ ಮುಂದೂಡಲಾಯಿತು. ಪ್ರಕರಣದಲ್ಲಿ ವಾದಿ ಸಂದೀಪ್ ದೀಕ್ಷಿತ್ ಅವರ ಪರವಾಗಿ ವಕೀಲ ಸರೀಮ್ ಜಾವೇದ್ ದೆಹಲಿ ಹೈಕೋರ್ಟ್ ಮುಂದೆ ಹಾಜರಾಗಿದ್ದರು.

ಏತನ್ಮಧ್ಯೆ, ಇದಕ್ಕೆ ಸಂಬಂಧಿಸಿದ ಕ್ರಿಮಿನಲ್ ಮಾನನಷ್ಟ ಪ್ರಕರಣದಲ್ಲಿ, ದೆಹಲಿಯ ರೂಸ್ ಅವೆನ್ಯೂ ನ್ಯಾಯಾಲಯವು ಕಳೆದ ವಾರ ಅತಿಶಿ ಮತ್ತು ಸಂಜಯ್ ಸಿಂಗ್ ಅವರಿಗೆ ನೋಟಿಸ್ ನೀಡಿದೆ. ಹೆಚ್ಚುವರಿ ಮುಖ್ಯ ನ್ಯಾಯಾಂಗ ಮ್ಯಾಜಿಸ್ಟ್ರೇಟ್ (ಎಸಿಜೆಎಂ) ಪರಾಸ್ ದಲಾಲ್ ಅವರು ನೋಟಿಸ್ ನೀಡಿದ್ದು, ಆರೋಪಗಳಿಗೆ ಪ್ರತಿಕ್ರಿಯಿಸಲು ಜನವರಿ 27, 2025 ರಂದು ನ್ಯಾಯಾಲಯದ ಮುಂದೆ ಹಾಜರಾಗುವಂತೆ ಎಎಪಿ ನಾಯಕರಿಗೆ ಸೂಚಿಸಿದೆ.

ಸಂದೀಪ್ ದೀಕ್ಷಿತ್ ಅವರು ತಮ್ಮ ವಕೀಲ ಸರಿಮ್ ಜಾವೇದ್ ಮೂಲಕ ಸಲ್ಲಿಸಿದ ದೂರಿನಲ್ಲಿ, ಇಬ್ಬರೂ ಎಎಪಿ ನಾಯಕರು ತಮ್ಮ ಪತ್ರಿಕಾಗೋಷ್ಠಿಯಲ್ಲಿ ಆಧಾರರಹಿತ ಮಾನಹಾನಿಕರ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಆರೋಪಿಸಿದ್ದಾರೆ. ಎಎಪಿಯನ್ನು ಸೋಲಿಸಲು ದೀಕ್ಷಿತ್ ಮತ್ತು ಕಾಂಗ್ರೆಸ್ ಪಕ್ಷವು ಬಿಜೆಪಿಯೊಂದಿಗೆ ಕೈಜೋಡಿಸಿದೆ ಎಂದು ಅತಿಶಿ ಮತ್ತು ಸಂಜಯ್ ಸಿಂಗ್ ಹೇಳಿಕೆ ನೀಡಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಆದರೆ ಮುಖಂಡರ ಈ ಹೇಳಿಕೆಗಳಿಗೆ ಯಾವುದೇ ಆಧಾರಗಳಿಲ್ಲ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

# ಸೋಪೋರ್ ಎನ್‌ಕೌಂಟರ್‌ನಲ್ಲಿ ಯೋಧ ಹುತಾತ್ಮ

**ಜಮ್ಮು-ಕಾಶ್ಮೀರ:** ಇಲ್ಲಿನ ಸೋಪೋರ್‌ನಲ್ಲಿ ನಡೆಯುತ್ತಿರುವ ಉಗ್ರ ನಿಗ್ರಹ ಕಾರ್ಯಾಚರಣೆಯಲ್ಲಿ ಭ'ಂಯೋತ್ಪಾದಕರೊಂದಿಗಿನ ಎನ್‌ಕೌಂಟರ್‌ನಲ್ಲಿ ಯೋಧರೊಬ್ಬರು ಹುತಾತ್ಮರಾಗಿದ್ದಾರೆ ಎಂದು ಅಧಿಕಾರಿಗಳು ಸೋಮವಾರ ತಿಳಿಸಿದರು.

ಸೋಪೋರ್ ಪೊಲೀಸ್ ಜಿಲ್ಲೆಯ ಜಲೂರಾ ಗುಜ್ಜರ್ಪತಿಯಲ್ಲಿ ಉಗ್ರರು ಅಡಗಿದ್ದಾರೆ ಎಂಬ ಮಾಹಿತಿ ತಿಳಿದ ಭದ್ರತಾ ಪಡೆಗಳು ದಾಳಿ ನಡೆಸಿದ್ದರು. ಈ ವೇಳೆ ಭಯೋತ್ಪಾದಕರು ಯೋಧರ ಮೇಲೆ ಗುಂಡಿನ ದಾಳಿ ನಡೆಸಿದ್ದಾರೆ. ಗುಂಡಿನ ಚಕಮಕಿಯಲ್ಲಿ ಯೋಧ ಪಂಗಾಲ ಕಾರ್ತಿಕ್ ಗಾಯಗೊಂಡಿದ್ದರು. ತಕ್ಷಣವೇ ಅವರನ್ನು ಆಸ್ಪತ್ರೆಗೆ ರವಾನಿಸುತ್ತಿದ್ದಾಗ ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ಹೇಳಿದರು.

ರಾತ್ರಿಯಿಡೀ ಕಾರ್ಯಾಚರಣೆ: ಜಲೂರಾ ಗುಜ್ಜರ್ಪತಿಯಲ್ಲಿ ಉಗ್ರರು ಅಡಗಿದ್ದಾರೆ ಎಂದು ಭಾನುವಾರ ಮಾಹಿತಿ ಲಭ್ಯವಾಗಿತ್ತು. ಉಗ್ರರ ಅಡಗುತಾಣವನ್ನು ಭೇದಿಸುವಾಗ ಗುಂಡಿನ ಚಕಮಕಿ ನಡೆಯಿತು.



ಉಗ್ರರು ತಪ್ಪಿಸಿಕೊಳ್ಳದಂತೆ ರಾತ್ರಿಯಡೀ ಕಣ್ಗಾವಲು ಹಾಕಲಾಗಿತ್ತು. ಸೋಮವಾರ ಬೆಳಗ್ಗೆ ಮತ್ತೆ ದಾಳಿ ನಡೆಯಿತು ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಈ ಬಗ್ಗೆ ತನ್ನ ಅಧಿಕೃತ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಚಿನಾರ್ ಕಾರ್ಪ್ಸ್ ಆಫ್ ಆರ್ಮಿ, ಕರ್ತವ್ಯದ ವೇಳೆ ಪಂಗಾಲ ಕಾರ್ತಿಕ್ ಅವರು ತಮ್ಮ ಪ್ರಾಣ ತ್ಯಾಗ ಮಾಡಿದ್ದಾರೆ. ಚಿನಾರ್ ವಾರಿಯರ್ಸ್ ಅವರ ಶೌರ್ಯ ಮತ್ತು ತ್ಯಾಗವನ್ನು ಸ್ಮರಿಸುತ್ತದೆ. ದುಃಖಿತ ಕುಟುಂಬದೊಂದಿಗೆ ಸೇನೆ ಇರಲಿದೆ ಎಂದು ಬರೆದುಕೊಂಡಿದೆ.

ಮಹಿಳಾ ನಕ್ಸಲರ ಸಾವು, ಕಮಾಂಡೋಗೆ ಗಾಯ: ಇತ್ತ, ಛತ್ತೀಸ್‌ಗಢದಲ್ಲಿ ನಕ್ಸಲ್ ಕಾರ್ಯಾಚರಣೆ ಮತ್ತಷ್ಟು ತೀವ್ರವಾಗಿದ್ದು, ಇಂದು ಗರಿಯಾಬಂದ್ ಜಿಲ್ಲೆಯಲ್ಲಿ ನಡೆದ ಭದ್ರತಾ ಪಡೆಗಳು ಮತ್ತು ಮಾವೋವಾದಿಗಳ ನಡುವಿನ ಗುಂಡಿನ ಚಕಮಕಿಯಲ್ಲಿ ಇಬ್ಬರು ಮಹಿಳಾ ನಕ್ಸಲರು ಸಾವನ್ನಪ್ಪಿದ್ದಾರೆ. ಸಿಆರ್‌ಪಿಎಫ್‌ನ ಕಮಾಂಡೋ ಬೆಟಾಲಿಯನ್ ಫಾರ್ ರೆಸಲ್ಯೂಟ್ ಆಯಕ್ಷನ್‌ನ ಒಬ್ಬ ಸಿಬ್ಬಂದಿ ಗಾಯಗೊಂಡಿದ್ದಾಗಿ ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

ಛತ್ತೀಸ್‌ಗಢ-ಒಡಿಶಾ ಗಡಿಯಲ್ಲಿರುವ ಮೈನ್‌ಪುರ ಪೊಲೀಸ್ ಠಾಣೆ ವ್ಯಾಪ್ತಿಯ ಅರಣ್ಯದಲ್ಲಿ ಭದ್ರತಾ ಸಿಬ್ಬಂದಿ ನಕ್ಸಲ್ ವಿರೋಧಿ ಕಾರ್ಯಾಚರಣೆ ನಡೆಸಿತು. ಗುಂಡಿನ ಚಕಮಕಿಯಲ್ಲಿ ಇಬ್ಬರು ಮಹಿಳಾ ನಕ್ಸಲರು ಹತರಾಗಿದ್ದಾರೆ. ಅವರ ಮೃತದೇಹಗಳು ಪತ್ತೆಯಾಗಿವೆ. ಗಾಯಗೊಂಡ ಕೋಬ್ರಾ ಕಮಾಂಡೋ ಒಬ್ಬರನ್ನು ಚಿಕಿತ್ಸೆಗಾಗಿ ರಾಯ್‌ಪುರಕ್ಕೆ ವಿಮಾನದ ಮೂಲಕ ಕಳುಹಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.


ಛತ್ತೀಸ್‌ಗಢದಲ್ಲಿ ಜನವರಿಯಿಂದ ನಡೆದ ಪ್ರತ್ಯೇಕ ಎನ್‌ಕೌಂಟರ್‌ಗಳಲ್ಲಿ ಇದುವರೆಗೆ 28 ನಕ್ಸಲರು ಹತರಾಗಿದ್ದಾರೆ. ಜನವರಿ 16 ರಂದು ಬಿಜಾಪುರ ಜಿಲ್ಲೆಯಲ್ಲಿ ನಡೆದಿದ್ದ ದಾಳಿಯಲ್ಲಿ 18 ಮಂದಿ ಹತರಾಗಿದ್ದರು. 2024 ರಲ್ಲಿ ನಡೆದ ಪ್ರತ್ಯೇಕ ಎನ್‌ಕೌಂಟರ್‌ಗಳಲ್ಲಿ ಒಟ್ಟು 219 ನಕ್ಸಲರನ್ನು ಭದ್ರತಾ ಪಡೆಗಳು ತಟಸ್ಥಗೊಳಿಸಿವೆ ಎಂದು ಅಧಿಕಾರಿಗಳು ಅಂಕಿ ಅಂಶ ನೀಡಿದ್ದಾರೆ.

# ಮಹಾಕುಂಭ ಮೇಳದಲ್ಲಿ ಮತ್ತೊಂದು ಬೆಂಕಿ ಅವಘಡ: ಅಪಾಯದಿಂದ ಪಾರು

**ಪ್ರಯಾಗ್‌ರಾಜ್:** ಹಿಂದುಗಳ ಮಹಾಸಂಗಮ ಎಂದೇ ಕರೆಯುವ ಪ್ರಯಾಗ್‌ರಾಜ್‌ನಲ್ಲಿ ನಡೆಯು ತ್ತಿರುವ ಮಹಾಕುಂಭ ಮೇಳದಲ್ಲಿ ಮತ್ತೊಂದು ಅಗ್ನಿ ಅವಘಡ ಸಂಭವಿಸಿದೆ. ಕುಂಭ ಸ್ನಾನ ಪ್ರದೇಶದ 16ನೇ ಸೆಕ್ಟರ್‌ನಲ್ಲಿ ಬೆಂಕಿ ಹೊತ್ತಿಕೊಂಡಿದೆ. ತಕ್ಷಣವೇ ಅಗ್ನಿಯನ್ನು ನಂದಿಸಲಾಗಿದ್ದು, ಯಾವುದೇ ಅಪಾಯ ಸಂಭವಿಸಿಲ್ಲ.

"ಬೆಳಗ್ಗೆ 9.30 ರ ಸುಮಾರಿಗೆ ಕಿನ್ನರ್ ಅಖಾಡ ಉಳಿದುಕೊಂಡಿರುವ ಶಿಬಿರದ ಬಳಿ ಅಗ್ನಿಯಿಂದ ಹೊಗೆ ಏಳುತ್ತಿರುವುದನ್ನು ಟವರ್‌ನಲ್ಲಿ ವೀಕ್ಷಣೆ ಮಾಡುತ್ತಿದ್ದ ಸಿಬ್ಬಂದಿ ಕಂಡಿದ್ದಾರೆ. ತಕ್ಷಣವೇ ಈ ಬಗ್ಗೆ ಕಂಟ್ರೋಲ್ ರೂಮಿಗೆ ಮಾಹಿತಿ ನೀಡಿದ್ದಾರೆ ಎಂದು ಅಗ್ನಿಶಾಮಕ ದಳದ ಅಧಿಕಾರಿಯೊಬ್ಬರು ತಿಳಿಸಿದರು.

ಅಗ್ನಿಶಾಮಕ ದಳದ ವಾಹನಗಳು ಮತ್ತು ಆ ಪ್ರದೇಶದಲ್ಲಿ ಗಸ್ತು ತಿರುಗುತ್ತಿದ್ದ



ಸಿಬ್ಬಂದಿ ಸ್ಥಳಕ್ಕೆ ತೆರಳುವ ಹೊತ್ತಿಗೆ ಅಲ್ಲಿದ್ದ, ಜನರು ನೀರು ಮತ್ತು ಮರಳನ್ನು ಬಳಸಿ ಬೆಂಕಿಯನ್ನು ನಂದಿಸಿದ್ದಾರೆ ಎಂದು ಅಧಿಕಾರಿ ಹೇಳಿದರು.

ಅಗ್ನಿ ಕಾಣಿಸಿಕೊಂಡು ಪ್ರದೇಶವು, ಶ್ರೀ ಹರಿ ದಿವ್ಯ ಸಾಧನಾ ಪೀಠದ ಶಿಬಿರವಾಗಿದ್ದು, ಒಂದು ಸಣ್ಣ ಟೆಂಟ್‌ಗೆ ಬೆಂಕಿ ಹೊತ್ತಿಕೊಂಡಿರುವುದು ತಪಾಸಣೆಯಲ್ಲಿ ತಿಳಿದುಬಂದಿದೆ. ಅದೃಷ್ಟವಶಾತ್, ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ಅಧಿಕಾರಿ ಮಾಹಿತಿ ನೀಡಿದರು.

ಅಗ್ನಿ ದುರಂತದಲ್ಲಿ 19ನೇ ಸೆಕ್ಟರ್‌ನಲ್ಲಿ 18 ಟೆಂಟ್‌ಗಳು ಸುಟ್ಟು ಹೋಗಿದ್ದವು. ಗೀತಾ ಪ್ರೆಸ್ ಮತ್ತು ಅಖಿಲ ಭಾರತೀಯ ಧರ್ಮ ಸಂಘ ಕಲ್ಪವಾಸಿಗಳ ಶಿಬಿರದಲ್ಲಿ ಈ ಬೆಂಕಿ ಅವಘಡ ಸಂಭವಿಸಿತ್ತು. ಅದು ವೇಗವಾಗಿ ಹರಡಿ 18 ಟೆಂಟ್‌ಗಳನ್ನು ಆವರಿಸಿತ್ತು. ಈ ಬೆಂಕಿ ಹೊತ್ತಿಕೊಳ್ಳಲು ಎಲ್‌ಪಿಜಿ ಸಿಲಿಂಡರ್‌ಗಳು ಸ್ಫೋಟಗೊಂಡಿದ್ದೇ ಕಾರಣ, ಘಟನೆಯಲ್ಲಿ ಯಾವುದೇ ಸಾವು ನೋವು ಸಂಭವಿಸಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದರು.

# ಮೋದಿ ಮಣಿಪುರವನ್ನು ಶಾಗೆ ಹೊರ ಗುತ್ತಿಗೆ ನೀಡಿರುವುದ ವಿನಾಶಕಾರಿ ಬೆಳವಣಿ ; ಕಾಂಗ್ರೆಸ್

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಮಣಿಪುರವನ್ನು ಕೇಂದ್ರ ಗಹ ಸಚಿವ ಅಮಿತ್ ಶಾ ಅವರಿಗೆ ಹೊರಗುತ್ತಿಗೆ ನೀಡುವುದು ಪ್ರಧಾನ ಮಂತ್ರಿ ಜವಾಬ್ದಾರಿಯಿಂದ ವಿನಾಶಕಾರಿ ಬೆಳವಣಿಗೆ ಎಂದು ಕಾಂಗ್ರೆಸ್ ಆರೋಪಿಸಿದೆ. ತ್ರಿಪುರಾ, ಮೇಘಾಲಯ ಮತ್ತು ಮಣಿಪುರದ ಜನರಿಗೆ ಅವರ ರಾಜ್ಯೋತ್ಸವ ದಿನದಂದು ಪ್ರಧಾನಿ ಮೋದಿ ಶುಭಾಶಯ ಕೋರಿದ ನಂತರ ವಿರೋಧ ಪಕ್ಷದ ಈ ದಾಳಿ ನಡೆದಿದೆ.

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸಂವಹನದ ಉಸ್ತುವಾರಿ ಜೈರಾಮ್ ರಮೇಶ್ ಅವರು ಪ್ರಧಾನ ಮಂತ್ರಿ ಮಣಿಪುರದ ಜನರಿಗೆ ಅವರ ರಾಜ್ಯೋತ್ಸವ ದಿನದಂದು ಸಾಮಾಜಿಕ ಮಾಧ್ಯಮದ ಮೂಲಕ ಶುಭಾಶಯಗಳನ್ನು ಕಳುಹಿಸಿದ್ದಾರೆ. ಮಣಿಪುರದ ಸಂಕಟವು ಮೇ 3, 2023 ರಂದು ಪ್ರಾರಂಭವಾದಾಗಿನಿಂದ ಅವರು ಮಣಿಪುರಕ್ಕೆ ಭೇಟಿ ನೀಡಲು ಮೊಂಡುತನದಿಂದ ನಿರಾಕರಿಸುತ್ತಿರುವುದು ಯಾವ ಪುರುಷಾರ್ಥಕ್ಕೆ ಎಂದು ಎಕ್ಸ ನಲ್ಲಿ ಪ್ರಶ್ನಿಸಿದ್ದಾರೆ.

ಅವರು ಪ್ರಪಂಚದಾದ್ಯಂತ ಹೋಗಿದ್ದಾರೆ ಆದರೆ ಇಂಫಾಲ್ ಮತ್ತು ಇತರ ಸ್ಥಳಗಳಲ್ಲಿ ರಾಜ್ಯದ ಜನರನ್ನು ತಲುಪಲು ಸಮಯ ಅಥವಾ ಒಲವು



ಕಂಡುಬಂದಿಲ್ಲ ಎಂದು ಅವರು ಹೇಳಿದರು.

ರಾಜ್ಯದಲ್ಲಿ ತಮದೇ ಪಕ್ಷದ ಶಾಸಕರನ್ನು ಭೇಟಿಯಾಗಲು ಮೋದಿ ಮೊಂಡುತನದಿಂದ ನಿರಾಕರಿಸಿದ್ದಾರೆ ಮತ್ತು ಸಿಎಂ ಜೊತೆ ಒಬ್ಬರ ಮೇಲೊಬ್ಬರು ಭೇಟಿ ಮಾಡಿಲ್ಲ, ಸಂಸದರು, ರಾಜಕೀಯ ಮುಖಂಡರು ಮತ್ತು ರಾಜ್ಯದ ನಾಗರಿಕ ಸಮಾಜ ಸಂಘಟನೆಗಳನ್ನು ಭೇಟಿ ಮಾಡಿಲ್ಲ ಎಂದು ರಮೇಶ್ ಹೇಳಿದರು.

ಅವರ ರಾಜ್ಯೋತ್ಸವ ದಿನದ ಶುಭಾಶಯಗಳು ಟೊಳ್ಳಾಗಿದೆ ಮತ್ತು ಅವರ ಬೂಟಾಟಿಕೆಯನ್ನು ಪ್ರತಿಬಿಂಬಿಸುತ್ತದೆ ಇದು ಯಾವುದೇ ಮಿತಿಗಳನ್ನು ತಿಳಿದಿಲ್ಲ ಎಂದು ಕಾಂಗ್ರೆಸ್ ನಾಯಕ ಹೇಳಿದರು.

ಕಾಂಗ್ರೆಸ್ ಅವರು ತಕ್ಷಣವೇ ಮಣಿಪುರಕ್ಕೆ ಭೇಟಿ ನೀಡ ಬೇಕೆಂದು ಒತ್ತಾಯಿಸುತ್ತದೆ. ಇದು ಅವರಕಾಳಜಿ ಯನ್ನು ತೋರಿಸಲುಅವರು ವ'ಾಡಬಹುದಾದ ಕನಿಷ್ಠ ಕೆಲಸವಾಗಿದೆ. ವ'ಣಿಪು ರವನ್ನು ಕೇಂದ್ರ ಗಹಸಚಿವರಿಗೆ ಹೊರಗುತ್ತಿಗೆನೀಡುವುದು ಪ್ರಧಾನ ಮಂತ್ರಿ ಜವಾಬ್ದಾರಿ ಯಿಂದ ದೂರವಿರುವುದು ಮತ್ತು ವಿನಾಶಕಾರಿ ಎಂದು ಸಾಬೀತಾಗಿದೆ ಎಂದು ರಮೇಶ್ ಹೇಳಿದರು.

# ವಾಷಿಂಗ್ಟನ್‌ನಲ್ಲಿ ವಿದ್ಯಾರ್ಥಿಗೆ ಗುಂಡಿಕ್ಕಿ ಹತ್ಯೆ

**ಹೈದರಾಬಾದ್:** ವಾಷಿಂಗ್ಟನ್ ಡಿಸಿಯಲ್ಲಿ ಅಪರಿಚಿತ ದುಷ್ಕರ್ಮಿಗಳು ನಡೆಸಿದ ಗುಂಡಿನ ದಾಳಿಯಲ್ಲಿ ಹೈದರಾಬಾದ್ ಮೂಲದ 26 ವರ್ಷದ ವಿದ್ಯಾರ್ಥಿ ಮೃತಪಟ್ಟಿದ್ದಾನೆ. ಮೃತ ವಿದ್ಯಾರ್ಥಿಯನ್ನು ರವಿತೇಜ ಎಂದು ಗುರುತಿಸಲಾಗಿದೆ. ಪೆಟ್ರೋಲ್ ಪಂಪ್‌ನಲ್ಲಿ ಗುಂಡಿನ ದಾಳಿ ನಡೆದಿದ್ದು, ವಿದ್ಯಾರ್ಥಿ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಘಟನೆ ನಡೆದಿರುವ ಬಗ್ಗೆ ನಾರ್ತ್ ಅಮೆರಿಕನ್ ಅಸೋಸಿಯೇಷನ್ ಆಫ್ ಇಂಡಿಯನ್ ಸ್ಟೂಡೆಂಟ್ಸ್ (ಎನ್‌ಎಎಐಎಸ್) ದೃಢಪಡಿಸಿದೆ.

ಘಟನೆಯ ಬಗೆಗಿನ ಹೆಚ್ಚಿನ ವಿವರಗಳು ತಕ್ಷಣಕ್ಕೆ ಲಭ್ಯವಾಗಿಲ್ಲ. ಘಟನಾ ಸ್ಥಳದ ಬಳಿ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ದ್ವೇಷ ಅಪರಾಧ ಸೇರಿದಂತೆ ಎಲ್ಲಾ ಕೋನಗಳಿಂದ ಅಧಿಕಾರಿಗಳು ಘಟನೆಯ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

ಹೈದರಾಬಾದಿನ ಚೈತನ್ಯಪುರಿಯ ಗ್ರೀನ್ ಹಿಲ್ಸ್ ಕಾಲೋನಿ ನಿವಾಸಿಯಾಗಿರುವ ರವಿತೇಜ, ಬಿಸಿನೆಸ್ ಅಡ್ಮಿನಿಸ್ಟ್ರೇಷನ್‌ನಲ್ಲಿ ಸ್ನಾತಕೋತ್ತರ ಪದವಿ ಪಡೆಯಲು 2022ರ ಮಾರ್ಚ್‌ನಲ್ಲಿ ಅಮೆರಿಕಕ್ಕೆ ತೆರಳಿದ್ದರು. ಪ್ರಸ್ತುತ ಅಧ್ಯಯನವನ್ನು ಪೂರ್ಣಗೊಳಿಸಿದ್ದ ಅವರು ಅಮೆರಿಕದಲ್ಲಿ ನೌಕರಿಯ ಹುಡುಕಾಟದಲ್ಲಿದ್ದರು.

ಈ ದುರಂತ ಘಟನೆಯಿಂದ ರವಿ ತೇಜ ಅವರ ಕುಟುಂಬ ತೀವ್ರ ಆಘಾತಕ್ಕೀಡಾಗಿದೆ. ರವಿತೇಜ ಅವರ ತಂದೆ ಕೆ. ಚಂದ್ರಮೌಳಿ ಅವರು ಸಂತೈಸಲಾಗದಷ್ಟು ದುಃಖಿತರಾಗಿದ್ದಾರೆ. ಮೃತದೇಹವನ್ನು ಭಾರತಕ್ಕೆ ತರಲು ಸಹಾಯ ಮಾಡುವಂತೆ ಕುಟುಂಬವು ಕೇಂದ್ರ ಮತ್ತು ರಾಜ್ಯ ಸರ್ಕಾರಗಳನ್ನು ವಿನಂತಿಸಿದೆ.

ಸಾಯಿ ತೇಜ ನುಕಾರಪು (22) ಎಂಬ ಯುವಕನ ಮೇಲೆ ಚಿಕಾಗೋ ಬಳಿಯ ಗ್ಯಾಸ್ ಸ್ಟೇಷನ್ ನಲ್ಲಿ ದುಷ್ಕರ್ಮಿಗಳು ಗುಂಡು ಹಾರಿಸಿದ್ದರು. ನುಕಾರಾಪು ಭಾರತದಲ್ಲಿ ಬಿಬಿಎ ಮುಗಿಸಿ ಅಮೆರಿಕದಲ್ಲಿ ಎಂಬಿಎ ವ್ಯಾಸಂಗ ಮಾಡುತ್ತಿದ್ದರು. ಮೃತರು ನಾಲ್ಕು ತಿಂಗಳ ಹಿಂದಷ್ಟೇ ಅಮೆರಿಕಕ್ಕೆ ತೆರಳಿದ್ದು, ಅರೆಕಾಲಿಕ ಕೆಲಸ ಮಾಡುತ್ತಿದ್ದರು.

# ಸೈಫ್ ಮೇಲಿನ ಹಲ್ಲೆ ಘಟನೆಯನ್ನು ಮರುಸೃಷ್ಟಿಸಿ ಪೊಲೀಸರ ತನಿಖೆ

**ಮುಂಬೈ:** ಮುಂಬೈ ಪೊಲೀಸರು ಇಂದು ಸೈಫ್ ಅಲಿಖಾನ್ ಅವರ ನಿವಾಸದಲ್ಲಿ ಬಂಧಿತ ಆರೋಪಿಯೊಂದಿಗೆ ಸೈಫ್ ಮೇಲಿನ ಹಲ್ಲೆ ನಡೆಸಿದ ದಶ್ಯವನ್ನು ಮರುಸಷ್ಟಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

20 ಅಧಿಕಾರಿಗಳ ತಂಡವು ನಾಲ್ಕು ಪೊಲೀಸ್ ವ್ಯಾನ್‌ಗಳಲ್ಲಿ ಬೆಳಿಗ್ಗೆ 5.30 ರ ಸುಮಾರಿಗೆ ಸದ್ಗುರು ಶರಣ್ ಕಟ್ಟಡವನ್ನು ತಲುಪಿತು ಮತ್ತು ಒಂದು ಗಂಟೆ ಕಾಲ ಆವರಣದಲ್ಲಿದ್ದರು ಎಂದು ಅಧಿಕಾರಿ ಹೇಳಿದರು.



ಆರೋಪಿ ಶರೀಫುಲ್ ಇಸ್ಲಾಂ ಶೆಹಜಾದ್ ಮೊಹಮದ್ ರೋಹಿಲ್ಲಾ ಅಮೀನ್ ಫಕೀರ್ ಅವರೊಂದಿಗೆ ಪೊಲೀಸ್ ತಂಡ ಮುಂಭಾಗದ ಗೇಟ್ ಮೂಲಕ ಕಟ್ಟಡವನ್ನು ಪ್ರವೇಶಿಸಿತು ಎಂದು ಅವರು ಹೇಳಿದರು. ನಂತರ, ಅವರು ಅವನನ್ನು ಬಾಂದ್ರಾ ರೈಲು ನಿಲ್ದಾಣಕ್ಕೆ ಕರೆದೊಯ್ದರು, ಅಲ್ಲಿಂದ ಅವನು ದಾದರ್‌ಗೆ ರೈಲಿನಲ್ಲಿ ಹೋಗಿದ್ದನು ಮತ್ತು ದಾಳಿಯ ನಂತರ ಅವನು ಮಲಗಿದ್ದ ಉದ್ಯಾನವನದ ಹೊರಗಿನ ಸ್ಥಳಗಳಿಗೂ ಆರೋಪಿಯನ್ನು ಕರೆದೊಯ್ಯಲಾಗುತ್ತಿದೆ.

ಖಾನ್ (54) ಅವರು ಜನವರಿ 16 ರಂದು ಕಟ್ಟಡದ 12 ಮಹಡಿಗಳ ಅಪಾರ್ಟ್‌ಮೆಂಟ್‌ನೊಳಗೆ ಒಳನುಗ್ಗುವವರಿಂದ ಪದೇ ಪದೇ ಇರಿದಿದ್ದು, ಶಸ್ತ್ರಚಿಕಿತ್ಸೆಯ ಅಗತ್ಯವಿತ್ತು. ವಿಜಯ್ ದಾಸ್ ಎಂದು ಹೆಸರು ಬದಲಿಸಿಕೊಂಡು ಅಕ್ರಮವಾಗಿ ಭಾರತದಲ್ಲಿ ನೆಲೆಸಿದ್ದ ಬಾಂಗ್ಲಾದೇಶದ ಪ್ರಜೆ ಫಕೀರ್ ಎಂಬಾತನನ್ನು ಪೊಲೀಸರು ಭಾನುವಾರ ನೆರೆಯ ಥಾಣೆ ನಗರದಲ್ಲಿ ಬಂಧಿಸಿದ್ದರು.

ಅಪರಾಧದ ದಶ್ಯವನ್ನು ಮರುಸಷ್ಟಿಸಿದ ನಂತರ ಮತ್ತು ಆರೋಪಿಗಳು ಓಡಿಹೋಗುವಾಗ ಭೇಟಿ ನೀಡಿದ ಸ್ಥಳಗಳಿಗೆ ಹೋದ ನಂತರ, ಫಕೀರ್‌ನನ್ನು ಬಾಂದ್ರಾ ಪೊಲೀಸ್ ಠಾಣೆಗೆ ಮರಳಿ ಕರೆತರಲಾಯಿತು, ಅಲ್ಲಿ ಅಧಿಕಾರಿಗಳು ಅವನನ್ನು ವಿಚಾರಣೆ ನಡೆಸುತ್ತಾರೆ ಎಂದು ಅಧಿಕಾರಿ ಹೇಳಿದರು.ಬಾಂದ್ರಾದ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಆರೋಪಿಯನ್ನು ಐದು ದಿನಗಳ ಪೊಲೀಸ್ ಕಸ್ಟಡಿಗೆ ನೀಡಿದೆ.

# ಮಹಾಕುಂಭದಲ್ಲಿ ಗಂಗಾ ಸ್ನಾನ ಮಾಡಿದ ಹಿಮಾ ದಾಸ್

**ಪ್ರಯಾಗ್‌ರಾಜ್:** ಸ್ಟಾರ್ ಓಟಗಾರ್ತಿ ಹಿಮಾ ದಾಸ್ ಅವರು ಇಲ್ಲಿನ ಮಹಾಕುಂಭಕ್ಕೆ ಭೇಟಿ ನೀಡಿ ಗಂಗಾನದಿಯ ಪವಿತ್ರ ನೀರಿನಲ್ಲಿ ಸ್ನಾನ ಮಾಡಿದರು. ಧಿಂಗ್ ಎಕ್ಸ್ ಪ್ರೆಸ್ ಎಂದು ಕರೆಯಲ್ಪಡುವ ಹಿಮಾ, ತನ್ನ ಆಧ್ಯಾತಿಕ ಗುರು ಕೇಶವ್ ದಾಸ್ ಜಿ ಮಹಾರಾಜ್ ಅವರಿಂದ ಆಶೀರ್ವಾದ ಪಡೆದ ನಂತರ ತನ್ನ ಸ್ನೇಹಿತರೊಂದಿಗೆ ಇಲ್ಲಿಗೆ ಬಂದಿದ್ದಾರೆ.



ಹಿಮಾ ಈಶಾನ್ಯ ಶಿಬಿರದ ಬಗ್ಗೆ (ಮಹಾ ಕುಂಭದಲ್ಲಿ) ತಿಳಿದುಕೊಂಡಾಗ, ಆಕೆಗೆ ಭೇಟಿ ನೀಡುವುದನ್ನು ತ'ಡ'ಂ'ಲು ಸಾಧ್ಯವಾಗಲಿಲ್ಲ. ಹಿಮಾ ತನ್ನ ಸ್ನೇಹಿತರೊಂದಿಗೆ ಬಂದು, ಗಂಗಾ ಸ್ನಾನ ಮಾಡಿ, ಹೊರಟು ಹೋದರು, ಎಂದು ಮಹಾರಾಜ್ ಪಿಟಿಐಗೆ ತಿಳಿಸಿದರು.

ಅವರು ಅನುಭವದ ಬಗ್ಗೆ ತುಂಬಾ ಉತ್ಸುಕರಾಗಿದ್ದರು ಮತ್ತು ನಾಮ್ಘರ್ ಅನ್ನು ನೋಡಲು ಬಂದರು. ಮೇಳಕ್ಕೆ ಅವರ ಭೇಟಿ ಸಂತೋಷಕರವಾಗಿತ್ತು ಎಂದು ಅವರು ಹೇಳಿದರು.

ಜಕಾರ್ತಾ ಏಷ್ಯನ್ ಗೇಮ್ಸ್ 2018 ರ ಚಿನ್ನದ ವಿಜೇತೆ ಹಿಮಾ, ಜುಲೈ 22, 2023 ರಿಂದ ನವೆಂಬರ್ 21, 2024 ರವರೆಗೆ ನಡೆದ 16 ತಿಂಗಳ ಅಮಾನತು ಅವಧಿಯ ನಂತರ ಈ ವರ್ಷ ಈವೆಂಟ್‌ಗಳಿಗೆ ಸಜ್ಜಾಗುತ್ತಿದ್ದಾರೆ.



# ಸದ್ದಿಲ್ಲದೇ ಮದುವೆಯಾದ ನೀರಜ್

**ಹೈದರಾಬಾದ್:** ಎರಡು ಬಾರಿ ಒಲಿಂಪಿಕ್ ಪದಕ ವಿಜೇತ ನೀರಜ್ ಚೋಪ್ರಾ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದಾರೆ. ಸಂಗಾತಿ ಹಿಮಾನಿ ಅವರನ್ನು ವರಿಸಿದ್ದಾಗಿ ನೀರಜ್ ಚೋಪ್ರಾ ಮದುವೆಯ ಮೊದಲ ಫೋಟೋಗಳನ್ನು ತಮ್ಮ ಸಾಮಾಜಿಕ ಜಾಲತಾಣದಲ್ಲಿ ಭಾನುವಾರ ಹಂಚಿಕೊಂಡಿದ್ದಾರೆ. ಆದರೆ ಎರಡು ದಿನಗಳ ಹಿಂದೆ ಮದುವೆ ಆಗಿದ್ದು, ಎಲ್ಲಿ ಮತ್ತು ಯಾವಾಗ ಎಂಬುದು ತಿಳಿದು ಬಂದಿಲ್ಲ.

"ನನ್ನ ಕುಟುಂಬದೊಂದಿಗೆ ಜೀವನದ ಹೊಸ ಅಧ್ಯಾಯ ಆರಂಭಿಸಿದೆ " ಎಂದು ನೀರಜ್ ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಬರೆದಿದ್ದಾರೆ.

"ಈ ಕ್ಷಣ ನಮ್ಮನ್ನು ಒಟ್ಟಿಗೆ ಸೇರಿಸಿದ ಪ್ರತಿ ಆಶೀರ್ವಾದಕ್ಕೂ ಕೃತಜ್ಞರಾಗಿರುತ್ತೇನೆ. ಪ್ರೀತಿಯಿಂದ ಬಂಧಿತರಾಗಿದ್ದು, ಯಾವಾಗಲೂ ಸಂತೋಷವಾಗಿರುತ್ತೇವೆ" ಎಂದು ಬಂಗಾರದ ಹುಡುಗ ನೀರಜ್ ಸಂತಸ ಹಂಚಿಕೊಂಡಿದ್ದಾರೆ. ಮದುವೆ ವಿಚಾರವನ್ನು ನೀರಜ್ ಬಹಿರಂಗಪಡಿಸಿರಲಿಲ್ಲ. ಆದರೆ ಎಕ್ಸ್ ಖಾತೆಯಲ್ಲಿ ಫೋಟೋ ಪೋಸ್ಟ್ ಮೂಲಕ ವಿವಾಹವಾದ ಸುದ್ದಿಯನ್ನು ನೀಡಿದ್ದಾರೆ.

ಭಾರತದಲ್ಲಿ ಎರಡು ದಿನಗಳ ಹಿಂದೆ ನೀರಜ್ ಮದುವೆ ನಡೆದಿದೆ. ಯಾವ ಸ್ಥಳದಲ್ಲಿ ವಿವಾಹವಾಗಿದೆ ಎಂದು ನನಗೆ ಹೇಳಲಾಗುವುದಿಲ್ಲ. ಸದ್ಯ ದಂಪತಿಗಳು ಹನಿಮೂನ್‌ಗೆ ತೆರಳಿದ್ದಾರೆ ಎಂದು ಹರಿಯಾಣದ ಪಾಣಿಪತ್ ಬಳಿಯ ಖಂದ್ರಾದಲ್ಲಿರುವ ತಮ್ಮ ಹಳ್ಳಿಯಿಂದ ಭೀಮ್ ಮಾಹಿತಿ ನೀಡಿದ್ದಾರೆ.

"ನೀರಜ್ ಪತ್ನಿ ಸೋನಿಪತ್ ಮೂಲದವರಾಗಿದ್ದು, ಅಮೆರಿಕದಲ್ಲಿ ಓದುತ್ತಿದ್ದಾರೆ. ಅವರು ಹನಿಮೂನ್‌ಗೆ ವಿದೇಶಕ್ಕೆ ಹೋಗಿದ್ದು, ಎಲ್ಲಿಗೆ ಹೋಗಿದ್ದಾರೆಂದು ನನಗೆ ಗೊತ್ತಿಲ್ಲ" ಎಂದು ಒಲಿಂಪಿಕ್ ಡಬಲ್ ಪದಕ ವಿಜೇತರೊಂದಿಗೆ ವಾಸಿಸುವ ಭೀಮ್ ತಿಳಿಸಿದ್ದಾರೆ.

ಜಾವೆಲಿನ್ ಎಸೆತದಲ್ಲಿ 2021ರ ಒಲಿಂಪಿಕ್ಸ್‌ನಲ್ಲಿ ನೀರಜ್ ಚಿನ್ನದ ಪದಕ ಗೆದ್ದಿದ್ದರು. ಈ ಮೂಲಕ ಈ ಸಾಧನೆ ಮಾಡಿದ ಮೊದಲ ಭಾರತೀಯ ಪಟು ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು. ಇನ್ನೂ ಕಳೆದ ವರ್ಷದ ನಡೆದ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಬೆಳ್ಳಿ ಪದಕ ಗೆದ್ದಿದ್ದರು.

ಒಲಿಂಪಿಕ್ ಬಂಗಾರದ ಹುಡುಗ ಮದುವೆ ವಿಚಾರ ಬಹಿರಂಗಪಡಿಸಿದ ಬೆನ್ನಲ್ಲೇ ಸಾಮಾಜಿಕ ಜಾಲತಾಣದಲ್ಲಿ

# ನಿದ್ದೆ ಎಂದು 'ನಿದ್ದೆ'ಗೆ ಜಾರಬೇಡಿ

ಸಾಮಾಜಿಕ ಜಾಲತಾಣದಲ್ಲಿ ದಿನಾ ಬೆಳಗಾದರೆ ಸಾಕು ಆ ಸ್ಟಾರ್ ಹಂಗೆ, ಈ ಸ್ಟಾರ್ ಹಿಂಗೇ ಎನ್ನುವಂತಹ ಬರಹಗಳು, ಸ್ಟಾರ್ ಸೆಲೆಬ್ರೆಟಿಗಳ ಕುರಿತಾದ ಟ್ರೋಲುಗಳು, ಕಿಂಡಲ್ಲುಗಳು ಬರುವುದು ಸರ್ವೇ ಸಾಮಾನ್ಯ. ಚಿತ್ರರಂಗದ ತಾರೆಯರನ್ನು ಅಷ್ಟೂ ಕಾಡದೇ ಇದ್ದರೆ ಹೇಗೆ ? ಎನ್ನುವುದು ಅನೇಕರ ಆಲೋಚನೆ.

ತಿಇನ್ನು ಇಂತಹ ಸಾಕಷ್ಟು ವಿಚಾರಗಳು ಕಣ್ಣಿಗೆ ಕಂಡಾಗ ತಮ್ಮ ಕುರಿತು ವಿವಾದಾತ್ಮಕವಾದ ಟ್ರೋಲ್ ಮಾಡಿದಾಗ ಅಥವಾ ತಮ್ಮನ್ನು ಹೀಯಾಳಿಸಿದಾಗ ಅನೇಕ ತಾರೆಯರು ಉರಿದು ಬೀಳುತ್ತಾರೆ. ಟ್ರೋಲ್ ಮಾಡಿದವರ ವಿರುದ್ಧ, ಕಾಲೆಳದೆವರ ವಿರುದ್ಧ, ಮನಸೋ ಇಚ್ಛೆ ಕಾಮೆಂಟ್ ಮಾಡಿದವರ ವಿರುದ್ಧ ಆಕ್ರೋಶ ವ್ಯಕ್ತಪಡಿಸುವುದಲ್ಲದೇ ಕೆಲವರು ಕಾನೂನಿನ ಮೊರೆ ಹೋಗುತ್ತಾರೆ. ಸೈಬರ್ ಕ್ರೈಮ್ ಅಡಿ ಪ್ರಕರಣವನ್ನು ಕೂಡ ದಾಖಲಿಸುತ್ತಾರೆ. ಆದರೆ ಇನ್ನೂ ಕೆಲವರು ಇಂತಹ ಯಾವ ಅನಗತ್ಯ ವಿಚಾರಕ್ಕೆ ತಲೆ ಕೆಡಿಸಿಕೊಳ್ಳದೇ ತಮ್ಮದೇ ಕೆಲಸಗಳಲ್ಲಿ ಬ್ಯುಸಿಯಾಗಿರುತ್ತಾರೆ.ಉದಾಹರಣೆಗೆ ನಿವೇದಿತಾ ಗೌಡ.

ಹೌದು, ಕ್ರಿಸ್ಮಸ್ ಮತ್ತು ಹೊಸ ವರ್ಷವನ್ನು ಬರಮಾಡಿಕೊಳ್ಳುವ ನೆಪದಲ್ಲಿ ಸಪ್ತಸಾಗರದಾಚೆ ಹೋಗಿ ತಮ್ಮ ಸೌಂದರ್ಯವನ್ನು ಧಾರಾಳವಾಗಿ ಪ್ರದರ್ಶನ ಮಾಡುತ್ತಲೇ ಸುದ್ದಿಯಾಗುತ್ತಾ ಅನೇಕರ ಕೆಂಗಣ್ಣಿಗೆ ಗುರಿಯಾಗುತ್ತಾ ಬರುತ್ತಿರುವ ನಿವೇದಿತಾ ಗೌಡ ಸದ್ಯ ಮತ್ತೊಂದು ವಿಡಿಯೋ ಹಂಚಿಕೊಂಡಿದ್ದಾರೆ. ಈ ಬಾರಿ ಕಡಲ ಕಿನಾರೆಯ ಬಳಿ ನಿಲ್ಲದೇ ಯಾವುದೋ ಇಂಗ್ಲೀಷ್ ಹಾಡಿಗೆ ಹೆಜ್ಜೆ ಹಾಕದೇ ಮಂಚದ ಮೇಲೆ ಅತ್ತಿಂದಿತ್ತ ಹೊರಳಾಡಿದ್ದಾರೆ.ಸದ್ಯ ಈ ವಿಡಿಯೋ ಅನೇಕರು ಬೆಚ್ಚಿ ಬಿದ್ದಿದ್ದಾರೆ. ಈ ಹುಡುಗಿಯನ್ನೇ ಚಂದನ್ ಶೆಟ್ಟಿ ಮದ್ವೆಯಾಗಿದ್ದಾ ? ಎನ್ನುವ ಅನುಮಾನವನ್ನು ವ್ಯಕ್ತಪಡಿಸುತ್ತಿದ್ದಾರೆ. ಎಂದಿನಂತೆ ನಿವೇದಿತಾ ಕಣ್ಣು ಮುಚ್ಚಿ ತೆರೆಯುವಷ್ಟರಲ್ಲಿ ಈ ವಿಡಿಯೋ ವೈರಲ್ ಆಗಿದೆ. ತರಹೇವಾರಿ ಅಭಿಪ್ರಾಯಗಳು ವ್ಯಕ್ತವಾಗಿವೆ. ಕೆಲವರು ನಿವೇದಿತಾ ಗೌಡ ಅವರನ್ನು ಬಾಲಿವುಡ್‌ನ ಉರ್ಫಿ ಜಾವೇದ್‌ಗೆ ಹೋಲಿಸಿದರೆ ಇನ್ನೂ ಕೆಲವರಿಗೆ ನಿವೇದಿತಾ ಗೌಡ ಅವರ ಈ ಫೋಟೊಗಳನ್ನು ನೋಡಿದ ನಂತರ ಮಿಯಾ ಖಲೀಫಾ ನೆನಪಾಗಿದ್ದಾರೆ. ಎಂದಿನಂತೆ ಇನ್ನು ಹಲವರು ಚಂದನ್ ಶೆಟ್ಟಿ ಅವರ ಹೆಸರನ್ನು ಪ್ರಸ್ತಾಪಿಸುತ್ತಿದ್ದಾರೆ. ಕೆಟ್ಟ ಕಾಮೆಂಟ್‌ಗಳನ್ನು ಮಾಡುವ ಮೂಲಕ ನಿವೇದಿತಾ ಗೌಡ ಅವರನ್ನು ನಿಂದಿಸುತ್ತಿದ್ದಾರೆ. ಇನ್ನೂ ಈ ಕಣ್ಣಲ್ಲಿ ಏನೇನ್ ನೋಡಬೇಕೋ ಎಂದು ಕಾಮೆಂಟ್‌ಗಳನ್ನು ಮಾಡುತ್ತಿದ್ದಾರೆ. ಅಂದ್ಹಾಗೇ ನಿವೇದಿತಾ ಗೌಡ ಸಪ್ತಸಾಗರದಾಚೆ ತಾವೊಬ್ಬರೇ ಪ್ರವಾಸಕ್ಕೆ ತೆರಳಿರುವುದಾಗಿ ಹೇಳಿದ್ದರು. ಆದರೆ, ತಮ್ಮ ಈ ಸೋಲೋ ಟ್ರಿಪ್‌ನ ಇಂಚಿಂಚೂ ವಿವರಗಳನ್ನು ಫೋಟೊ ಮೂಲಕ ಹಂಚಿಕೊಳ್ಳುತ್ತಿದ್ದಾರೆ. ಈ ಕಾರಣಕ್ಕೆ ಅನೇಕರಿಗೆ ಈಗ ನಿವೇದಿತಾ ಗೌಡ ಅವರ ಫೋಟೊ ತೆಗೆಯುತ್ತಿರುವ ವ್ಯಕ್ತಿಯಾದರೂ ಯಾರು ಎನ್ನುವ ಪ್ರಶ್ನೆ ಕಾಡುತ್ತಿದೆ. ಯಾರು ಗುರು ಫೋಟೊಗ್ರಾಫರ್ ಎನ್ನುವ ಕಾಮೆಂಟ್ ಜೊತೆ ಕೊಳಕು ಅಸಹ್ಯ ಅಭಿಪ್ರಾಯಗಳು ಕಣ್ಣಿಗೆ ರಾಚುತ್ತಿವೆ.

ಇನ್ನು , ಕ್ರಿಸ್ಮಸ್ ಹಬ್ಬದ ಸುತ್ತ ಮುತ್ತ ನಿವೇದಿತಾ ಗೌಡ ಕಟ್ಟು ಮಸ್ತಾದ ಯುವಕನೊಬ್ಬನ ಜೊತೆ ಬಾನಂಗಳದಲ್ಲಿ ಆಕಾಶಬುಟ್ಟಿಯ ಉಡಾವಣೆಯನ್ನು ಮಾಡಿದ್ದರು. ತಮ್ಮ ಮನದ ಆಸೆ–ಆಕಾಂಕ್ಷೆಗಳೆಲ್ಲ ಈಡೇರಲಿ ಎಂಬ ಪ್ರಾರ್ಥನೆಯನ್ನು ಮಾಡಿದ್ದರು. ಹೀಗಾಗಿ ಬಹುಶಃ ಆ ಸಿಕ್ಸ್ ಪ್ಯಾಕ್ ಸುಂದರನೇ ನಿವೇದಿತಾ ಅವರ ಈ ವಿಡಿಯೋಗಳನ್ನೆಲ್ಲ ಚಿತ್ರೀಕರಿಸುತ್ತಿರಬಹುದಾ ಎನ್ನುವ ಅನುಮಾನ ಅನೇಕರದ್ದು. ವೃತ್ತಿಯಲ್ಲಿ ಫೋಟೊಗ್ರಫರ್ ಕೂಡ ಆ ವ್ಯಕ್ತಿಯಾಗಿರುವ ಹಿನ್ನೆಲೆ ಈ ಸಾಧ್ಯತೆಯನ್ನು ಅಲ್ಲಗೆಳೆಯುವಂತೆ ಇಲ್ಲ ಎನ್ನುತ್ತಿದ್ದಾರೆ ಅನೇಕರು. ಸದ್ಯ ಈ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದು ನಾಲ್ಕು ಘಂಟೆಗಳಲ್ಲಿ ನಲವತ್ತು ಸಾವಿರಕ್ಕೂ ಅಧಿಕ ಜನ ಈ ವಿಡಿಯೋವನ್ನು ಮೆಚ್ಚಿಕೊಂಡಿದ್ದಾರೆ.



# ನಿರಾಸೆ ಮೂಡಿಸಿದ ಸೇತುಪತಿ ಚಿತ್ರ!



ವೆಟ್ರಿಮಾರನ್ ನಿರ್ದೇಶನದ, ಸೂರಿ ಮತ್ತು ವಿಜಯ್ ಸೇತುಪತಿ ಅಭಿನಯದ ವಿಡುತಲೈ ಚಿತ್ರದ ಮೊದಲ ಭಾಗ 2023 ರಲ್ಲಿ ಬಿಡುಗಡೆಯಾಗಿ ಬ್ಲಾಕ್ ಬಸ್ಟರ್ ಆಗಿತ್ತು. ವಿಜಯ್ ಸೇತುಪತಿ ಪಾತ್ರವನ್ನು ಕೇಂದ್ರೀಕರಿಸಿದ ಎರಡನೇ ಭಾಗ ಡಿಸೆಂಬರ್‌ನಲ್ಲಿ ಬಿಡುಗಡೆಯಾಯಿತು.

ಮಂಜು ವಾರಿಯರ್ ವಿಜಯ್ ಸೇತುಪತಿಗೆ ಜೋಡಿಯಾಗಿದ್ದಾರೆ. ಚಿತ್ರದಲ್ಲಿ ಕೆನ್ ಕರುಣಾಸ್, ಗೌತಮ್ ಮೆನನ್, ವೇಲ್ ರಾಜ್, ತಮಿಳ್ ಮತ್ತು ರಾಜೀವ್ ಮೆನನ್ ಸಹ ನಟಿಸಿದ್ದಾರೆ. ಇಳಯರಾಜ ಸಂಗೀತ ಸಂಯೋಜಿಸಿದ್ದು, ಎಲ್ರೆಡ್ ಕುಮಾರ್ ನಿರ್ಮಿಸಿದ್ದಾರೆ. ಎರಡನೇ ಭಾಗ ಮೊದಲ ಭಾಗದಷ್ಟು ಯಶಸ್ವಿಯಾಗಲಿಲ್ಲ. ಚಿತ್ರವು ಚಿತ್ರಮಂದಿರಗಳಲ್ಲಿ ಉತ್ತಮ ಪ್ರದರ್ಶನ ಕಾಣಲಿಲ್ಲ. ಜಇಇ5 ಔಖಿಖಿ ಹಕ್ಕುಗಳನ್ನು ಪಡೆದುಕೊಂಡಿತ್ತು. ವೆಟ್ರಿಮಾರನ್ ಔಖಿಖಿಯಲ್ಲಿ ಹೆಚ್ಚುವರಿ ಒಂದು ಗಂಟೆಯ ನಿರ್ದೇಶಕರ ಕಟ್ ಅನ್ನು ಬಿಡುಗಡೆ ಮಾಡುವುದಾಗಿ ಹೇಳಿದ್ದರು, ಇದರಿಂದಾಗಿ 3 ಗಂಟೆ 45 ನಿಮಿಷಗಳ ಆವೃತ್ತಿಯ ನಿರೀಕ್ಷೆ ಇತ್ತು. ಆದರೆ, ಅನಿರೀಕ್ಷಿತವಾಗಿ ಅಮೆಜಾನ್ ಪ್ರೈಮ್‌ನಲ್ಲಿ ಬಿಡುಗಡೆಯಾಯಿತು. ವಿಡುತಲೈ ಭಾಗ 2 ಅಮೆಜಾನ್ ಪ್ರೈಮ್‌ನಲ್ಲಿ ಬಿಡುಗಡೆಯಾಗಿದೆ. ಅನ್‌ಕಟ್ ಆವೃತ್ತಿಯಲ್ಲ, ಚಿತ್ರಮಂದಿರಗಳ ಆವೃತ್ತಿಯನ್ನು ಬಿಡುಗಡೆ ಮಾಡಲಾಗಿದೆ, ಇದು ಅಭಿಮಾನಿಗಳಿಗೆ ನಿರಾಸೆ ಮೂಡಿಸಿದೆ. ಜಇಇ5 ನಿಂದ ಅಮೆಜಾನ್ ಪ್ರೈಮ್‌ಗೆ ಬದಲಾವಣೆಯಾದ ಕಾರಣ ಸ್ಪಷ್ಟವಾಗಿಲ್ಲ.

# 1 ವರ್ಷ ಹಾಡಲು ಮಾತನಾಡಲು ಆಗುತ್ತಿರಲಿಲ್ಲ

ಕನ್ನಡ ಚಿತ್ರರಂಗದ ಹೆಸರಾಂತ ಗಾಯಕಿ ಅರ್ಚನಾ ಉಡುಪ ಒಂದು ವರ್ಷಗಳ ಕಾಲ ಆರೋಗ್ಯದ ವಿಚಾರವಾಗಿ ಎದುರಿಸಿದ ಸವಾಲುಗಳನ್ನು ಹಂಚಿಕೊಂಡಿದ್ದಾರೆ. ಯಾಕೆ ಕಾರ್ಯಕ್ರಮಗಳು ಮಿಸ್ ಆಯ್ತು? ಯಾಕೆ ಧ್ವನಿ ಸರಿಯಾಗಲಿಲ್ಲ? ಯಾವ ವೈದ್ಯರು ಸಹಾಯ ಮಾಡಿದ್ದರು? ಸಂಪೂರ್ಣವಾಗಿ ವಿವರಿಸಿದ್ದಾರೆ.

'ನಮ್ಮ ಕ್ಷೇತ್ರದಲ್ಲಿ ಕಾಂಪಿಟೇಷನ್ ವಿಚಾರದಲ್ಲಿ ಬಹಳಷ್ಟು ಕಡೆ ಹೆಲ್ತಿ ಕಾಂಪಿಟೇಷನ್ ಸಿಗುತ್ತದೆ ಬಹಳಷ್ಟು ಕಡೆ ಅನ್‌ಹೆಲ್ತಿ ಕಾಂಪಿಟೇಷನ್‌ಗಳು ಇರುತ್ತದೆ. ಯಾರನ್ನಾದರೂ ಸರಿಯಾದ ದಾರಿಯಲ್ಲಿ ಓವರ್ ಟೇಕ್ ಮಾಡಲು ಆಗುತ್ತಿಲ್ಲ ಅಂದ್ರೆ ಎಲ್ಲಾ ರೀತಿಯಲ್ಲಿ ಶಾರ್ಟ್ ಕಟ್‌ಗಳು ಬರುತ್ತೆ. ಪ್ರಮುಖವಾಗಿ ಮಹಿಳೆಯರಿಗೆ ಕ್ಯಾರೆಕ್ಟ್ ಅಸಾಸಿನೇಷನ್ ಮಾಡೋದು ಇದ್ದೇ ಇರುತ್ತದೆ. ನಾನು ಕೂಡ ಅದನ್ನು ಎದುರಿಸಿದ್ದೀನಿ. ಆ ಸಮಯದಲ್ಲಿ ನನ್ನ ಪತಿ ನನ್ನ ಪರವಾಗಿ ಬಲವಾಗಿ ನಿಂತಿದ್ದ ಕಾರಣ ಅಷ್ಟೋಂದು ಅಫೆಕ್ಟ್ ಆಗಲಿಲ್ಲ. ಈಗ ಯಾರಾದರೂ ಮಾತನಾಡುತ್ತಿದ್ದಾರಾ...ನನ್ನ ಹಿಂದೆ ಇದ್ದಾರೆ ಅಂದುಕೊಂಡು ಮಾತನಾಡಿಕೊಳ್ಳಲಿ ಅಂತ 'ಬಿಟ್ಟುಬಿಡುತ್ತೀನಿ' ಎಂದು ಬುಕ್ ಬ್ರಹ್ಮ ಗಂಧದಬೀಡು ಸಂದರ್ಶನದಲ್ಲಿ ಅರ್ಚನಾ ಮಾತನಾಡಿದ್ದಾರೆ.

'ತುಂಬಾ ದೊಡ್ಡದಾಗಿ ಹೊಡೆತ ಬಿದ್ದಿದ್ದು ಅಂದ್ರೆ...ಆಗ ಹೈ ಪಿಚ್ ಹಾಡುಗಳು ಅಂದ್ರೆ ಅರ್ಚನಾಳನ್ನು ಕರೆಯಿರಿ ಎನ್ನುತ್ತಿದ್ದರು. ಎಷ್ಟು ಕಿರುಚುತ್ತಿದ್ದೆ ಅಂದ್ರೆ ಅದನ್ನು ಹಾಡುವುದು ಅಂತ ಹೇಳಲು ಆಗುತ್ತಿರಲಿಲ್ಲ. ಆಗ ಜೋಶ್‌ನಲ್ಲಿ ಹಾಡುತ್ತಿದ್ದೆ ಆದರೆ ಒಂದು ಸಮಯದಲ್ಲಿ ಗಂಟಲಿನಲ್ಲಿ ನೋವು ಕಾಣಿಸಿಕೊಂಡಿತ್ತು. ನಾಲ್ಕು ನಾಲ್ಕು ಗಂಟೆ ಕಾರ್ಯಕ್ರಮಗಳಲ್ಲಿ ಹಾಡುವಾಗ ನೋವು ಬರುತ್ತಿತ್ತು ಎಂದು ಅಪ್ಪನಿಗೆ ಹೇಳುತ್ತಿದ್ದೆ. ನಾನು ಮಾತನಾಡುತ್ತಿದ್ದ ಕಾರಣ ರೆಸ್ಟ್ ಮಾಡು ಕಷಾಯ ಎಂದು ಕೊಡುತ್ತಿದ್ದರು.

ಒಂದು ದಿನ ಕಾರ್ಯಕ್ರಮದಲ್ಲಿ ರೆಡಿಯಾಗಿದ್ದೀನಿ ಚಪ್ಪಲಿ ಹಾಕಿಕೊಳ್ಳುವ ಸಮಯದಲ್ಲಿ ಒಂದು ಕೆಮ್ಮು ಬಂತು...ಅದಾದ ಮೇಲೆ ನನ್ನ ಧ್ವನಿ ಬರುತ್ತಿಲ್ಲ. ಎಲ್ಲ ರೀತಿಯಲ್ಲೂ ಧ್ವನಿ ಸರಿ ಮಾಡಿಕೊಂಡೆ ದಾರಿ ಉದ್ದಕ್ಕೂ ಹೋದೆ.. ವೇದಿಕೆ ಮೇಲೆ ಹೆದರಿಕೊಂಡು ಹಾಡಲು ಶುರು ಮಾಡಿದೆ. ಆಗ ಮೂರು ಮೂರು ಧ್ವನಿ ಬರುತ್ತಿತ್ತು. ಇಡೀ ಕಾರ್ಯಕ್ರಮ ಕಣ್ಣೀರಿಟ್ಟು ಕುಳಿತಿದ್ದೆ' ಎಂದು ಅರ್ಚನಾ ಹೇಳಿದ್ದಾರೆ.

> 'ಒಂದು ದಿನ ಕಾರ್ಯಕ್ರಮದಲ್ಲಿ ರೆಡಿಯಾಗಿದ್ದೀನಿ ಚಪ್ಪಲಿ ಹಾಕಿಕೊಳ್ಳುವ ಸಮಯದಲ್ಲಿ ಒಂದು ಕೆಮ್ಮು ಬಂತು...ಅದಾದ ಮೇಲೆ ನನ್ನ ಧ್ವನಿ ಬರುತ್ತಿಲ್ಲ. ಎಲ್ಲ ರೀತಿಯಲ್ಲೂ ಧ್ವನಿ ಸರಿ ಮಾಡಿಕೊಂಡೆ ದಾರಿ ಉದ್ದಕ್ಕೂ ಹೋದೆ.. ವೇದಿಕೆ ಮೇಲೆ ಹೆದರಿಕೊಂಡು ಹಾಡಲು ಶುರು ಮಾಡಿದೆ. ಆಗ ಮೂರು ಮೂರು ಧ್ವನಿ ಬರುತ್ತಿತ್ತು. ಇಡೀ ಕಾರ್ಯಕ್ರಮ ಕಣ್ಣೀರಿಟ್ಟು ಕುಳಿತಿದ್ದೆ'

'ನಾನು ತೆಗೆದುಕೊಳ್ಳದ ಔಷಧಿಗಳು ಇಲ್ಲ ಎಲ್ಲಾ ಪ್ರಯತ್ನಗಳನ್ನು ಮಾಡಿದ್ದೀನಿ. ನನಗೆ ತಿಂಗಳು ಪೂರ್ತಿ ಕಾರ್ಯಕ್ರಮಗಳು ಇತ್ತು ಆದರೆ ಧ್ವನಿ ಸರಿಯಾಗುತ್ತಿರಲಿಲ್ಲ. ಆ ಸಮಯದಲ್ಲಿ ವೈದ್ಯರ ಜೊತೆ ಮಾತುಕತೆ ಮಾಡಿದ ಮೇಲೆ ಏನಿದು ಈ ರೀತಿ ನಾಡ್ಯೂಲ್ಸ್ ಆಗಿದೆ ಆಪರೇಷನ್ ಮಾಡಬೇಕು ಎಂದರು. ಆಪರೇಷನ್ ಮಾಡಿದ್ರೂ ಧ್ವನಿ ಬರುತ್ತಾ ಇಲ್ವೋ ಗೊತ್ತಿಲ್ಲ ಅಂದ್ರು ಅಲ್ಲಿ ಕಣ್ಣೀರಿಟ್ಟುಕೊಂಡು ಹೊರ ಬಂದೆ. ದಿನ ನಾನು ಅಳಲು ಶುರು ಮಾಡಿದೆ...ಅದಕ್ಕೆ ಅಪ್ಪ ಹೇಳಿದ್ದರು...ನಿನಗೆ ನನ್ನ ಬ್ಯಾಂಕ್‌ನಲ್ಲಿ ಕೆಲಸ ಕೊಡಿಸುತ್ತೀನಿ ಸಮಯ ಸರಿ ಹೋಗುತ್ತದೆ ಎಂದುಬಿಟ್ಟರು. ಅಪ್ಪನೇ ನನ್ನನ್ನು ಬಿಟ್ಟುಕೊಟ್ಟರು ಎಂದು ಸಹಿಸಿಕೊಳ್ಳಲು ಆಗಲಿಲ್ಲ. ಅದಾದ ಮೇಲೆ ಒಬ್ಬರು ಎಕ್ಸ್ ಚೀಫ್ ಜಸ್ಟಿಸ್ ಅವರು ನಮಗೆ ಫ್ಯಾಮಿಲಿ ರೀತಿ. ನನ್ನ ಜೀವನದಲ್ಲಿ ನಡೆಯುತ್ತಿರುವುದನ್ನು ನೋಡಿ ಅವರು ಆಲೋಪಥಿ ವೈದ್ಯರನ್ನು ಸಂಪರ್ಕ ಮಾಡಲು ಹೇಳಿದ್ದರು. ಒಂದು ತಿಂಗಳಿಗೆ ಔಷದಿ ಕೊಟ್ಟರು...ನಾಲ್ಕು ತಿಂಗಳಲ್ಲಿ ನಾನು ಆರಾಮ್ ಆದೆ' ಎಂದಿದ್ದಾರೆ ಅರ್ಚನಾ.



ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-55 Email-mussanje2010@gmail.com, Phone: 9448074878